ಸಂಪುಟ: ೦೭/ ಸಂಚಿಕೆ: ೨೦೭/ ಬುಧವಾರ ದಿನಾಂಕ : ೦೮-೧೦-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 207/WEDNESDAY Date : 08-10-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ಉ.ಕರ್ನಾಟಕ ಭಾಗದಲ್ಲಿ ಸಾಧಾರಣ ಮಳೆ ಸಂಭವ

**ಬೆಂಗಳೂರು:** ಕರ್ನಾಟಕದ ವಿವಿಧೆಡೆ ಇಂದು ಗಾಳಿ ಸಹಿತ ಉತ್ತಮ ಮಳೆ ಆಗುವ ನಿರೀಕ್ಷೆ ಇದ್ದು ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ. ಕರಾವಳಿ ಜಿಲ್ಲೆಗಳಲ್ಲಿ ಭಾರೀ ಮಳೆಯಾಗಲಿದ್ದು, ಉತ್ತರ ಕರ್ನಾಟಕ ಭಾಗದಲ್ಲಿ ಸಾಧಾರಣ ಮಳೆಯಾಗಲಿದೆ. ನೆರೆ ರಾಜ್ಯ ಮಹಾರಾಷ್ಟ್ರದಲ್ಲಿ ರೆಡ್ ಅಲರ್ಟ್ ಹಿನ್ನಲೆ ಗಡಿ ಜಿಲ್ಲೆಗಳಲ್ಲೂ ಉತ್ತಮ ಮಳೆ ನಿರೀಕ್ಷೆ ಇದೆ. ಉಳಿದ ಜಿಲ್ಲೆಗಳಲ್ಲಿ ಭಾಶಶಃ ಮೋಡ ಕವಿದ ವಾತಾವರಣ ಅಥವಾ ಸಣ್ಣ ಪ್ರಮಾಣದಲ್ಲಿ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

**ಎಲ್ಲೆಲ್ಲಿ ಮಳೆ:** ಕರಾವಳಿ ಜಿಲ್ಲೆಗಳಾದ ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಭಾರಿ ಮಳೆಯ ನಿರೀಕ್ಷೆ ಇದೆ. ಗಾಳಿ ವೇಗ ಗಂಟೆಗೆ 30–40 ಕಿ.ಮೀ ಇರುವ ಸಾಧ್ಯತೆ ಇರುವ ಕಾರಣ ಕೆಲವು ಪ್ರದೇಶಗಳಲ್ಲಿ ಗಾಳಿ ಸಹಿತ ಮಳೆಯನ್ನೂ ನಿರೀಕ್ಷಿಸಲಾಗಿದೆ. ಉತ್ತರ ಕರ್ನಾಟಕದ ಜಿಲ್ಲೆಗಳಾದ ಬಾಗಲಕೋಟೆ, ಬೆಳಗಾವಿ, ಧಾರವಾಡ, ಗದಗ, ಹಾವೇರಿ, ಕೊಪ್ಪಳ ಮತ್ತು ರಾಯಚೂರಿನಲ್ಲಿ ಸಾಧಾರಣ ಮಳೆ ಆಗಲಿದ್ದು, ಹೆಚ್ಚು ಗಾಳಿ ಇರಲಿದೆ. ಬೀದರ್, ಕಲಬುರಗಿ, ಯಾದಗಿರಿ ಮತ್ತು ವಿಜಯಪುರ ಜಿಲ್ಲೆಗಳಲ್ಲಿ ಸಣ್ಣ ಪ್ರಮಾಣದಲ್ಲಿ ಮಳೆ ಆಗಲಿದೆ.

ಶಿವಮೊಗ್ಗದಲ್ಲಿ ಭಾಗಶಃ ಮೋಡ ಕವಿದ ವಾತಾವರಣ ಇರಲಿದ್ದು, ಗರಿಷ್ಠ 30 ಡಿಗ್ರಿ ಸೆಲ್ಸಿಯಸ್ ಮತ್ತು ಕನಿಷ್ಠ 21 ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ಇರಲಿದೆ. ಶೇ. 25ರಷ್ಟು ರಾತ್ರಿ ವೇಳೆ ಮಳೆಯಾಗುವ ಸಾಧ್ಯತೆ ಇದೆ. ರಾಮನಗರ ಮತ್ತು ಚಿತ್ರದುರ್ಗ ಜಿಲ್ಲೆಗಳಲ್ಲಿ ಮೋಡ ಕವಿದ ವಾತಾವರಣ ಇರಲಿದ್ದು, ಅಲ್ಲಲ್ಲಿ ಮಳೆ ಆಗಬಹುದು ಎಂದು ಹವಾಮಾನ ಇಲಾಖೆ ತಿಳಿಸಿದೆ.

**ಬೆಂಗಳೂರಲ್ಲೂ ಮಳೆ:** ರಾಜಧಾನಿ ಬೆಂಗಳೂರಲ್ಲಿಯೂ ನಾಳೆ ತುಂತುರು ಮಳೆಯಾಗುವ ಸಾಧ್ಯತೆ ಇದೆ. ಬೆಳಗ್ಗೆಯಿಂದ ಮಧ್ಯಾಹ್ನದ ಅವಧಿಯಲ್ಲಿ ಸಾಮಾನ್ಯ ಮಳೆ ಆಗಲಿದ್ದು, ಸಂಜೆ ವೇಳೆ ಗಾಳಿ ಸಹಿತ ಮಳೆ ಸುರಿಯಲಿದೆ.

# ಸಾಮಾಜಿಕ ಶೈಕ್ಷಣಿಕ ಸಮೀಕ್ಷೆ

## ಅ.18 ರವರೆಗೆ ಸರ್ಕಾರಿ, ಅನುದಾನಿತ ಶಾಲೆಗಳಿಗೆ ರಜೆ ವಿಸ್ತರಣೆ

**ಬೆಂಗಳೂರು:** ಸಾಮಾಜಿಕ ಹಾಗೂ ಶೈಕ್ಷಣಿಕ ಸಮೀಕ್ಷೆ ಪೂರ್ಣಗೊಳಿಸಲು ಅ.18ರವರೆಗೆ ಸರ್ಕಾರಿ, ಅನುದಾನಿತ ಶಾಲೆಗಳಿಗೆ ದಸರಾ ರಜೆ ವಿಸ್ತರಿಸಲು ತೀರ್ಮಾನಿಸಲಾಗಿದೆ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದ್ದಾರೆ.

ಕರ್ನಾಟಕ ರಾಜ್ಯ ಸಾಮಾಜಿಕ ಮತ್ತು ಶೈಕ್ಷಣಿಕ ಆಯೋಗವು ನಡೆಸುತ್ತಿರುವ ಸಮೀಕ್ಷೆ ಪ್ರಗತಿ ಕುರಿತು ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ವಿಧಾನಸೌಧದಲ್ಲಿ ಮಂಗಳವಾರ ಸಭೆ ನಡೆಸಿದರು.

ಸಭೆಯ ಬಳಿಕ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಸಿಎಂ ಸಿದ್ದರಾಮಯ್ಯ, ಸೆಪ್ಟೆಂಬರ್ 22 ರಿಂದ ಸಾಮಾಜಿಕ ಶೈಕ್ಷಣಿಕ ಸಮೀಕ್ಷೆ ಆರಂಭಿಸಿದ್ದೆವು. ಅಕ್ಟೋಬರ್ 7ರಂದು ಮುಕ್ತಾಯಕ್ಕೆ ತೀರ್ಮಾನಿಸಿದ್ದೆವು. ಸಮೀಕ್ಷೆ ಇವತ್ತು ಮುಗಿಯಬೇಕಿತ್ತು. ಕೆಲವು ಜಿಲ್ಲೆಗಳಲ್ಲಿ ಪೂರ್ತಿ ಆಗಿಲ್ಲ. ಕೊಪ್ಪಳ ಶೇ.97 ಆಗಿದ್ದರೆ, ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಶೇ.67 ರಷ್ಟು ಆಗಿದೆ. ಹೀಗೆ ವ್ಯತ್ಯಾಸಗಳಿವೆ. ಹೀಗಾಗಿ ಶಿಕ್ಷಣ ಇಲಾಖೆ ಮತ್ತು ಹಿಂದುಳಿದ ವರ್ಗಗಳ ಆಯೋಗ ಚರ್ಚಿಸಿವೆ. 1 ಲಕ್ಷ 20 ಸಾವಿರ ಶಿಕ್ಷಕರು ಸೇರಿ ಒಂದು ಲಕ್ಷ ಅರವತ್ತು ಸಾವಿರ ಸಿಬ್ಬಂದಿ ಸಮೀಕ್ಷೆಯಲ್ಲಿ ತೊಡಗಿದ್ದಾರೆ ಎಂದರು.

ವಿಧಾನ ಪರಿಷತ್ ಸದಸ್ಯ ಪುಟ್ಟಣ್ಣ ಮತ್ತು ಶಿಕ್ಷಕರ ಸಂಘ ಹೆಚ್ಚುವರಿಯಾಗಿ 10 ದಿನಗಳ ಕಾಲಾವಕಾಶ ಕೇಳಿ ಮನವಿ ಮಾಡಿದ್ದಾರೆ. ಈ ಮನವಿ ಪುರಸ್ಕರಿಸಿ ಅಕ್ಟೋಬರ್ 18 ರವರೆಗೆ ಸರ್ಕಾರಿ, ಅನುದಾನಿತ ಶಾಲೆಗಳಿಗೆ ರಜೆ ಘೋಷಿಸಿದ್ದೇವೆ. ಇದೇ 12ನೇ ತಾರೀಕಿನಿಂದ ದ್ವಿತೀಯ ಪಿಯು ಮಧ್ಯಂತರ ಪರೀಕ್ಷೆ ನಡೆಯುತ್ತಿರುವುದರಿಂದ ಸಮೀಕ್ಷೆ ಕಾರ್ಯದಿಂದ




ಪಿಯುಸಿ ಉಪನ್ಯಾಸಕರಿಗೆ ವಿನಾಯ್ತಿ ನೀಡಲಾಗಿದೆ ಎಂದು ತಿಳಿಸಿದರು.

**ಬೆಂಗಳೂರಲ್ಲಿ ಅ.19ತನಕ ಸಮೀಕ್ಷೆ:** ಬೆಂಗಳೂರು ನಗರದಲ್ಲಿ 6700 ಜನ ಶಿಕ್ಷಕರು ಸಮೀಕ್ಷೆಯಲ್ಲಿ ತೊಡಗಿಸಿಕೊಂಡಿದ್ದಾರೆ. ಬೆಂಗಳೂರಿನಲ್ಲಿ 46 ಲಕ್ಷ ಮನೆಗಳಿವೆ. ದಿನಕ್ಕೆ 10–15 ಮನೆಗಳ ಸಮೀಕ್ಷೆ ನಡೆಸುವ ಗುರಿ ನೀಡಲಾಗಿದೆ. ಬೆಂಗಳೂರಿನಲ್ಲಿ ನರಕ ಚತುರ್ದಶಿ ಒಳಗೆ ಸಮೀಕ್ಷೆ ಮುಗಿಸಲು ಸೂಚಿಸಲಾಗಿದೆ. ಶಿಕ್ಷಕರು ಕೂಡ ಅ.19ರೊಳಗೆ ಸಮೀಕ್ಷೆ ಮುಗಿಸುವ ಭರವಸೆ ನೀಡಿದ್ದಾರೆ ಎಂದು ತಿಳಿಸಿದರು. ಸಮೀಕ್ಷೆಯಲ್ಲಿ ತೊಡಗಿಸಿಕೊಳ್ಳಲು ಒಪ್ಪದ, ಹಿಂದೇಟು ಹಾಕುವವರ ವಿರುದ್ಧ ಸರ್ಕಾರ ಶಿಸ್ತಿನ ಕ್ರಮ ಕೈಗೊಳ್ಳಲಿದೆ. ಜಿಬಿಎ ಏರಿಯಾದಲ್ಲಿ ಚುನಾವಣಾ ಆಯೋಗದ ಕೆಲಸ ಮತ್ತು ಇತರೆ ತರಬೇತಿ ಇದ್ದಿದ್ದರಿಂದ ಸಮೀಕ್ಷೆ ತಡವಾಗಿ ಶುರುವಾಗಿದೆ. ಆದ್ದರಿಂದ ಜಿಬಿಎ ಏರಿಯಾದಲ್ಲಿ ಸಮೀಕ್ಷೆ ಪ್ರಮಾಣ ಕಡಿಮೆ ಇದೆ ಎಂದು ಮಾಹಿತಿ ನೀಡಿದರು. ಇದೇ ವೇಳೆ ಮಾತನಾಡಿದ ಡಿಸಿಎಂ ಡಿ.ಕೆ.ಶಿವಕುಮಾರ್, ಸರ್ವೇ ಬಗ್ಗೆ ಮಾಹಿತಿ ಪಡೆದುಕೊಂಡಿದ್ದಾರೆ. ಗ್ರಾಮೀಣ ಪ್ರದೇಶಗಳಲ್ಲಿ ಸರ್ವೇ ಬಹುತೇಕ ಪೂರ್ಣವಾಗಿದೆ. ಗ್ರೇಟರ್ ಬೆಂಗಳೂರು ನಗರದಲ್ಲಿ ತಡವಾಗಿ ಸರ್ವೇ ಆಗ್ತಿದೆ. 40% ಸರ್ವೇ ಆಗಿದೆ. ಶಿಕ್ಷಣ ಇಲಾಖೆ, ಅಧಿಕಾರಿಗಳ ಜತೆ ಚರ್ಚಿಸಿದ್ದೇವೆ. ಬೆಂಗಳೂರು ನಗರದಲ್ಲಿರುವವರು ಸಹಕಾರ ನೀಡಬೇಕು. ಆನ್ ಲೈನ್‌ನಲ್ಲಿ ಕೂಡ ಮಾಹಿತಿ ನೀಡಬಹುದು. ನಾವು ಒತ್ತಡ ಹಾಕುವುದಿಲ್ಲ. ಗ್ರಾಮೀಣ ಪ್ರದೇಶದಲ್ಲಿ ಆಗಿರುವ ಬದಲಾವಣೆ ತಿಳಿಯುವ ಕೆಲಸ ಮಾಡಲಾಗ್ತಿದೆ. ಈ ರಜೆ ವಿಸ್ತರಣೆಯನ್ನು ಸರಿದೂಗಿಸಲು ಶಿಕ್ಷಕರು ವಿಶೇಷ ಬೋಧನಾ ತರಗತಿಗಳ ಮೂಲಕ ಪಠ್ಯ ಪೂರ್ಣಗೊಳಿಸಲಿದ್ದಾರೆ ಎಂದರು.

ಸಭೆಯಲ್ಲಿ ಪ್ರಾಥಮಿಕ ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರು ವಿಡಿಯೋ ಕಾನ್ಫರೆನ್ಸ್ ಮೂಲಕ ಪಾಲ್ಗೊಂಡರು. ಆಯೋಗದ ಅಧ್ಯಕ್ಷ ಮಧುಸೂದನ್ ನಾಯಕ್, ಶಾಸಕರಾದ ಪೊನ್ನಣ್ಣ, ಅಶೋಕ್ ರೈ, ಎಂಎಲ್ಸಿ ಪುಟ್ಟಣ್ಣ, ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್, ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಕಾರ್ಯದರ್ಶಿ ತುಳಸಿ ಮದಿನೇನಿ, ಆಯುಕ್ತ ಎಸ್ ಎ ದಯಾನಂದ್, ಬೆಂಗಳೂರು ನಗರಾಭಿವೃದ್ಧಿ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್, ಜಿಬಿಎ ಮುಖ್ಯ ಆಯುಕ್ತ ಡಾ ಮಹೇಶ್ವರ ರಾವ್, ವಿಶೇಷ ಆಯುಕ್ತ ಮುನೀಶ್ ಮೌದ್ಗಿಲ್ ಮತ್ತಿತರರು ಭಾಗವಹಿಸಿದ್ದರು.

### ೩ಶಿಕ್ಷಕರ ಸಾವು, ೨೦ಲಕ್ಷ ಪರಿಹಾರ

ಸಮೀಕ್ಷೆ ನಡೆಯುವಾಗ ಮೂವರು ಶಿಕ್ಷಕರು ಮೃತಪಟ್ಟಿದ್ದಾರೆ. ಇವರಿಗೆ ತಲಾ 20 ಲಕ್ಷ ಪರಿಹಾರ ನೀಡಲಾಗುವುದು. ಸಮೀಕ್ಷೆ ಮಾಡುವ ಶಿಕ್ಷಕರಿಗೆ, ಇತರ ಅಧಿಕಾರಿಗಳಿಗೆ ಗೌರವ ಧನವಾಗಿ ತಲಾ 20 ಸಾವಿರ ರೂ. ನೀಡಲು ತೀರ್ಮಾನಿಸಲಾಗಿದೆ ಎಂದರು.

## ಮಹರ್ಷಿ ವಾಲ್ಮೀಕಿಯವರು ದೇಶ ಕಂಡ ಅಪರೂಪದ ಸಾಹಿತಿ



**ಬೆಂಗಳೂರು:** ರಾಮಾಯಣದಂತಹ ಮಹಾನ್ ಗ್ರಂಥವನ್ನು ರಚಿಸಿದ ಮಹರ್ಷಿ ವಾಲ್ಮೀಕಿಯವರು ದೇಶ ಕಂಡ ಅಪರೂಪದ ಸಾಹಿತಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಮಂಗಳವಾರ ಶ್ರೀ ಮಹರ್ಷಿ ವಾಲ್ಮೀಕಿ ತಪೋವನದಲ್ಲಿರುವ ಶ್ರೀ ವಾಲ್ಮೀಕಿ ಜಯಂತಿಯ ಅಂಗವಾಗಿ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ನಂತರ ಮಾಧ್ಯಮದವರೊಂದಿಗೆ ಮಾತನಾಡಿದರು. ನಾಡಿನ ಜನತೆಗೆ ಮಹರ್ಷಿ ವಾಲ್ಮೀಕಿ ಜಯಂತಿಯ ಶುಭಾಶ ಯಗಳನ್ನು ತಿಳಿಸಿದ ಅವರು, ವಾಲ್ಮೀಕಿ ಜಯಂತೋ ತ್ಸವದ ಮೂಲಕ ಅವರನ್ನು ಸ್ಮರಿಸಲಾಗಿದೆ. ದೇಶ ಕಂಡ ಅಪರೂಪದ ಸಾಹಿತಿ. ರಾಮಾಯಣದಂತಹ ಮಹಾನ್ ಗ್ರಂಥದ ಕರ್ತೃ. ವಾಲ್ಮೀಕಿಯವರು ಶೂದ್ರ ಜನಾಂಗದಲ್ಲಿ ಜನಿಸಿದ್ದರೂ, ರಾಮಾಯಣದಂತಹ ಶ್ರೇಷ್ಠ ಗ್ರಂಥವನ್ನು ವಿಶ್ವಕ್ಕೆ ಪರಿಚಯಿಸಿದರು. ವಾಲ್ಮೀಕಿಯವರ ಪ್ರತಿಮೆಯನ್ನು 2017ರಲ್ಲಿ ಸ್ಥಾಪಿಸಲಾಯಿತು. ವಾಲ್ಮೀಕಿ ಹಾಗೂ ಕನಕದಾಸರಂತಹ ಮಹಾನ್ ಸಂತರು ಸಮಾಜಮುಖಿಯಾಗಿ ಬದುಕಿದವರು. ಅವರು ಬೋಧಿಸಿದಂತೆ ಮಾನವೀಯ ಮೌಲ್ಯಗಳನ್ನು ಅನುಸರಿದವರು ಎಂದರು.

### ಸಚಿವ ಸಂಪುಟ ಪುನರ್ ರಚನೆ

ನಾಯಕ ಸಮುದಾಯದ ಶಾಸಕರಿಗೆ ಸಚಿವ ಸಂಪುಟದಲ್ಲಿ ಪ್ರಾತಿನಿಧ್ಯ ನೀಡುವ ಬಗ್ಗೆ ಪ್ರತಿಕ್ರಿಯೆ ನೀಡಿ, ಮುಂದಿನ ದಿನಗಳಲ್ಲಿ ಸಚಿವ ಸಂಪುಟ ಪುನರ್ ರಚನೆ ನಡೆಯುವ ಸಂದರ್ಭದಲ್ಲಿ ಪರಿಗಣಿಸಲಾಗುವುದು ಎಂದರು.

### ಮನುವಾದಿಗಳ ಕೈವಾಡ

ಸರ್ವೋಚ್ಛ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿಗಳ ಮೇಲೆ ಶೂ ಎಸೆದಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯೆ ನೀಡಿ, ಮುಖ್ಯ ನ್ಯಾಯಮೂರ್ತಿಯವರೇ ಈ ಘಟನೆಯನ್ನು ಕ್ಷಮಿಸಿದ್ದು, ಅವರ ದೊಡ್ಡಗುಣವನ್ನು ಬಿಂಬಿಸುತ್ತದೆ. ಆದರೆ, ಇಂತಹ ಕೃತ್ಯವನ್ನು ತೀವ್ರವಾಗಿ ಖಂಡಿಸುತ್ತೇನೆ. ಇದು ಮನುವಾದಿಗಳ ಕೈವಾಡವಾಗಿದೆ ಎಂದರು.

### ಮುಖ್ಯಮಂತ್ರಿ ಬದಲಾವಣೆ ಹೇಳಿಕೆಗಳಿಗೆ ಬ್ರೇಕ್ ಹಾಕಿ

## ಹೈಕಮಾಂಡ್‌ಗೆ ಹಿರಿಯ ಸಚಿವರ ಆಗ್ರಹ

**ಬೆಂಗಳೂರು:** ಈ ವರ್ಷದ ಕೊನೆಯಲ್ಲಿ ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾವಣೆಯ ಸಾಧ್ಯತೆಯ ಬಗ್ಗೆ ಇರುವ ಊಹಾಪೋಹಗಳಿಗೆ ಅಂತ್ಯ ಹಾಡುವಂತೆ ಸಿದ್ದರಾಮಯ್ಯ ಸಂಪುಟದ ಇಬ್ಬರು ಹಿರಿಯ ಸಚಿವರು ಮಂಗಳವಾರ ಕಾಂಗ್ರೆಸ್ ಹೈಕಮಾಂಡ್‌ಗೆ ಒತ್ತಾಯಿಸಿದ್ದಾರೆ.

ಕಾಂಗ್ರೆಸ್ ಸರ್ಕಾರ ನವೆಂಬರ್‌ನಲ್ಲಿ ಎರಡೂವರೆ ವರ್ಷ ಪೂರ್ಣಗೊಳಿಸಲಿದ್ದು, ಕೆಲವರು ಇದನ್ನು ನವೆಂಬರ್ ಕ್ರಾಂತಿ ಎಂದು ಕರೆಯುತ್ತಿದ್ದಾರೆ. ಹೈಕಮಾಂಡ್ ಹೇಳಲೇಬೇಕು. ಸಿಎಂ ಬದಲಾವಣೆ ಹೇಳಿಕೆಗಳಿಗೆ ಬ್ರೇಕ್ ಹಾಕಬೇಕು. ಈ ಬಗ್ಗೆ ಹೈಕಮಾಂಡ್ ಹೇಳಿದರೆ ಒಳ್ಳೆಯದು, ಇಲ್ಲದಿದ್ದರೆ ಅದು ಅಧಿಕಾರಶಾಹಿಯಲ್ಲಿ ಮತ್ತು ಪಕ್ಷದೊಳಗೆ ಗೊಂದಲವನ್ನು ಸೃಷ್ಟಿಸುತ್ತದೆ ಎಂದಿದ್ದಾರೆ.

ನನ್ನ ಅಭಿಪ್ರಾಯದಲ್ಲಿ ಈ ವಿಷಯಕ್ಕೆ ಆದಷ್ಟು ಬೇಗ ಪೂರ್ಣ ವಿರಾಮ ಹಾಕಬೇಕು" ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರು ಇಂದು ಸುದ್ದಿಗಾರರಿಗೆ ಪ್ರಶ್ನೆಯೊಂದಕ್ಕೆ ಉತ್ತರಿಸಿದರು. ಜಾರಕಿಹೊಳಿ ಅವರ ಮಾತಿಗೆ ಸಮ್ಮತಿಸಿದ ಗೃಹ ಸಚಿವ ಜಿ ಪರಮೇಶ್ವರ ಅವರು ಸಹ ಪಕ್ಷದ ನಾಯಕತ್ವವು ಅನಿಶ್ಚಿತತೆಯನ್ನು ಪರಿಹರಿಸಬೇಕೆಂದು ಕೇಳಿಕೊಂಡರು. ಸತೀಶ್ ಜಾರಕಿಹೊಳಿ ಹೇಳಿದ್ದು ಸರಿ,



ಪ್ರತಿದಿನ ನಾವು ನೋಡುತ್ತಿದ್ದೇವೆ. ಪ್ರತಿಯೊಬ್ಬರೂ ಮಾಧ್ಯಮಗಳಲ್ಲಿ ವಿಭಿನ್ನ ಹೇಳಿಕೆಗಳನ್ನು ನೀಡುತ್ತಿದ್ದಾರೆ. ಸಮಸ್ಯೆಯನ್ನು ಪರಿಹರಿಸಬೇಕು ಎಂಬ ಅವರ (ಜಾರಕಿಹೊಳಿ) ಹೇಳಿಕೆ ಸರಿಯಾಗಿದೆ. ಹೈಕಮಾಂಡ್ ಅದನ್ನು ಮಾಡುತ್ತದೆ. ಹೈಕಮಾಂಡ್‌ಗೆ ಎಲ್ಲಾ ತಿಳಿದಿದೆ ಮತ್ತು ಯಾವ ಪರಿಸ್ಥಿತಿಯಲ್ಲಿ ಯಾವ ಔಷಧಿ ನೀಡಬೇಕೆಂದು ಗೊತ್ತಿದೆ... ಸತೀಶ್ ಜಾರಕಿಹೊಳಿ ಹೇಳಿದಂತೆ, ನಾನು ಕೂಡ ಹೇಳುತ್ತೇನೆ – ಗೊಂದಲವನ್ನು ಪರಿಹರಿಸಿ" ಎಂದರು.

ಇದೇ ವೇಳೆ ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ಮೇಲೆ ಶೂ ಎಸೆದ ಘಟನೆಗೆ ಪ್ರತಿಕ್ರಿಯಿಸಿದ ಗೃಹ ಸಚಿವರು, "ಈ ಘಟನೆ ಖಂಡನೀಯ. ಇದು ಕೇವಲ ಸಿಜೆ ಗವಾಯಿ ಅವರ ಪ್ರಶ್ನೆ ಅಲ್ಲ. ದೇಶದ ಸುಪ್ರೀಂ ಕೋರ್ಟ್ ನ ಮುಖ್ಯ ನ್ಯಾಯಮೂರ್ತಿ ಸ್ಥಾನಕ್ಕೆ ಹಾಗೂ ಸಂವಿಧಾನದ ಸ್ಥಾನಕ್ಕೆ ಮಾಡಿದ ಅವಮಾನ" ಎಂದರು.

## ಶೀಗಿ ಹುಣ್ಣಿಮೆ: ಯಲ್ಲಮ್ಮಗುಡ್ಡದಲ್ಲಿ ಬೃಹತ್ ಜಾತ್ರೆ

**ಉಗರಗೋಳ:** ಉಗರಗೋಳ ಸಮೀಪದ ಏಳುಕೊಳ್ಳದ ನಾಡು ಯಲ್ಲಮ್ಮಗುಡ್ಡದಲ್ಲಿ ಮಂಗಳವಾರ ಶೀಗಿ ಹುಣ್ಣಿಮೆ ಅಂಗವಾಗಿ ಬೃಹತ್ ಜಾತ್ರೆ ಜರುಗಿತು. ಬೆಳಗ್ಗೆಯಿಂದ ಗುಡ್ಡದತ್ತ ಹರಿದು ಬಂದ ಲಕ್ಷಾಂತರ ಭಕ್ತರು, ಆದಿಶಕ್ತಿ ಶ್ರೀ ರೇಣುಕಾ ದೇವಿಗೆ ತಮ್ಮ ಶಕ್ತಿಗೆಅನುಸಾರ ಪೂಜೆ ಸಲ್ಲಿಸಿ, ವಿಶೇಷ ದರ್ಶನ ಪಡೆದು ಪುನೀತರಾದರು. ಆದರೆ ಗುಡ್ಡಕ್ಕೆ ಸಂಪರ್ಕ ಕಲ್ಪಸುವ ರಸ್ತೆಗಳಲ್ಲಿ ಟ್ರಾಫಿಕ್ ಸಮಸ್ಯ ಉಂಟಾಗಿ ಭಕ್ತರು ಪರದಾಡಿದರು.

ಉತ್ತರ ಕರ್ನಾಟಕದ ಎಲ್ಲ ಜಿಲ್ಲೆಗಳಿಂದಲೂ ಭಕ್ತರ ದಂಡು ಯಲ್ಲಮ್ಮನ ಸಾನ್ನಿಧ್ಯದತ್ತ ಮುಖಮಾಡಿತ್ತು. ಎತ್ತ ನೋಡಿದರೂ ಜನಜಾತ್ರೆಯೇ ಕಣ್ಣಿಗೆ ರಾಚುತ್ತಿತ್ತು. ಶೀಗಿ ಹುಣ್ಣಿಮೆಯಾದ್ದರಿಂದ ಅಲ್ಲೊಂದು ಗ್ರಾಮೀಣ ಹಳ್ಳಿ ಸೊಗಡಿನ ಜಾತ್ರೆಯೇ ನಡೆದಂತ ಅನುಭವ ಎಲ್ಲರಿಗೂ ಭಾಸವಾಗುತ್ತಿತ್ತು.

ಯಲ್ಲಮ್ಮಗುಡ್ಡದ ಬೆಟ್ಟದ ಪ್ರದೇಶಗಳಲ್ಲಿ ಠಿಕಾಣಿ ಹೂಡಿದ್ದ ಭಕ್ತರು ಮಲಪ್ರಭೆ ಮಡಿಲಲ್ಲಿನ ಜೋಗುಳಬಾವಿ, ಎಣ್ಣೆಹೊಂಡದಲ್ಲಿ ಪವಿತ್ರಸ್ನಾನ ಮಾಡಿ ವಿಶೇಷ ನೈವೇದ್ಯ ತಯಾರಿಸಿ ಪರಡಿ ತುಂಬಿ ಅಮ್ಮನ ಕೃಪೆಗೆ ಪಾತ್ರರಾದರು. ಭಕ್ತರು ಹೋಳಿಗೆ, ಕಡಬು, ವಡೆ, ಭಜಿ ಮೊದಲಾದ ಖಾದ್ಯಗಳನ್ನು ತಯಾರಿಸಿದ್ದರು. ಧಾರ್ಮಿಕ ವಿಧಿವಿಧಾನಗಳ ನಂತರ ಎಲ್ಲರೂ ಒಗ್ಗೂಡಿ ಕುಳಿತು, ದೇವಿಯ ದರ್ಶನ




ಪಡೆದು ಶೀಗಿ ಹುಣ್ಣಿಮೆ ಅರ್ಥಪೂರ್ಣವಾಗಿ ಆಚರಿಸಿದರು. ಶೀಗಿ ಹುಣ್ಣಿಮೆ ಜಾತ್ರೆ ರೈತರ ಜಾತ್ರೆಯಂದೇ ಖ್ಯಾತಿ ಪಡದಿದೆ ಆದರೆ ಈ ಬಾರಿ ಮಳೆ, ಪ್ರವಾಹದಿಂದ ಅಪಾರ ಪ್ರಮಾನದಲ್ಲಿ ಬೆಳೆ ಹಾನಿಯಾಗಿ ರೈತರು ಸಂಕಷ್ಟದಲ್ಲಿ ಇದ್ದಾರೆ, ಹಾಗಾಗಿ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಸೇರುತ್ತಾರೂ ಅಥವಾ ಇಲ್ಲವೂ ಎಂಬುವ ಅನುಮಾನವಿತ್ತು ಆದರೆ ರೈತರು ನೀರಿಕ್ಷೆಗೂ ಮೀರಿ ಹರಿದು ಬಂದಿದ್ದರು.

ಯಲ್ಲಮ್ಮನ ಗುಡ್ಡಕ್ಕೆ ಸಂಪರ್ಕಿಸುವ ಮಾರ್ಗದಲ್ಲಿ ಭಕ್ತರು ಬೀಕಾಬಿಟ್ಟಿಯಾಗಿ ವಾಹನ ನಿಲ್ಲಿಸಿದ್ದರಿಂದ ಟ್ರಾಫಿಕ್ ಸಮಸ್ಯೆ ಉಂಟಾಯಿತು. ಯಲ್ಲಮ್ಮನ ಗುಡ್ಡದಿಂದ ಉಗರಗೋಳ, ಹಿರೆಕುಂಬಿ, ಚಿಕ್ಕುಂಬಿವರೆಗೆ ವಾಹನಗಳ ಸಾಲು ಕಂಡುಬಂದಿತು ಸಂಜೆಯಾಗುತ್ತಾ ಬಂದರು ವಾಹನಗಳ ಸಾಲು ಇನ್ನೂ ಹೆಚ್ಚಾಗುತ್ತಲೇ ಸಾಗಿತ್ತು. ಭಕ್ತರು ಹೈರಾನಾಗಿದ್ದು ಕಂಡು ಬಂದಿತು.

## ಅಪಘಾತ ಪ್ರಕರಣಗಳಲ್ಲಿ ಪರಿಹಾರ

### ಸಂತ್ರಸ್ತರ ಉದ್ಯೋಗ, ಆದಾಯ ಪರಿಗಣಿಸಬೇಕು: ಹೈಕೋರ್ಟ್

**ಬೆಂಗಳೂರು:** ರಸ್ತೆ ಅಪಘಾತಗಳಲ್ಲಿ ಅಂಗವೈಕಲ್ಯದ ಕುರಿತು ಪರಿಹಾರ ನಿರ್ಣಯಿಸುವ ಸಂದರ್ಭಗಳಲ್ಲಿ ಸಂತ್ರಸ್ಥರ ಉದ್ಯೋಗ ಮತ್ತು ಪ್ರತಿದಿನ ಹಾಜರಾಗಬೇಕಾದ ಕರ್ತವ್ಯಗಳ ಸ್ವರೂಪವನ್ನು ಪರಗಣಿಸಬೇಕಾಗುತ್ತದೆ ಎಂದು ಹೈಕೋರ್ಟ್ ಹೇಳಿದೆ.

ರಸ್ತೆ ಅಪಘಾತದಿಂದ ಎಡಗಾಲು ಕಳೆದುಕೊಂಡು ಅಂಗವೈಕಲ್ಯಕ್ಕೆ ತುತ್ತಾಗಿದ್ದ ತರಕಾರಿ ವ್ಯಾಪಾರಿಗೆ ಮೋಟಾರ್ ಅಪಘಾತ ಪರಿಹಾರ ನ್ಯಾಯಾಧಿಕರಣ (ಎಂಎಸಿಟಿ) ನೀಡಿದ್ದ 5,98,300 ರು.ಗಳ ಪರಿಹಾರವನ್ನು 11,40,795 ರು.ಗಳಿಗೆ ಹೆಚ್ಚಳ ಮಾಡಿ ಆದೇಶಿಸಿದೆ.ರಸ್ತೆ ಅಪಘಾತಕ್ಕೆ ತುತ್ತಾಗಿ ಪರಿಹಾರ ಮೊತ್ತ ಹೆಚ್ಚಳ ಮಾಡುವಂತೆ ಕೋರಿ ಆನೇಕಲ್ ತಾಲೂಕಿನ ದೊಮ್ಮಸಂದ್ರದ ನಿವಾಸಿ ಮುನಿಯಪ್ಪ (62) ಎಂಬುವರು ಸಲ್ಲಿಸಿದ್ದ ಮೇಲ್ಮನವಿ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಚಿಲ್ಲಕೂರು ಸುಮಲತಾ ಅವರಿದ್ದ ಏಕಸದಸ್ಯ ನ್ಯಾಯಪೀಠ ಈ ಆದೇಶ ನೀಡಿದೆ.ಅಲ್ಲದೇ, ಅಘಘಾತದಿಂದಾಗಿ ಮೇಲ್ಮನವಿದಾರರ ಎಡಗಾಲನ್ನು ತೆಗೆಯಲಾಗಿದೆ. ತಾನು ತರಕಾರಿ ವ್ಯಾಪಾರಿಯಾಗಿದ್ದು, ದಿನಕ್ಕೆ ಎರಡು ಸಾವಿರ ರು.ಗಳನ್ನು ದುಡಿಯುತ್ತಿರುವುದಾಗಿ ತಿಳಿಸಿದ್ದರು. ಇದರಿಂದ ತರಕಾರಿ ವ್ಯಾಪಾರವನ್ನು ಮುಂದುವರೆಯುವುದಕ್ಕೆ ಸಾಧ್ಯವಾಗದಂತಹ ಸ್ಥಿತಿ ತಲುಪಿದ್ದೇನೆ. 50 ಲಕ್ಷ ಪರಿಹಾರ ಕೋರಿದ್ದಾರೆ. ಆದರೆ, ನ್ಯಾಯಾಧಿಕರಣ ಸಂತ್ರಸ್ತರ ಮಾಸಿಕ ಆದಾಯ ತಿಂಗಳಿಗೆ 15 ಸಾವಿರ ಎಂದು ಪರಿಗಣಿಸಿ ಕೇವಲ 5,98,300 ರು.ಗಳ ಪರಿಹಾರವನ್ನು ಘೋಷಣೆ ಮಾಡಿದೆ. ಹೀಗಾಗಿ ಸಂತ್ರಸ್ತರ ವೃತ್ತಿಯ ಸ್ವರೂಪವನ್ನು ಪರಿಗಣಿಸಿ ಪರಿಹಾರ ಘೋಷಣೆ ಮಾಡಬೇಕಾಗಿದ್ದು 11,40,795 ರು.ಗಳಿಗೆ ಹೆಚ್ಚಳ ಮಾಡಲಾಗಿದೆ ಎಂದು ಪೀಠ ತನ್ನ ಆದೇಶದಲ್ಲಿ ತಿಳಿಸಿದೆ.

### ಬೆಳಗಾವಿ ಡಿಸಿಸಿ ಬ್ಯಾಂಕ್ ಚುನಾವಣೆಗೆ ನಾಮಪತ್ರ ಸಲ್ಲಿಸಿದ ಮಾಜಿ ಅಧ್ಯಕ್ಷ ರಮೇಶ ಕತ್ತಿ

# ಸಮಾನ ಮನಸ್ಕರು ನನ್ನ ಜೊತೆಗಿದ್ದಾರೆ

**ಬೆಳಗಾವಿ:** ನಾನು ಡಿಸಿಸಿ ಬ್ಯಾಂಕ್ ಅಧ್ಯಕ್ಷ ಸ್ಥಾನದ ಆಕಾಂಕ್ಷಿ ಅಲ್ಲ. 40 ವರ್ಷದ ಅವಧಿಯಲ್ಲಿ ಒಳ್ಳೆಯ ರೀತಿ ಸೇವೆ ಸಲ್ಲಿಸಿದ್ದೇನೆ. ಕರ್ನಾಟಕದಲ್ಲೇ ಬೆಳಗಾವಿ ಜಿಲ್ಲೆಯ ಅತೀ ಹೆಚ್ಚು ರೈತರ ಸಾಲ ಮನ್ನಾ ಆಗಿದೆ. ಹಾಗಾಗಿ, ಈ ಬಾರಿ ನನ್ನ ವಿರೋಧಿ ಪೆನಲ್ ಯಾವುದೂ ಇಲ್ಲ. ನನ್ನ ಜೊತೆಗೆ ಸಮಾನ ಮನಸ್ಕರು ಬಹಳಷ್ಟು ಜನರು ಬರುತ್ತಾರೆ ಎಂದು ಡಿಸಿಸಿ ಬ್ಯಾಂಕ್ ಮಾಜಿ ಅಧ್ಯಕ್ಷ ರಮೇಶ ಕತ್ತಿ ವಿಶ್ವಾಸ ವ್ಯಕ್ತಪಡಿಸಿದರು.

ಅಕ್ಟೋಬರ್ 19 ರಿಂದ ಬೆಳಗಾವಿ ಡಿಸಿಸಿ ಬ್ಯಾಂಕ್ ಚುನಾವಣೆಗೆ ದಿನಾಂಕ ನಿಗದಿ ಆಗಿರುವ ಹಿನ್ನೆಲೆಯಲ್ಲಿ ಮಂಗಳವಾರ ರಮೇಶ ಕತ್ತಿ ನಾಮಪತ್ರ ಸಲ್ಲಿಸಿದರು. ನಾಮಪತ್ರ ಸಲ್ಲಿಕೆ ಬಳಿಕ ಮಾಧ್ಯಮಗಳ ಜೊತೆಗೆ ಮಾತನಾಡಿದ ಅವರು, 1986ರಿಂದ ಡಿಸಿಸಿ ಬ್ಯಾಂಕ್‌ನಲ್ಲಿ ಇದ್ದೇನೆ. ಮೊದಲನೇ ಸಾರಿ ಸ್ಪರ್ಧಿಸಿದಾಗ ಚುನಾವಣೆ ನಡೆದು ಆಯ್ಕೆ ಆಗಿದ್ದೆ. ಆಮೇಲೆ ಸತತವಾಗಿ 7 ಬಾರಿ ಅವಿರೋಧವಾಗಿ ಆಯ್ಕೆ ಆಗಿದ್ದೇನೆ. 25 ವರ್ಷ ಅಧ್ಯಕ್ಷ, 5 ವರ್ಷ ಉಪಾಧ್ಯಕ್ಷ, 10 ವರ್ಷ ನಿರ್ದೇಶಕನಾಗಿ ಕೆಲಸ ಮಾಡಿದ್ದೇನೆ. ನನ್ನ ಅವಧಿಯಲ್ಲಿ ಸುಮಾರು 3.81 ಲಕ್ಷ ರೈತರ 3,400 ಕೋಟಿ ಸಾಲ ಮನ್ನಾ ಆಗಿದೆ. ಹುಕ್ಕೇರಿ ತಾಲೂಕಾ ಕ್ಷೇತ್ರದಿಂದ ನಿರ್ದೇಶಕ ಸ್ಥಾನಕ್ಕೆ ಈಗ 9ನೇ ಬಾರಿ ನಾಮಪತ್ರ ಸಲ್ಲಿಸಿದ್ದೇನೆ. ತಾಲೂಕಿನ ಮತದಾರರ ಆಶೀರ್ವಾದದಿಂದ ಮತ್ತೆ ಗೆದ್ದು ಬರುತ್ತೇನೆ ಎಂದರು.

ಬೇರೆ ತಾಲೂಕುಗಳಲ್ಲಿ ಅವಿರೋಧ ಆಯ್ಕೆ ಆಗಬೇಕೊ..? ಚುನಾವಣೆ ನಡೆಯಬೇಕೊ..? ಎಂಬುದನ್ನು ಆ ಕ್ಷೇತ್ರಗಳ ಹಿತಚಿಂತಕರು, ಮತದಾರರು ನಿರ್ಣಯ ಕೈಗೊಳ್ಳಬೇಕು. ಬಾಲಚಂದ್ರ ಜಾರಕಿಹೊಳಿ ಆಗಲಿ ರಮೇಶ ಕತ್ತಿ ಆಗಲಿ ಹೇಳುವುದು ಸೂಕ್ತ ಅಲ್ಲ. ಇನ್ನು ನಮ್ಮ ಪೆನಲ್ ರಚಿಸುವ ಪ್ರಶ್ನೆ ಇಲ್ಲ. 15 ತಾಲೂಕುಗಳಿಂದ ಆಯಾ ಅಭ್ಯರ್ಥಿಗಳು ನಾಮಪತ್ರ ಸಲ್ಲಿಸುತ್ತಾರೆ. ಮುಂದೆಯೂ ಪೆನಲ್ ಮಾಡುವ



ಪ್ರಶ್ನೆ ಉದ್ಭವಿಸುವುದಿಲ್ಲ ಎಂದು ರಮೇಶ ಕತ್ತಿ ಹೇಳಿದರು.

**ಬಹಳಷ್ಟು ಮಂದಿ ಸಂಪರ್ಕದಲ್ಲಿದ್ದಾರೆ:** ಬೇರೆ ಕಡೆ ಪ್ರಚಾರಕ್ಕೆ ಹೋಗುತ್ತೀರಾ ಎಂಬ ಮಾಧ್ಯಮಗಳ ಪ್ರಶ್ನೆಗೆ, ಆಯಾ ತಾಲೂಕಿನ ಅಭ್ಯರ್ಥಿಗಳು ಡಿಸಿಸಿ ಬ್ಯಾಂಕ್ ಚುನಾವಣೆ ಪ್ರಚಾರಕ್ಕೆ ಆಹ್ವಾನಿಸಿದರೆ ಮಾತ್ರ ಹೋಗುತ್ತೇನೆ. ನಾನಾಗೇ ಹೋಗುವುದಿಲ್ಲ. ಆದರೆ, ಬಹಳ ಜನ ಅಭ್ಯರ್ಥಿಗಳು ನನ್ನ ಸಂಪರ್ಕ ಮಾಡಿದ್ದಾರೆ. ಆದರೆ, ಮಾಧ್ಯಮಗಳ ಮುಂದೆ ಅದನ್ನು ಬಹಿರಂಗ ಪಡಿಸಲು ಆಗುವುದಿಲ್ಲ ಎಂದರು.

**ಬಾಲಚಂದ್ರ ಹೇಳಿಕೆಗೆ ತಿರುಗೇಟು:** ನಮ್ಮ 12 ನಿರ್ದೇಶಕರು ಆಯ್ಕೆ ಆಗುತ್ತಾರೆ ಎಂಬ ಬಾಲಚಂದ್ರ ಜಾರಕಿಹೊಳಿ ಹೇಳಿಕೆಗೆ ಹುಕ್ಕೇರಿ ವಿದ್ಯುತ್ ಗ್ರಾಮೀಣ ಸಹಕಾರಿ ಸಂಘದ ಚುನಾವಣೆಯಲ್ಲಿ ಏನು ಹೇಳಿದ್ದರು..? ನಾವೇ ಗೆಲ್ಲುತ್ತೇವೆ ಎಂದಿದ್ದರು. ಆದರೆ, ಫಲಿತಾಂಶ ಏನಾಯಿತು..? ಅವರು ಗೆಲ್ಲುತ್ತಾರೆ, ಇವರು ಗೆಲ್ಲುತ್ತಾರೆ ಅಂತಾ ಹವಾ ಮಾಡುವ ಕಾಲ ಇದಲ್ಲ. ಜನರು ಬಹಳ ಶಾಣ್ಯಾ ಇದ್ದಾರೆ.

ತಾಲೂಕು ಮತ್ತು ಜಿಲ್ಲೆಯಲ್ಲಿ ಯಾರ ಕೈಗೆ ಅಧಿಕಾರ ಕೊಟ್ಟರೆ ಸಂಸ್ಥೆ ಉಳಿಯುತ್ತದೆ ಅಂತಾ ಜನರು ಚಿಂತನೆ ಮಾಡಲಿದ್ದಾರೆ. ಪ್ರತಿಯೊಬ್ಬರೂ ಸುಶಿಕ್ಷಿತರಿದ್ದು, ಯೋಚಿಸಿ ನಿರ್ಧರಿಸುತ್ತಾರೆ. ಪ್ರತ್ಯಕ್ಷ ಮತ್ತು ಪರೋಕ್ಷವಾಗಿ ಬೆಳಗಾವಿ ಡಿಸಿಸಿ ಬ್ಯಾಂಕ್‌ನಿಂದ 50 ಲಕ್ಷ ಜನರು ಇದರ ಲಾಭ ಪಡೆಯುತ್ತಾರೆ. ಇಂಥ ಬ್ಯಾಂಕಿಗೆ ಒಂದು ಸ್ವಲ್ಪ ಹೆಚ್ಚು ಕಮ್ಮಿ ಆದರೂ 50 ಲಕ್ಷ ಜನರು ಬೀದಿಗೆ ಬರುತ್ತಾರೆ ಎಂದರು.

**ನಾಯಕತ್ವ ತೆಗೆದುಕೊಳ್ಳಲ್ಲ:** ಡಿಸಿಸಿ ಬ್ಯಾಂಕ್ ಯಾರ ಅಪ್ಪನ ಮನೆ ಆಸ್ತಿ ಅಲ್ಲ. ಎಂದೆಂದಿಗೂ ಜನರ ಆಸ್ತಿ. ಮುಂದೆಯೂ ಜನರ ಆಸ್ತಿ ಆಗಿಯೇ ಇರಲಿದೆ. ಹುಕ್ಕೇರಿ ಫಲಿತಾಂಶ ಡಿಸಿಸಿ ಬ್ಯಾಂಕ್ ಚುನಾವಣೆಯಲ್ಲಿ ಪುನರಾವರ್ತನೆ ಆಗುವುದನ್ನು ಜಿಲ್ಲೆಯ ಜನತೆ ನಿರ್ಧರಿಸಲಿದ್ದು, ಈ ಬಾರಿ ಡಿಸಿಸಿ ಬ್ಯಾಂಕ್ ಚುನಾವಣೆಯಲ್ಲಿ ನಾಯಕತ್ವ ತೆಗೆದುಕೊಳ್ಳುವ ಅವಶ್ಯಕತೆ ನನಗಿಲ್ಲ.

ಪ್ರಜಾಪ್ರಭುತ್ವ ವ್ಯವಸ್ಥೆಯ ಸಾರ್ವತ್ರಿಕ ಚುನಾವಣೆಯಲ್ಲಿ ನಾಯಕತ್ವದ ಅವಶ್ಯಕತೆ ಇರುತ್ತದೆ. ಬ್ಯಾಂಕಿಂಗ್ ಸೆಕ್ಟರ್‌ನಲ್ಲಿ ನಾಯಕತ್ವದ ಅವಶ್ಯಕತೆ ಇಲ್ಲ. ಮತದಾರರೇ ವಯಕ್ತಿಕವಾಗಿ ಯೋಚಿಸಿ ಮತ ಚಲಾಯಿಸುತ್ತಾರೆ ಎಂದು ತಿಳಿಸಿದರು.

ರಮೇಶ ಕತ್ತಿ ನಾಮಪತ್ರ ಸಲ್ಲಿಕೆ ವೇಳೆ ಶಾಸಕ ನಿಖಿಲ್ ಕತ್ತಿ, ಪುತ್ರ ಪವನ್ ಕತ್ತಿ, ಮಾಜಿ ಸಚಿವ ಎ.ಬಿ.ಪಾಟೀಲ ಪುತ್ರ ವಿನಯ್ ಪಾಟೀಲ ಸೇರಿ ಮತ್ತಿತರರು ಉಪಸ್ಥಿತರಿದ್ದರು.

### ಸವದಿ ನಾನು ಒಂದೇ ಇದ್ದೇವೆ

ಲಕ್ಷ್ಮಣ ಸವದಿ ಮತ್ತು ನೀವು ಒಂದಾಗುತ್ತಿರಾ ಎಂಬ ಪ್ರಶ್ನೆಗೆ, ನಾವು ಈಗಾಗಲೇ ಒಂದೇ ಇದ್ದೇವೆ. ಚುನಾವಣೆಯಲ್ಲಿ ಒಂದಾಗಲು ಪ್ರಕ್ರಿಯೆ ಶುರುವಾಗಿದೆ. ಬರುವ ದಿನಗಳಲ್ಲಿ ಇದರ ಬಗ್ಗೆ ಅವಲೋಕನ ಮಾಡುತ್ತೇವೆ. ಬ್ಯಾಂಕಿಂಗ್ ಕ್ಷೇತ್ರದಲ್ಲಿ ಹೆಚ್ಚಿನ ಜ್ಞಾನ ಇರುವವರು ಗೆದ್ದು ಬರಬಾರದು ಅಂತಾ ನನ್ನ ವಿಲನ್ ಮಾಡುತ್ತಿದ್ದಾರೆ. ಆದರೆ, ಅದರಲ್ಲಿ ವಿರೋಧಿಗಳು ಯಶಸ್ವಿಯಾಗುವುದಿಲ್ಲ. ನಾನು ಗೆದ್ದು ಬರುತ್ತೇನೆ. ಬ್ಯಾಂಕ್ ಒಳ್ಳೆಯ ರೀತಿ ನಡೆಸುವಂತೆ ಎಚ್ಚರಿಸುತ್ತೇನೆ ಎಂದರು.

### ಮಹರ್ಷಿ ವಾಲ್ಮೀಕಿ ಜಯಂತಿ ಮಹೋತ್ಸವಕ್ಕೆ ಚಾಲನೆ ನೀಡಿದ ಶಾಸಕ ಮಹಾಂತೇಶ ಕೌಜಲಗಿ

## ವಾಲ್ಮೀಕಿಯವರು ಪ್ರತಿಯೊಬ್ಬರು ಪೂಜಿಸುವಂತಹ ವ್ಯಕ್ತಿ



**ಬೈಲಹೊಂಗಲ:** ತಾಲೂಕಾ ಆಡಳಿತ, ತಾಲೂಕಾ ಪಂಚಾಯತ, ಪುರಸಭೆ, ಮತ್ತು ಸಮಾಜ ಕಲ್ಯಾಣ ಇಲಾಖೆಯ ಇವುಗಳ ಆಶ್ರಯದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಮಹೋತ್ಸವ ಸಮಾರಂಭವು ಮಂಗಳವಾರ ತಾಲೂಕಾ ಪಂಚಾಯತ ಸಭಾಭವನದಲ್ಲಿ ಸಂಭ್ರಮದಿಂದ ಜರುಗಿತು.

ಸಭೆಯ ಅಧ್ಯಕ್ಷತೆ ವಹಿಸಿದ ಶಾಸಕ ಮಹಾಂತೇಶ ಕೌಜಲಗಿ ಮಾತನಾಡಿ, ಮಹಾನ್ ಋಷಿಯಾಗಿ ಬೆಳೆದು ಸಮಾಜದಲ್ಲಿ ಉತ್ತಮ ಸಂದೇಶ ಕೊಟ್ಟ ಶ್ರೀ ಮಹರ್ಷಿ ವಾಲ್ಮೀಕಿಯವರು ಪ್ರತಿಯೊಬ್ಬರು ಪೂಜಿಸುವಂತಹ ವ್ಯಕ್ತಿಯಾಗಿದ್ದು ರಾಮಾಯಣ ಎನ್ನುವಂತಹ ಶ್ರೇಷ್ಠ ಕೃತಿಯು ಇಂದಿನ ಜನಮಾನಸದಲ್ಲಿ ಹಚ್ಚ ಹಸರಾಗಿ ಉಳಿದಿದೆ ಎಂದರು.

ಮುನವಳ್ಳಿಯ ಎಸ್‌ಪಿಜೆಜೆ ಕಾಲೇಜಿನ ಉಪನ್ಯಾಸಕ ಮಾಲತೇಶ ಮಕರವಳ್ಳಿ ಮಾತನಾಡಿ, ಮಹರ್ಷಿ ವಾಲ್ಮೀಕಿ ಅವರು ದೇಶ ಕಂಡ ಮಹಾನ್ ಋಷಿಗಳಲ್ಲಿ ಒಬ್ಬರು ಎಂದು ಹೇಳಲಿಕ್ಕೆ ಹೆಮ್ಮೆ ಎನಿಸುತ್ತದೆ. ಅವರ ಹಾಕಿಕೊಟ್ಟ ಸನ್ಮಾರ್ಗ ಇಂದಿಗೂ ದಾರಿ ದೀಪವಾಗಿದೆ ಎಂದರು. ಪುರಸಭೆ ಅಧ್ಯಕ್ಷ ವಿಜಯ ಬೋಳಣ್ಣವರ, ತಹಶೀಲ್ದಾರ ಹಣಮಂತ ಶಿರಹಟ್ಟಿ, ಮುಖ್ಯಾಧಿಕಾರಿ ವಿರೇಶ ಹಸಬಿ, ಸ್ಥಾಯಿ ಸಮೀತಿ ಚೇರಮನ್ ಹೇಮಲತಾ ಹಿರೇಮಠ, ತಾಲೂಕಾ ಸಮಾಜ ಕಲ್ಯಾಣಾಧಿಕಾರಿ ಮಲ್ಲಿಕಾರ್ಜುನ ಉಳ್ಳಾಗಡ್ಡಿ, ತಾ.ಪಂ ಇಓ ಸಂಜೀವ ಜುನ್ನೂರು, ಪ್ರಭಾರಿ ಕ್ಷೇತ್ರ ಶಿಕ್ಷಣಾಧಿಕಾರಿ ಬಿ.ಎನ್. ಕಸಾಳೆ, ಪುರಸಭೆ ಸದಸ್ಯ ವಾಣಿಶ್ರೀ ಪತ್ತಾರ, ಶ್ರೀದೇವಿ ದೇವಲಾಪೂರ, ಅಂಬಿಕಾ ಕೊಟಬಾಗಿ, ವಿಶ್ವ ಹಿಂದು ಪರಿಷತ್ ಜಿಲ್ಲಾಧ್ಯಕ್ಷ ಪ್ರಮೋದಕುಮಾರ ವಕ್ಕುಂದಮಠ, ವಿವೇಕಾನಂದ ಪೂಜೇರ, ಮಲ್ಲಿಕಾರ್ಜುನ ಕಿತ್ತೂರು, ಅಶೋಕ ಬಂಡಾರಿ, ರವಿ ಸೋಮಾಪೂರ, ಗೊಳಪ್ಪ ಕೇಂದ್ರಿ, ನವೀನ ಗುರಗುದ್ದಿ, ದೇಮಣ್ಣ ತಳವಾರ ಮುಂತಾದವರು ಉಪಸ್ಥಿತರಿದ್ದರು.

ಅಂಗನವಾಡಿ ಕಾರ್ಯಕರ್ತೆಯರು, ಸಮಾಜದ ಬಾಂಧವರು, ಪುರಸಭೆ, ತಾ.ಪಂ.ಕಛೇರಿ, ಸಮಾಜ ಕಲ್ಯಾಣ ಇಲಾಖೆ, ಇತರೇ ಇಲಾಖೆಗಳ ಅಧಿಕಾರಿಗಳು, ಸಾರ್ವಜನಿಕರು, ಸಮಾಜದ ಮುಖಂಡರು ಪಾಲ್ಗೊಂಡಿದ್ದರು. ಪ್ರತಿಭಾವಂತ ವಿದ್ಯಾರ್ಥಿಗಳನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಲಾಯಿತು.

ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ಮಲ್ಲಿಕಾರ್ಜುನ ಉಳ್ಳಾಗಡ್ಡಿ ಸ್ವಾಗತಿಸಿದರು. ಹಿರಿಯ ಮೇಲ್ವಚಾರಕ ಮಂಜುನಾಥ ಮಕರವಳ್ಳಿ ನಿರೂಪಿಸಿ, ವಂದಿಸಿದರು.

ಇದ್ದಕ್ಕೂ ಮೊದಲು ಪಟ್ಟಣದ ಪುರಸಭೆ ಆವರಣದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಅವರ ಭಾವಚಿತ್ರಕ್ಕೆ ಶಾಸಕ ಮಹಾಂತೇಶ ಕೌಜಲಗಿ ಹಾಗೂ ಪುರಸಭೆ ಅಧ್ಯಕ್ಷ ವಿಜಯ ಬೋಳಣ್ಣವರ ಅವರು ಪೂಜೆ ಸಲ್ಲಿಸಿ ಮೆರವಣಿಗೆಗೆ ಚಾಲನೆ ನೀಡಿದರು. ನಂತರ ಮೆರವಣಿಗೆಯು ಕುಂಭಮೇಳದೊಂದಿಗೆ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಸಮಾರಂಭದ ಜರುಗುವ ಸ್ಥಳಕ್ಕೆ ತಲುಪಿತು.

# ಹಿರಿಯ ನಾಗರಿಕರಿಗಾಗಿ ಕ್ರೀಡೆ, ಸಾಂಸ್ಕೃತಿಕ ಹಬ್ಬ

**ಹುಕ್ಕೇರಿ:** ಹಿರಿಯ ನಾಗರಿಕರ ದಿನಾಚರಣೆಯ ಅಂಗವಾಗಿ ತಾಲೂಕಿನ ಹಿಡಕಲ್ ಡ್ಯಾಮ್ ನಲ್ಲಿ ಅಕ್ಟೋಬರ್ 8 ಮತ್ತು 9 ರಂದು ಎರಡು ದಿನಗಳ ಕಾಲ ಕ್ರೀಡೆ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳ ಹಬ್ಬ ಜರುಗಲಿದೆ.

ಕಾರ್ಯಕ್ರಮದ ಪ್ರಥಮ ದಿನ ಅಕ್ಟೋಬರ್ 8ರಂದು ಬೆಳಿಗ್ಗೆ 10 ಗಂಟೆಗೆ ಶ್ರೀ ಬಸವೇಶ್ವರ ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದೆ. ಈ ಸಮಾರಂಭದಲ್ಲಿ ಧಾರವಾಡದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಮಹಾವಿದ್ಯಾಲಯದ ನಿವೃತ್ತ ಪ್ರಾಚಾರ್ಯೆ ಡಾ. ಸರಸ್ವತಿ ಕಳಸದ, ಹೊಸಪೇಟೆ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಶ್ರೀಮತಿ ಸುಹಾಸಿನಿ ಮಗದುಮ್ಮ, ಸಂತ ಮೀಖಾಯೇಲ್ ಚರ್ಚಿನ ಧರ್ಮಗುರು ಪಾದ್ರಿ ಲೂರ್ಧುಸ್ವಾಮಿ, ಹುಕ್ಕೇರಿ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಹೆಚ್. ಹೊಳೆಪ್ಪ, ಬೆಳಗಾವಿಯ ಆರ್ಥಿಕ ಮತ್ತು ಸಾಂಖ್ಯಿಕ ಇಲಾಖೆಯ ವಿಶ್ರಾಂತ ಉಪ ನಿರ್ದೇಶಕ ಆರ್. ಬಿ. ಬನಶಂಕರಿ, ಬೆಳಗಾವಿ ಜಿಲ್ಲಾ ನಿವೃತ್ತ ನೌಕರರ ಸಂಘದ ಅಧ್ಯಕ್ಷ ಎಸ್.ಬಿ.ಸಿದ್ನಾಳ ಹಾಗೂ ಶ್ರೀ ಬಸವೇಶ್ವರ ಶಿಕ್ಷಣ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ಗುರಪ್ಪ ತಳವಾರ ಸೇರಿದಂತೆ ಗಣ್ಯರು ಉಪಸ್ಥಿತರಿರಲಿದ್ದಾರೆ.

ವೇದಿಕೆ ಕಾರ್ಯಕ್ರಮದ ಬಳಿಕ ಮಹಾವಿದ್ಯಾಲಯದ ಆವರಣದಲ್ಲಿ ಹಿರಿಯ ನಾಗರಿಕರಿಗಾಗಿ ಲಿಂಬು ಚಮಚ, ವೇಗದ ಓಟ, ಸಂಗೀತ ಕುರ್ಚಿ, ಬುಗುರಿ ಆಟ ಮುಂತಾದ ಮನರಂಜನಾ ಕ್ರೀಡೆಗಳು, ಆರೋಗ್ಯ ಶಿಬಿರ ಹಾಗೂ ಆಪ್ತ ಸಮಾಲೋಚನಾ ಕಾರ್ಯಕ್ರಮಗಳು ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳಾದ ಜನಪದ ನೃತ್ಯ, ಡೊಳ್ಳಿನ ಪದ, ಭಜನಾ ಪದ, ಗೀಗಿ ಪದ ಮತ್ತು ಏಕಪಾತ್ರಾಭಿನಯ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಆಯೋಜಿಸಲಾಗಿದೆ.

ಎರಡನೇ ದಿನ ಅಕ್ಟೋಬರ್ 9ರಂದು ಹಿಡಕಲ್ ಡ್ಯಾಮಿನ ಮುಖ್ಯ ಬಸ್ ನಿಲ್ದಾಣದ ಹತ್ತಿರವಿರುವ ಶ್ರೀ ಶಿವಾಲಯ ಮಂದಿರದಲ್ಲಿ ಹಿರಿಯ ನಾಗರೀಕರಿಗಾಗಿ ಉಚಿತ ಆರೋಗ್ಯ ತಪಾಸಣೆ ಶಿಬಿರ ಆಯೋಜಿಸಲಾಗಿದೆ. ಹಿರಿಯ ನಾಗರಿಕರ ಸಕ್ರಿಯ ಪಾಲ್ಗೊಳ್ಳುವಿಕೆಗೆ ಪ್ರೋತ್ಸಾಹ ನೀಡುವ ಉದ್ದೇಶದಿಂದ ಆಯೋಜಿಸಲಾಗಿರುವ ಈ ಎರಡು ದಿನಗಳ ಕಾರ್ಯಕ್ರಮಕ್ಕೆ ಭಾರತ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯ, ಪ್ರಾದೇಶಿಕ ಸಂಪನ್ಮೂಲ ಮತ್ತು ತರಬೇತಿ ಕೇಂದ್ರ, ನೈಟಿಂಗಲ್ಸ್ ವೈದಕೀಯ ಟ್ರಸ್ಟ್ ಹಾಗೂ ಮಹಿಳಾ ಕಲ್ಯಾಣ ಸಂಸ್ಥೆ ಬೆಳಗಾವಿ ಪ್ರಾಯೋಜಕತ್ವ ವಹಿಸಿವೆ ಎಂದು ಆಯೋಜಕರು ತಿಳಿಸಿದ್ದಾರೆ.

292ನೇ ಶಿವಾನುಭವ, ಹಾನಗಲ್ ಕುಮಾರ ಶಿವಯೋಗಿಗಳ 158ನೇ ಜಯಂತ್ಯೋತ್ಸವ

# ಸಮಾಜ ಸಂಘಟನೆಗೆ ಕುಮಾರ ಶ್ರೀಗಳ ಕೊಡುಗೆ ಅಪಾರ



**ಬೆಳಗಾವಿ:** ಸಮಾಜ ಸಂಘಟನೆಗೆ ಕುಮಾರ ಶ್ರೀಗಳ ಕೊಡುಗೆ ಅಪಾರವಾಗಿದೆ. ವೀರಶೈವ ಲಿಂಗಾಯತ ಸಮುದಾಯವನ್ನು ಒಗ್ಗೂಡಿಸಿ ಐಕ್ಯತೆ ಸಾಧಿಸಿ ಶೈಕ್ಷಣಿಕ ಸಾಮಾಜಿಕ ಕ್ರಾಂತಿ ಮಾಡಿದರು. ಹೀಗಾಗಿ ಹಾನಗಲ್ ಕುಮಾರ ಶಿವಯೋಗಿಗಳು ನಿತ್ಯ ಪ್ರಾತಃ ಸ್ಮರಣೀಯರು ಎಂದು ಕಾರಂಜಿಮಠದ ಗುರುಸಿದ್ಧ ಸ್ವಾಮೀಜಿ ಹೇಳಿದರು.

ಕಾರಂಜಿಮಠದಲ್ಲಿ ದಿನಾಂಕ 6–10–2025ರಂದು ಜರುಗಿದ 292ನೇ ಶಿವಾನುಭವ ಮತ್ತು ಹಾನಗಲ್ ಕುಮಾರ ಶಿವಯೋಗಿಗಳ 158ನೇ ಜಯಂತಿ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಪೂಜ್ಯರು ಮಾತನಾಡುತ್ತಿದ್ದರು.

ಕುಮಾರ ಸ್ವಾಮಿಗಳು ಅಖಿಲ ಭಾರತ ವೀರಶೈವ ಮಹಾಸಭೆ ಸ್ಥಾಪಿಸಿ ಸಮಾಜ ಸಂಘಟನೆ, ಶಿವಯೋಗ ಮಂದಿರ ಸ್ಥಾಪಿಸಿ ಧಾರ್ಮಿಕ ಜಾಗೃತಿ, ಪಂಚಾಕ್ಷರಿ ಪುಟ್ಟರಾಜ ಗವಾಯಿಗಳನ್ನು ಸಂಗೀತ ಲೋಕದ ಅನರ್ಘ್ಯ ರತ್ನಗಳನ್ನಾಗಿ ರೂಪಿಸಿದರು ಎಂದು ಹೇಳಿದರು. ಹಾನಗಲ್ ಕುಮಾರ ಶಿವಯೋಗಿಗಳ ಜೀವನ ಸಾಧನೆ ಕುರಿತು ಚಿಂಚಣಿ ಅಲ್ಲಮಪ್ರಭು ಸಿದ್ಧ ಸಂಸ್ಥಾನ ಮಠದ ಉತ್ತರಾಧಿಕಾರಿಗಳಾದ ಶಿವಪ್ರಸಾದ ದೇವರು ವಿಶೇಷ ಉಪನ್ಯಾಸ ನೀಡಿ, ಕುಮಾರ ಶಿವಯೋಗಿಗಳ ಸಮಾಜ ಸೇವಾ ಕಾರ್ಯಗಳ ಕುರಿತು ವಿವರಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಾಹಿತಿ ಮಿಥುನ ಅಂಕಲಿ ಅವರು ವಹಿಸಿದ್ದರು. ಇದೇ ಸಂದರ್ಭದಲ್ಲಿ ಸಂಗೀತದಲ್ಲಿ ಅಪೂರ್ವ ಸಾಧನೆ ಮಾಡಿದ ಪ್ರಣವ ವಿನಾಯಕ ಮತ್ತು ವೇದ ಪ್ರಕಾಶ ಅವರನ್ನು ಕಾರಂಜಿಮಠದ ವತಿಯಿಂದ ಶ್ರೀಗಳು ಸನ್ಮಾನಿಸಿದರು.

ಕಾರಂಜಿಮಠದ ನೂತನ ಉತ್ತರಾಧಿಕಾರಿಗಳಾದ ಡಾ ಶಿವಯೋಗಿ ದೇವರು ಉಪಸ್ಥಿತರಿದ್ದರು. ಡಾ. ಎಸ್. ಎಂ ಗಂಗಾಧರಯ್ಯ, ಪ್ರೊ. ಶ್ರೀಕಾಂತ ಶಾನವಾಡ, ರತ್ನಪ್ರಭ ಬೆಲ್ಲದ ಮೊದಲಾದವರು ಭಾಗವಹಿಸಿದ್ದರು. ಎ.ಕೆ.ಪಾಟೀಲ ಕಾರ್ಯಕ್ರಮ ನಿರೂಪಿಸಿದರು, ವಿ. ಕೆ. ಪಾಟೀಲ ವಂದಿಸಿದರು.

## ಬಹಿರಂಗ ಹರಾಜು

**ಧಾರವಾಡ:** ಧಾರವಾಡ ಶಹರದ ವಿವಿಧ ಬಡಾವಣೆಗಳ ರಸ್ತೆ ಬದಿ ಹಾಗೂ ವಿವಿಧ ಕಚೇರಿ ಆವರಣದಲ್ಲಿ ಅಪಾಯಕಾರಿ ಸ್ಥಿತಿಯಲ್ಲಿರುವ 53 ಮರಗಳು ಮತ್ತು 64 ಮರದ ಟೊಂಗೆಗಳನ್ನು ತೆರುವುಗೊಳಿಸಲು ಧಾರವಾಡ ಅರಣ್ಯ ಅಧಿಕಾರಿ ಕಛೇರಿಯಲ್ಲಿ ಅಕ್ಟೋಬರ 13, 2025 ರಂದು ಮಧ್ಯಾಹ್ನ 3 ಗಂಟೆಗೆ ಬಹಿರಂಗ ಹರಾಜು ಮಾಡಲಾಗುವುದು. ಮರ ಸಂರಕ್ಷಣಾ ಕಾಯ್ದೆ 1976 ರ ಸೆಕ್ಷನ್ 8 (3) (VII) ರ ಸೆಕ್ಷನ್‌ಗಳಲ್ಲಿ ಅಗತ್ಯ ಪಡಿಸಿರುವಂತೆ ಈ ಬಗ್ಗೆ ತಕರಾರು ಸಲ್ಲಿಸ ಬಯಸುವವರು ತಮ್ಮ ತಕರಾರನ್ನು ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಧಾರವಾಡ ಉಪ ವಿಭಾಗ, ಧಾರವಾಡ ಹಾಗೂ ಧಾರವಾಡದ ಕೆ.ಸಿ.ಪಾರ್ಕ ಎದುರು ಅರಣ್ಯ ಸಂಕೀರ್ಣದಲ್ಲಿರುವ ಮರ ಅಧಿಕಾರಿಯವರಿಗೆ ಲಿಖಿತ ರೂಪದಲ್ಲಿ ಅಕ್ಟೋಬರ 09, 2025 ರ ಒಳಗಾಗಿ ಸಲ್ಲಿಸಬಹ್ಮದಾಗಿದೆ ಎಂದು ತಿಳಿಸಿದ್ದಾರೆ.

# ಬಿತ್ತನೆ ಬೀಜ ವಿತರಣೆ ಕಾರ್ಯಕ್ರಮಕ್ಕೆ ಚಾಲನೆ



**ಗೋಕಾಕ:** ಭೂಮಿ ಮೇಲೆ ಇರುವ ಕೋಟಿ ಕೋಟಿ ಜೀವರಾಶಿಗಳಿಗೆ (ಪ್ರಾಣಿ,ಪಕ್ಷಿ,ಮಾನವರಿಗೆ) ಅನ್ನ ನೀಡುವವನು ರೈತ ಎಲ್ಲರೂ ರೈತರ ಮೇಲೆ ಅವಲಂಬಿತರಾಗಿದ್ದೇವೆ ದೇಶ ಕಾಯುವ ಸೈನಿಕರು & ಅನ್ನ ನೀಡುವ ಅನ್ನದಾತರು ಜಗತ್ತಿನಲ್ಲಿ ಉನ್ನತ ಸ್ಥಾನದಲ್ಲಿ ಇದ್ದಾರೆ ಅವರಿಗೆ ನಾವೆಲ್ಲರೂ ಹೆಚ್ಚಿನ ಗೌರವ ಕೊಡಬೇಕು ಎಂದು ಗೋಕಾಕ ಶಾಸಕರಾದ ರಮೇಶ ಲ.ಜಾರಕಿಹೊಳಿ ಅವರು ಹೇಳಿದರು.

ನಗರದ ಶಾಸಕರ ಕಛೇರಿಯಲ್ಲಿ ಹಿಂಗಾರು ಹಂಗಾಮಿನ ಬಿತ್ತನೆ ಬೀಜ ವಿತರಣೆ ಕಾರ್ಯಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಕೃಷಿ ಇಲಾಖೆಯಿಂದ ಸಹಾಯಧನದಲ್ಲಿ ಹಿಂಗಾರು ಹಂಗಾಮಿನ ಬಿತ್ತನೆ ಬೀಜಗಳಾದ ಹಿಂಗಾರು ಜೋಳ, ಕಡಲೆ, ಗೋಧಿ, ಗೋವಿನಜೋಳ, ಸೂರ್ಯಕಾಂತಿ . ಇತ್ಯಾದಿ ಬೀಜಗಳ ವಿತರಣೆ ಚಾಲನೆ ನೀಡಿ ಮಾತನಾಡಿದ ಅವರು ಈ ವರ್ಷ ಮುಂಗಾರು & ಹಿಂಗಾರು ಹಂಗಾಮುಗಳಲ್ಲಿ ಒಳ್ಳೆಯ ಮಳೆಯಾಗಿದ್ದು ರೈತರು ಕೃಷಿ ಇಲಾಖೆಯಿಂದಾ ರಿಯಾಯತಿ ದರದಲ್ಲಿ ವತರಿಸುವ ಗುಣಮಟ್ಟದ ಬೀಜಗಳನ್ನು ಪಡೆದು ಹಾಗೂ ಕೃಷಿ ಅಧಿಕಾರಿಗಳಿಂದ ನವೀನ ಕೃಷಿ ತಾಂತ್ರಿಕತೆಗಳನ್ನು ಪಡೆದು ಹೆಚ್ಚಿನ ಇಳುವರಿ ತೆಗೆದು ಆರ್ಥಿಕವಾಗಿ ಸಬಲರಾಗಬೇಕು ಎಂದು ಹೇಳಿದರು ರೈತರು ಈ ದೇಶದ ಬೆನ್ನಲಬು ರೈತರು ಬೆಳೆ ಬೆಳೆದರೆ ಮಾತ್ರ ನಾವೆಲ್ಲರೂ ಬದುಕಲು ಸಾಧ್ಯವಾಗುತ್ತದೆ ಎಂದರು.

ಗೋಕಾಕ ಸಹಾಯಕ ಕೃಷಿ ನಿರ್ದೇಶಕ ಎಂ.ಎಂ.ನದಾಫ ರವರು ಮಾತನಾಡಿ, ಗೋಕಾಕ ಹಾಗೂ ಮೂಡಲಗಿ ತಾಲ್ಲೂಕುಗಳಿಗೆ ಬೇಕಾಗುವಷ್ಟು ಪ್ರಮಾಣದಲ್ಲಿ ಹಿಂಗಾರಿ ಜೋಳ, ಕಡಲ ಗೋಧಿ & ಮೆಕ್ಕೆಜೋಳ ಬೀಜಗಳನ್ನು ದಾಸ್ತಾನು ಮಾಡಲಾಗಿದ್ದು, ರೈತರು ತಮ್ಮ ಕ್ಷೇತ್ರದ ಉತಾರ, ಆಧಾರ ಕಾರ್ಡ ಅಥವಾ FID ಸಂಖ್ಯೆ ತೆಗೆದುಕೊಂಡು ಬಂದು ಹತ್ತಿರದ ರೈತ ಸಂಪರ್ಕ ಕೇಂದ್ರ ಅಥವಾ ಬೀಜ ವಿತರಣಾ ಕೇಂದ್ರದಿಂದ ಬೀಜಗಳನ್ನು ಪಡೆದು ಬೀಜೋಪಚಾರ ಮಾಡಿ ಬಿತ್ತನೆ ಮಾಡಲು ಹಾಗೂ ಇಲಾಖೆಯಿಂದ ಶಿಫಾರಸು ಮಾಡಿದ ಪ್ರಮಾಣದಲ್ಲಿ ಮಾತ್ರ ಬೀಜ & ರಸಗೊಬ್ಬರ (ಯೂರಿಯಾ)ಗಳನ್ನು ಬಳಸಿ ಹೊಸ ತಾಂತ್ರಿಕತೆಗಳನ್ನು ಅಳವಡಿಸಿ ಸಮಗ್ರ ಕೃಷಿಯೊಂದಿಗೆ ಹೆಚ್ಚಿನ ಇಳುವರಿ ತೆಗೆಯುವಂತೆ ರೈತರಿಗೆ ಸಲಹೆ ನೀಡಿದರು.

ಈ ಕಾರ್ಯಕ್ರಮದಲ್ಲಿ ಹಣಮಾಪೂರ ಗ್ರಾಮದ ರೈತರಾದ ಲಕ್ಷ್ಮಣ ಬಾದನವರ ಇವರ ಆಕಸ್ಮಿಕ ಸಾವು ಹೊಂದಿದ ಪ್ರಯುಕ್ತ 2 ಲಕ್ಷ ರೂಗಳ ಸರ್ಕಾರದ ಸಹಾಯಧನದ ಮಂಜೂರಾತಿ ಪತ್ರವನ್ನು ಮಾನ್ಯ ಶಾಸಕರು ಲಕ್ಷ್ಮಣ ಬಾದನವರ ಅವರ ಪತ್ನಿಗೆ ಹಸ್ತಾಂತರ ಮಾಡಿ ಸಾಂತ್ವಾನ ಹೇಳಿದರು.

ಸದರೀ ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ ಮಾಜಿ ಸದಸ್ಯರಾದ ಟಿ.ಆರ್. ಕಾಗಲ, ಮಡೆಪ್ಪ ತೋಳಿನವರ ಶಾಸಕರ ಆಪ್ತ ಸಹಾಯಕರಾದ ಭೀಮಗೌಡ ಪೋಲಿಸ ಪಾಟೀಲ ಹಾಗೂ ಭೀಮಶಿ ಭರಮನ್ನವರ & ಕೃಷಿ ಅಧಿಕಾರಿ ಎಸ್.ಬಿ.ಕರಗಣ್ಣಿ & ಕೃಷಿ ಇಲಾಖೆ ಸಿಬ್ಬಂದಿ, ರೈತರು ಹಾಜರಿದ್ದರು.

# ಚಾಮುಂಡೇಶ್ವರಿ ಆರಾಧನೆಯಿಂದ ಸಂಕಲ್ಪ ಸಿದ್ಧಿ ಶತಸಿದ್ಧ



**ಬೈಲಹೊಂಗಲ:** ನಾಡದೇವತೆ ಚಾಮುಂಡೇಶ್ವರಿ ಅಮ್ಮನವರ ಆರಾಧನೆಯಿಂದ ಭಕ್ತರ ಸಕಲ ಇಷ್ಟಾರ್ಥಗಳು,ಸಂಕಲ್ಪ ಪೂರ್ಣಗೊಳ್ಳುವುದು ನೂರಕ್ಕೆ ನೂರರಷ್ಟು ಸಿದ್ಧವೆಂದು ಧಾರ್ಮಿಕ ದತ್ತಿ ಪರಿಷತ್ ಮುಜರಾಯಿ ಇಲಾಖೆ ಸದಸ್ಯರಾದ ಡಾ.ಮಹಾಂತಯ್ಯ ಆರಾಧ್ರಿಮಠ ಶಾಸ್ತ್ರಿಗಳು ನುಡಿದರು.

ಪಟ್ಟಣದ ಬಸ್ ನಿಲ್ದಾಣದ ಹಿಂದುಗಡೆಯ ಕುಲಕರ್ಣಿ ಗಲ್ಲಿಯ ಹುಡೇದ ಬಾವಿ ಸಮೀಪ ನೂತನವಾಗಿ ನಿರ್ಮಾಣಗೊಂಡಿರುವ ತಾಯಿ ಚಾಮುಂಡೇಶ್ವರಿ ದೇವಸ್ಥಾನ ಲೋಕಾರ್ಪಣೆಗೊಳಿಸಿ ಅವರು ಮಾತನಾಡಿ ಇಂದಿನ ಮೊಬೈಲ ಯುಗದಲ್ಲಿ ಯುವ ಪೀಳಿಗೆಯು ಪಾಶ್ಚಿಮಾತ್ಯ ಸಂಸ್ಕೃತಿ ಅನುಕರಿಸುವ ಭರದಲ್ಲಿ ನಮ್ಮ ಸನಾತನ ಧರ್ಮದ ಬಗ್ಗೆ ಆಸಕ್ತಿ ಕಳೆದುಕೊಳ್ಳುತ್ತಿದ್ದಾರೆ. ಆದರೆ ಕುಲಕರ್ಣಿ ಗಲ್ಲಿಯ ಯುವಕರ ತಂಡವೊಂದು ಸಮಾನ ಮನಸ್ಕರಾಗಿ ಚಾಮುಂಡೇಶ್ವರಿ ಅಮ್ಮನವರ ದೇವಸ್ಥಾನ ನಿರ್ಮಿಸುವುದರ ಮೂಲಕ ಧರ್ಮ ಜಾಗೃತಿಯ ಕಡೆಗೆ ಗಮನ ಹರಿಸಿದ್ದು ವಿಶೇಷ.

ನವರಾತ್ರಿ ಪವಿತ್ರ ಸಂದರ್ಭದಲ್ಲಿ ಭಕ್ತರಿಂದ ದೇವಾಲಯ ನಿರ್ಮಿಸಿಕೊಂಡು ಈ ಭಾಗದ ಭಕ್ತರ ಕಷ್ಟ ಕಾರ್ಪಣ್ಯಗಳನ್ನು ದೂರವಾಗಿಸಲು ಸಂಕಲ್ಪ ಮಾಡಿರುವ ಮುನ್ಸೂಚನೆ ನೀಡಿದ್ದಾಳೆ. ತಾಯಿ ಚಾಮುಂಡೇಶ್ವರಿಯನ್ನು ನಿರ್ಮಲ ಭಕ್ತಿಯಿಂದ ಆರಾಧಿಸುವ ಮೂಲಕ ಭಕ್ತರು ಅಮ್ಮನವರ ಅನುಗ್ರಹಕ್ಕೆ ಪಾತ್ರರಾಗುವಂತೆ ತಿಳಿಸಿದರು.

ಸಾನಿಧ್ಯ ವಹಿಸಿದ್ದ ವೇ. ಮೂ. ಮಹಾಂತಯ್ಯ ತೆಗ್ಗಿನಮಠ ಶಾಸ್ತ್ರಿಗಳು ಮಾತನಾಡಿ ಸನಾತನ ಹಿಂದೂ ಧರ್ಮದಲ್ಲಿ ನವರಾತ್ರಿ ದಿನಗಳನ್ನು ಅತ್ಯಂತ ಪವಿತ್ರವೆಂದು ಪರಿಗಣಿಸಲಾಗುತ್ತದೆ. ಪುರಾಣದಲ್ಲಿ ಹೇಳುವ ಹಾಗೆ ದೇವತೆಗಳ ಕೋರಿಕೆ ಯಂತೆ ಮಹಿಷಾಸುರನನ್ನು ತಾಯಿ ಚಾಮುಂಡೇಶ್ವರಿಯು ಸಂಹರಿಸಿ ದೇವತೆಗಳಿಗೆ ಅನುಗ್ರಹಿದ ಹಾಗೆ ನವರಾತ್ರಿಯಲ್ಲಿ ಅಮ್ಮನವರ ಆರಾಧನೆಯಿಂದ ನಮ್ಮ ಕಷ್ಟಗಳು ಮಂಜಿನಂತೆ ಕರಗುವುದು ನಿಶ್ಚಿತ.

ಚಾಮುಂಡೇಶ್ವರಿ ಅಮ್ಮನವರು ಈ ಭಾಗದಲ್ಲಿ ನೆಲೆನಿಂತಿರುವುದು ಈ ಭಾಗದ ಭಕ್ತರ ಪೂರ್ವಜನ್ಮದ ಪುಣ್ಯದ ಫಲವೆಂದು ನುಡಿದರು.

ವೇ.ಮೂ.ಸಂಜಯ ಪತ್ರಿಮಠ ಶಾಸ್ತ್ರಿಗಳು ಅಮ್ಮನವರ ಗದ್ದುಗೆಗೆ ರುದ್ರಾಭಿಷೇಕ, ಪಂಚಾಮೃತ ಅಭಿಷೇಕ,ವಿವಿಧ ಪುಷ್ಪಗಳಿಂದ ಅಲಂಕರಿಸಿ ಲೋಕ ಕಲ್ಯಾಣದ ಸಂಕಲ್ಪದೊಂದಿಗೆ ಪೂಜಾ ಕೈಂಕರ್ಯ ನೆರವೇರಿಸಿದರು.

ಇದೇ ವೇಳೆ ಮುತ್ತೈದೆಯರಿಗೆ ಉಡಿ ತುಂಬುವ ಹಾಗೂ ಪ್ರಸಾದ ವಿತರಣೆ ಕಾರ್ಯಕ್ರಮ ನಡೆಯಿತು.

ಈ ಸಂದರ್ಭದಲ್ಲಿ ಬೆಂಗಳೂರಿನ ಶನೇಚ್ಚರ ಮಂದಿರದ ಅರ್ಚಕರಾದ ಬಸವರಾಜ ಹಿರೇಮಠ ಶಾಸ್ತ್ರೀಗಳು, ಹಿರಿಯರಾದ ಬಾಳಪ್ಪ ಕುರುಬರ, ಮುಖಂಡರಾದ ಸಿದ್ದು ಕಣಬರಗಿ, ಸಂಗಮೇಶ ಹುಲಗನ್ನವರ, ಬಸವರಾಜ ಮಾಟೊಳ್ಳಿ,ಶಿವು ಜೋಳದ, ಕಿರಣ ಶಿರವಂತಿ, ಶ್ರೀಶೈಲ ಶಿಲ್ಲೇದಾರ, ಸಿದ್ದು ಶಿರವಂತಿ, ಭೀಮಸೇನ ಕಂಬಾರ, ಕಿರಣ ಚಪಳಿ ಸೇರಿದಂತೆ ಚಾಮುಂಡೇಶ್ವರಿ ದೇವಸ್ಥಾನದ ಕಮಿಟಿ ಸದಸ್ಯರು, ಸದ್ಭಕ್ತರು ಇದ್ದರು.

# ವಾರ್ಡ್ ಸ್ವಚ್ಛತೆಗೆ ನಗರ ಸೇವಕ ಸಂದೀಪ ಜೀರಗ್ಯಾಳ ನಿರಂತರ ಸಕ್ರಿಯ

**ಬೆಳಗಾವಿ:** ನಗರದ ವಾರ್ಡ್ ಸಂಖ್ಯೆ 32ರ ಸ್ವಚ್ಛತೆ, ಸುರಕ್ಷತೆ ಹೆಚ್ಚಿಸಲು ರಸ್ತೆ ಬದಿಯಲ್ಲಿ ಅಧಿಕವಾಗಿ ಬೆಳೆದ ಮರಗಳ ಕೊಂಬೆ ಕತ್ತರಿಸುವುದು ಮತ್ತು ಹೆಚ್ಚುವರಿ ಗ್ರಾಸ್ ಕಟಿಂಗ್ ಮಾಡಲಾಗುತ್ತಿದೆ ಎಂದು ಸೋಮವಾರ ನಗರ ಸೇವಕ ಸಂದೀಪ ಪಾಟೀಲ ಹೇಳಿದರು.

ಕಟಾವು ಮಾಡಲು ಅತ್ಯಂತ ಅಗತ್ಯವಿರುವ ರಸ್ತೆ ಬದಿಯ ಕೆಲವು ಮರಗಳ ಕೊಂಬೆಗಳು ಕಟಾವು ಗೊಳಿಸಿ ವಾಹನ ಸವಾರರಿಗೆ ಸುಗಮ ಸಂಚಾರಕ್ಕೆ ಅನುಕೂಲ ಮಾಡಲಾಗುತ್ತಿದೆ.

ಅದೇ ರೀತಿಯಲ್ಲಿ ಹೆಚ್ಚು ಬೆಳೆದಿರುವ ಮರದ ಕೊಂಬೆಗಳನ್ನು ಕಟಾವು ಮಾಡುತ್ತಿರುವುದರಿಂದ ಬೀದಿ ದೀಪಗಳು ರಸ್ತೆಯ ಮೇಲೆ ಸರಿಯಾಗಿ ಬೆಳಕು ಚೆಲ್ಲುವಂತಾಗಿವೆ, ಇದರ ಪರಿಣಾಮವಾಗಿ ಎಲ್ಲರೂ ವಿಶೇಷವಾಗಿ ರಾತ್ರಿ ಸಮಯದಲ್ಲಿ ಸುರಕ್ಷಿತವಾಗಿ ನಡೆದು ಸಂಚರಿಸಬಹುದು.

ಸ್ವಚ್ಛತೆ ಮತ್ತು ಹಸಿರು ಮತ್ತು ಸುರಕ್ಷಿತವಾಗಿರಿಸೋಣ ಎಂಬ ಎಂಬಂತೆನಮ್ಮ ವಾರ್ಡ್ ಸಾರ್ವಜನಿಕರು ತಮ್ಮ ವ್ಯಾಪ್ತಿಯಲ್ಲಿನ ಸ್ವಚ್ಛತೆಗೆ ಸ್ಥಳಗಳ ಫೋಟೊಗಳು ಮತ್ತು ಪ್ರಸ್ತುತ ಸ್ಥಳ (ಲೊಕೇಶನ್) ವಾಟ್ಸ್‌ಆಪ್ ಮೂಲಕ ಕಳುಹಿಸಿಕೊಟ್ಟಲ್ಲಿ ತಕ್ಷಣ ಸ್ಥಳಕ್ಕೆ ಧಾವಿಸಿ ಸ್ವಚ್ಛತೆಗೆ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಅರಣ್ಯ ಇಲಾಖೆಯ ನಿಯಮಾವಳಿಯಂತೆ ದೊಡ್ಡ ಕೊಂಬೆಗಳು ಅಥವಾ ಸಂಪೂರ್ಣ ಮರಗಳನ್ನು ಕತ್ತರಿಸುವುದು ಅರಣ್ಯ ಇಲಾಖೆಯ ಪೂರ್ವಾನುಮತಿ ಪಡೆದ ಬಳಿಕ ಮಾತ್ರ ಕಟಾವು ಮಾಡಲಾಗುತ್ತಿದೆ ಎಂದು ಮಹಾನಗರ ಪಾಲಿಕೆ ವಾರ್ಡ್ ಸಂಖ್ಯೆ 32 ನಗರ ನಗರ ಸೇವಕ ಸಂದೀಪ ಜೀರಗ್ಯಾಳ ಹೇಳಿದರು.

# ಜ.31ರಂದು ಅಂತರಾಷ್ಟ್ರೀಯ ಪ್ರಶಸ್ತಿ ಪ್ರದಾನ, ರಾಜ್ಯಮಟ್ಟದ ಯುವಜನ ಮೇಳ




**ಮುದ್ದೇಬಿಹಾಳ:** ಜ. 31 ರಂದು ಸ್ವಾಮಿ ವಿವೇಕಾನಂದ ಜಯಂತಿ ಪ್ರಯುಕ್ತ ಸ್ವಾಮಿ ವಿವೇಕಾನಂದರ ಅಂತರಾಷ್ಟ್ರೀಯ. ರಾಷ್ಟ್ರೀಯ ಮತ್ತು ರಾಜ್ಯ ಸದ್ಭಾವನ ಪ್ರಶಸ್ತಿ ಪ್ರಧಾನ ಮತ್ತು ರಾಜ್ಯಮಟ್ಟದ ಯುವಜನ ಮೇಳ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು ಎಂದು ಡಾ.ಬಾಲಾಜಿ ಹೇಳಿದರು.

ಅವರು ಪಟ್ಟಣದ ಪ್ರವಾಸಿಮಂದಿರದಲ್ಲಿ ಕರೆಯಲಾದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದರು. ಅಂತರಾಷ್ಟ್ರೀಯ 5 ಪ್ರಶಸ್ತಿ.ರಾಷ್ಟ್ರೀಯ ಮಟ್ಟದ ಹತ್ತು ಪ್ರಶಸ್ತಿ. ರಾಜ್ಯಮಟ್ಟದ 31 ಮತ್ತು ಎರಡು ಸಂಘ ಸಂಸ್ಥೆಗಳಿಗೆ ನೀಡುವ ರಾಜ್ಯ ಮಟ್ಟದ ಪ್ರಶಸ್ತಿ ಹಾಗೂ ರಾಜ್ಯಮಟ್ಟದ ಯುವಜನ ಮೇಳ ಕಾರ್ಯಕ್ರಮ ಮಾಡಲು ತೀರ್ಮಾನಿಸಿದ್ದೇವೆ. ಹೀಗಾಗಿ ಮುದ್ದೇಬಿಹಾಳ ಕಾರ್ಯಕ್ರಮ ಎಂದರೆ ರಾಜ್ಯವೆ ತಿರುಗಿ ನೋಡುವಂತಹ ಕಾರ್ಯಕ್ರಮ ವಾಗುತ್ತಿದ್ದು. ವಿಜಯಪುರ ಜಿಲ್ಲಾ ಹಾಗೂ ಮುದ್ದೇಬಿಹಾಳ ತಾಲೂಕು ಘಟಕ ದಿಂದ ಸಂಘದ ಘನತೆಯನ್ನು ಹೆಚ್ಚಿಸಿದೆ. ಜಿಲ್ಲಾಧ್ಯಕ್ಷ ಪುಂಡಲಿಕ್ ಮುರಾಳ ಮತ್ತು ಸಂಘದ ಎಲ್ಲಾ ಸದಸ್ಯರಿಗೆ ಅಭಿನಂದನೆಗಳು. ಇಂಥ ಕಾರ್ಯಕ್ರಮಗಳು ಯಶಸ್ವಿಯಾಗಬೇಕಾದರೆ ಪತ್ರಿಕಾ ಮಾಧ್ಯಮದ ಸ್ನೇಹಿತರ ಸಹಕಾರ ಮತ್ತು ಬೆಂಬಲ ಸದಾ ನಮ್ಮ ಸಂಘದ ಮೇಲೆ ನೀಡುತ್ತಾ ಬಂದಿರುವುದ ರಿಂದ ಮುದ್ದೇಬಿಹಾಳದಲ್ಲಿ 15 ವರ್ಷ ಇಂತಹ ಅದ್ಭುತ ಕಾರ್ಯಕ್ರಮ ನಡೆಯುತ್ತಾ ಬಂದಿದ್ದು ಮುದ್ದೇಬಿಹಾಳ ಪತ್ರಿಕಾ ಬಂಧುಗಳಿಗೆ ಹೃದಯ ತುಂಬಿದ ಅಭಿನಂದನೆಗಳು. ಸರ್ಕಾರಗಳು ಯುವಜನ ಮೇಳ ಹಾಗೂ ಯುವ ಪ್ರಶಸ್ತಿಗಳನ್ನು ನಿಲ್ಲಿಸಿದ್ದು ಮತ್ತೆ ಪುನಃ ಪ್ರಾರಂಭಿಸಬೇಕು ಮತ್ತು ಸಂಘಗಳಿಗೆ ಅನುದಾನ ವನ್ನು ನೀಡಬೇಕು ಅಂದಾಗ ಯುವಕ ಸಂಘಗಳು ಬೆಳೆಯಲು ಸಾಧ್ಯವಾಗುತ್ತದೆ.

ಅಕ್ಟೋಬರ್ ತಿಂಗಳಲ್ಲಿ ಕೊಪ್ಪಳದಲ್ಲಿ ಅಂಬೇಡ್ಕರ್ ಪ್ರಶಸ್ತಿ ನೀಡಲು ತೀರ್ಮಾನ ಮಾಡಿದ್ದೇವೆ. ಸರ್ಕಾರ ಯುವಕ ಸಂಘಗಳ ಕಡಗನನೆ ಮಾಡುತ್ತಿದೆ. ಹೀಗಾಗಿ ಮುಖ್ಯಮಂತ್ರಿ ಗಳಿಗೆ ಅದರ ಕುರಿತು ಮನವಿ ಸಲ್ಲಿಸಲಿದ್ದೇವೆ. ಕರ್ನಾಟಕ ಸರ್ಕಾರ ಯುವ ಪ್ರಾಧಿಕಾರ ಪ್ರಾರಂಭ ಮಾಡಲು ಒತ್ತಾಯಿಸಿದ್ದೇವೆ.

ಸ್ಥಳೀಯ ಸಾಹಸ ಮಾಡಿದವರಿಗೆ ಗೌರವ ಮತ್ತು ವೀರ ಯೋಧರಿಗೆ ವಿಶೇಷ ಗೌರವ ಸಲ್ಲಿಸಲು ತೀರ್ಮಾನ ಮಾಡಿದ್ದೇವೆ. ಪ್ರಶಸ್ತಿ ಪಡೆದವರ ಸ್ಮರಣ ಸಂಚಿಕೆ ಹೊರತರುವ ಪ್ರಯತ್ನ ಮಾಡುತ್ತೇವೆ. ಈ ಒಂದು ಕಾರ್ಯಕ್ರಮಕ್ಕೆ ಕೊಪ್ಪಳದ ಗವಿ ಸಿದ್ದೇಶ್ವರ ಶ್ರೀ. ಹಂಪಿ ಮತ್ತು ಜಾನಪದ ವಿಶ್ವವಿದ್ಯಾಲಯದ ಕುಲಪತಿಗಳು, ಸಚಿವ ಸಂತೋಷ ಲಾಡ್ ಮತ್ತು ಸ್ಥಳೀಯ ಶಾಸಕ ಸಿ.ಎಸ್. ನಾಡಗೌಡ, ಸೇರಿದಂತೆ ಅನೇಕ ಗಣ್ಯರು ಭಾಗವಹಿಸಲಿದ್ದಾರೆ. ಎಂದು ತಿಳಿಸಿದರು.

ಈ ವೇಳೆ ಜಿಲ್ಲಾ ಅಧ್ಯಕ್ಷ ಪುಂಡಲೀಕ ಮುರಾಳ ಮಾತನಾಡಿ ಪ್ರತಿ ವರ್ಷದಂತೆ ಈ ಭಾರಿಯು 15ನೇ ವರ್ಷ ಸ್ವಾಮಿ ವಿವೇಕಾನಂದ ಜಯಂತಿಯನ್ನು ಹಮ್ಮಿಕೊಳ್ಳಲಾಗುವುದು ಇಡೀ ಒಂದು ದಿನದ ಕಾರ್ಯಕ್ರಮ ನಡೆಯಲಿದ್ದು ಬೆಳಿಗ್ಗೆ ಸ್ವಾಮಿ ವಿವೇಕಾನಂದರ ಭಾವಚಿತ್ರದ ಮೆರವಣಿಗೆ. ಯುವಜನ ಮೇಳ ಉದ್ಘಾಟನೆ. ನಂತರ ಜನಪದ ಗೀತೆ.ಜನಪದ ನೃತ್ಯ. ಲಾವಣಿ. ಸೋಬಾನ ಪದ. ಭಾವಗೀತೆ. ಏಕಪಾತ್ರಾಭಿನಯ ಅನೇಕ ಕಾರ್ಯಕ್ರಮಗಳು ವೇದಿಕೆ ಮೇಲೆ ಜರಗಲಿದ್ದು ಸಾಯಂಕಾಲ ಸ್ವಾಮಿ ವಿವೇಕಾನಂದರ ಅಂತರಾಷ್ಟ್ರೀಯ ರಾಷ್ಟ್ರೀಯ ರಾಜ್ಯ ಪ್ರಶಸ್ತಿ ಪ್ರಧಾನ ಸಮಾರಂಭ ಮತ್ತು ರಾತ್ರಿ ಸಂಸ್ಕೃತಿಕ ಯುವ ವೈಭವ ಕಾರ್ಯಕ್ರಮ ಜರಗಲಿದ್ದು ಹೆಚ್ಚಿನ ಸಂಖ್ಯೆಯಲ್ಲಿ ಯುವಕರು ಹಿತೈಷಿಗಳು ಪಾಲ್ಗೊಳ್ಳಬೇಕೆಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಸಂಘದ ಗೌರವ ಅಧ್ಯಕ್ಷ ಅಶೋಕ ನಾಡಗೌಡ, ವಿಶ್ರಾಂತ ಪ್ರೊಫೆಸರ್ ಎಸ್. ಎಸ್. ಹೂಗಾರ, ಅಕ್ಷರ ದಾಸೋಹದ ಸಹಾಯಕ ನಿರ್ದೇಶಕ ಮತ್ತು ಸಾಹಿತಿ ಎಂ. ಎಂ. ಬೆಳಗಲ್ಲ. ಬಾಗಲಕೋಟೆ ಜಿಲ್ಲಾಧ್ಯಕ್ಷ ದಾನಯ್ಯ ಸ್ವಾಮಿ ಹಿರೇಮಠ, ನಿಕಟ ಪೂರ್ವ ಅಧ್ಯಕ್ಷ ಮಾಂತೇಶ ಬೂದಿಹಾಳ ಮಠ, ತಾಲೂಕ ಅಧ್ಯಕ್ಷ ವೀರೇಶ ಗುರುಮಠ, ಕರ್ನಾಟಕ ಪತ್ರಕರ್ತ ಸಂಘದ ಬಾಗಲಕೋಟ ಜಿಲ್ಲಾಧ್ಯಕ್ಷ ಡಿ. ಬಿ. ವಿಜಯಶಂಕರ, ಜಿಲ್ಲಾ ಪ್ರಶಸ್ತಿ ಪುರಸ್ಕೃತ ಸಂಗಮೇಶ ಹಾರಿವಾಳ, ತಾಲೂಕ ಪ್ರಧಾನ ಕಾರ್ಯದರ್ಶಿ ರಾಜು ತುಂಬಗಿ, ಹಿರಿಯರಾದ ಸಂಗಣ್ಣಕಂಚ್ಯಾಣಿ ತಾಲೂಕು ಉಪಾಧ್ಯಕ್ಷರಾದ ಅಪ್ಪುಗೌಡ ಪಾಟೀಲ, ಹಿರೇ ಮುರಾಳ ವಲಯ ಘಟಕದ ಅಧ್ಯಕ್ಷರಾದ ಮೈಬು ಮುಲ್ಲಾ. ಉಪಾಧ್ಯಕ್ಷಯ ಸಿದ್ದಯ್ಯ ಮಠ ಅಮಿನಗಡದ ವಲಯ ಘಟಕದ ಅಧ್ಯಕ್ಷ ಕಿರಣ್.ಭೀಮಸಿ ರಾಠೋಡ, ಸದಸ್ಯರಾದ ಮುತ್ತಯ್ಯ ಹಿರೇಮಠ. ಬಸವರಾಜ್ ಮೇಟಿ. ವೀರೇಶ್ ತಿಮ್ಮಣ್ಣ ಗೌಂಡಿ.ಮೌನೇಶ್ ಮಾದರ ಕಾರಕೂರ. ಕೃಷ್ಣ ಕುಂಬಾರ. ಸಹ ಸಂಚಾಲಕ ಆಕಾಶ ನಾಲತವಾಡ. ಸೇರಿದಂತೆ ಸಂಘದ ಸದಸ್ಯ ಉಪಸ್ಥಿತರಿದ್ದರು.

# ನೂತನ ಅಧ್ಯಕ್ಷ ಉಪಾಧ್ಯಕ್ಷರ ಅವಿರೋಧ ಆಯ್ಕೆ



**ಗೋಕಾಕ:** ಘಟಪ್ರಭಾ ಸಹಕಾರಿ ಸಕ್ಕರೆ ಕಾರ್ಖಾನೆಯ ನೂತನ ಅಧ್ಯಕ್ಷರಾಗಿ ಜೋಕಾನಟ್ಟಿ ಗ್ರಾಮದ ಶಿದ್ಲಿಂಗಪ್ಪ ಸಿದ್ದಪ್ಪ ಕಂಬಳಿ ಮತ್ತು ಉಪಾಧ್ಯಕ್ಷರಾಗಿ ರಂಗಾಪೂರ ಗ್ರಾಮದ ಮಲ್ಲಿಕಾರ್ಜುನ ಭೀಮಪ್ಪ ಕಬ್ಬೂರ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಶನಿವಾರದಂದು ಕಾರ್ಖಾನೆಯ ಸಭಾಗೃಹದಲ್ಲಿ ಜರುಗಿದ ನೂತನ ಅಧ್ಯಕ್ಷ– ಉಪಾಧ್ಯಕ್ಷರ ಚುನಾವಣೆಯಲ್ಲಿ ತಲಾ ಒಂದೊಂದು ನಾಮಪತ್ರ ಸಲ್ಲಿಕೆಯಾಗಿದ್ದರಿಂದ ಎರಡೂ ಸ್ಥಾನಗಳಿಗೆ ಅವಿರೋಧವಾಗಿ ಆಯ್ಕೆ ನಡೆಯಿತು ಎಂದು ಚುನಾವಣಾಧಿಕಾರಿಯಾಗಿದ್ದ ಗೋಕಾಕ ಸಹಕಾರ ಅಭಿವೃದ್ಧಿ ಅಧಿಕಾರಿ ಎಸ್.ಬಿ.ಬಿರಾದಾರ ಪಾಟೀಲ ಅವರು ಪ್ರಕಟಿಸಿದರು.

ಇಲ್ಲಿಯವರೆಗೆ ಅಧ್ಯಕ್ಷರಾಗಿದ್ದ ಅಶೋಕ ಪಾಟೀಲ ಮತ್ತು ಉಪಾಧ್ಯಕ್ಷರಾಗಿದ್ದ ರಾಮಣ್ಣಾ ಮಹಾರೆಡ್ಡಿಯವರ ನಿಧನದಿಂದ ಎರಡೂ ಸ್ಥಾನಗಳಿಗೆ ಚುನಾವಣೆ ನಡೆದಿತ್ತು. ಅಧ್ಯಕ್ಷ– ಉಪಾಧ್ಯಕ್ಷರಾಗಿ ಆಯ್ಕೆಯಾಗಿರುವ ಕಂಬಳಿ ಮತ್ತು ಕಬ್ಬೂರ ಅವರ ಅಧಿಕಾರವಧಿಯು ಮುಂದಿನ 2028 ರ ವರೆಗೆ ಇರಲಿದೆ.

**ಅಭಿವೃದ್ಧಿಗೆ ಯತ್ನ:** ಶಾಸಕ ಬಾಲಚಂದ್ರ ಜಾರಕಿಹೊಳಿ ಮತ್ತು ಅವರ ಸಹೋದರರ ಮಾರ್ಗದರ್ಶನದಲ್ಲಿ ಕಾರ್ಖಾನೆಯನ್ನು ಅಭಿವೃದ್ಧಿ ಪಡಿಸಲಾಗುವುದು. ಇದಕ್ಕೆ ರೈತರ ಸಹಾಯ, ಸಹಕಾರ ಅವಶ್ಯವಾಗಿದೆ ಎಂದು ನೂತನ ಅಧ್ಯಕ್ಷ ಶಿದ್ಲಿಂಗಪ್ಪ ಕಂಬಳಿ ತಿಳಿಸಿದರು.

ಕಾರ್ಖಾನೆಯ ಆಡಳಿತ ಮಂಡಳಿಯ ಸದಸ್ಯರು ಕಂಬಳಿ ಮತ್ತು ಕಬ್ಬೂರ ಅವರನ್ನು ಅಭಿನಂದಿಸಿ ಮಾತನಾಡಿದರು.

**ಶಾಸಕರಿಗೆ ಗೌರವ ಅರ್ಪಿಸಿದ ಅಧ್ಯಕ್ಷ– ಉಪಾಧ್ಯಕ್ಷರು:** ಕಾರ್ಖಾನೆಗೆ ಹೊಸ ಅಧ್ಯಕ್ಷ– ಉಪಾಧ್ಯಕ್ಷರಾಗುತ್ತಿದ್ದಂತೆಯೇ ಶಾಸಕರ ಗೃಹ ಕಚೇರಿಗೆ ಆಗಮಿಸಿದ ಆಡಳಿತ ಮಂಡಳಿಯ ಸದಸ್ಯರು ಅರಭಾವಿ ಶಾಸಕ, ಬೆಮುಲ್ ಅಧ್ಯಕ್ಷ ಮತ್ತು ಕಾರ್ಖಾನೆಯ ಮಾರ್ಗದರ್ಶಕ ಬಾಲಚಂದ್ರ ಜಾರಕಿಹೊಳಿಯವರನ್ನು ಸತ್ಕರಿಸಿ, ಗೌರವಿಸಿದರು.

ನಂತರ ಮಾತನಾಡಿದ ಅವರು, ರೈತರು ಉತ್ತಮ ಇಳುವರಿ ಕಬ್ಬನ್ನು ಕಾರ್ಖಾನೆಗೆ ಪೂರೈಕೆ ಮಾಡಿ, ಪ್ರಗತಿಗೆ ಕೈ ಜೋಡಿಸಬೇಕು. ಹೊಸ ಅಧ್ಯಕ್ಷ– ಉಪಾಧ್ಯಕ್ಷರು ಮತ್ತು ಆಡಳಿತ ಮಂಡಳಿಯವರು ರೈತರ ಹಿತಕ್ಕನುಗುಣವಾಗಿ ಕಾರ್ಯ ನಿರ್ವಹಿಸುವಂತೆ ಸಲಹೆಯನ್ನು ಮಾಡಿದರು.

ಹಿಂದಿನ ಅಧ್ಯಕ್ಷ– ಉಪಾಧ್ಯಕ್ಷರಾಗಿ ಕಾರ್ಯ ನಿರ್ವಹಿಸಿದ್ದ ಅಶೋಕ ಪಾಟೀಲ ಮತ್ತು ರಾಮಣ್ಣಾ ಮಹಾರೆಡ್ಡಿಯವರ ನಿಧನದಿಂದ ತೆರವಾಗಿದ್ದ ಎರಡು ಸ್ಥಾನಗಳಿಗೆ ದಿವಂಗತರ ಮಕ್ಕಳನ್ನು ಕಾರ್ಖಾನೆಯ ಹೊಸ ನಿರ್ದೇಶಕರನ್ನಾಗಿ ಆಯ್ಕೆ ಮಾಡಲಾಗಿದೆ ಎಂದವರು ಹೇಳಿದರು.

> ಈ ಭಾಗದ ರೈತರ ಜೀವನಾಡಿಯಾಗಿರುವ ಘಟಪ್ರಭಾ ಸಹಕಾರಿ ಸಕ್ಕರೆ ಕಾರ್ಖಾನೆಯ ಕಬ್ಬು ನುರಿಸುವ ಹಂಗಾಮನ್ನು ಮುಂದಿನ ನವೆಂಬರ್ ತಿಂಗಳಿನ ಮೊದಲ ವಾರದಲ್ಲಿ ಆರಂಭಿಸಲಾಗುವುದು. ರೈತರು ನಮ್ಮ ಕಾರ್ಖಾನೆಗೆ ಕಬ್ಬನ್ನು ಪೂರೈಕೆ ಮಾಡಿ ನಮ್ಮೊಂದಿಗೆ ಕೈ ಜೋಡಿಸಬೇಕು. ಪ್ರಸಕ್ತ ಹಂಗಾಮಿನಲ್ಲಿ 3 ರಿಂದ 5 ಲಕ್ಷ ಮೆ.ಟನ್ ಕಬ್ಬು ನುರಿಸುವ ಗುರಿಯನ್ನು ಹೊಂದಲಾಗಿದೆ. ರೈತರ ಅಭಿವೃದ್ಧಿಯೇ ನಮಗೆ ಮುಖ್ಯವಾಗಿದೆ.
>
> **ಬಾಲಚಂದ್ರ ಜಾರಕಿಹೊಳಿ,**
> **ಶಾಸಕ, ಬೆಮುಲ್ ಅಧ್ಯಕ್ಷ**

ಈ ಸಂದರ್ಭದಲ್ಲಿ ನಿರ್ದೇಶಕರಾದ ಗಿರೀಶ ಹಳ್ಳೂರ, ಭೂತಪ್ಪ ಗೊಡೇರ, ಮಹಾದೇವಪ್ಪ ಭೋವಿ, ಮಾಳಪ್ಪ ಜಾಗನೂರ, ಲಕ್ಷ್ಮಣ ಗಣಪ್ಪಗೋಳ, ಶಿವಲಿಂಗಪ್ಪ ಪೂಜೇರಿ, ಜಗದೀಶ ಬಂಡ್ರೋಳಿ, ವಿನೀತ ಪಾಟೀಲ, ಅರುಣ ಮಹಾರೆಡ್ಡಿ, ಶಿವನಗೌಡ ಪಾಟೀಲ (ಶಿವಾಪೂರ), ಅರೀಫ ಪೀರಜಾದೆ, ಯಲ್ಲವ್ವ ಸಾರಾಪೂರ, ಲಕ್ಕವ್ವ ಬೆಳಗಲಿ, ಲೆಕ್ಕ ಪರಿಶೋಧಕ ಸೈದಪ್ಪ ಗದಾಡಿ, ಕಚೇರಿಯ ಅಧೀಕ್ಷಕ ಈರಣ್ಣ ಜಂಬಗಿಯವರು ಉಪಸ್ಥಿತರಿದ್ದರು.

# ಸಂಘದ ಪತ್ರದ ದುರುಪಯೋಗ: ಕ್ರಮಕ್ಕೆ ಒತ್ತಾಯಿಸಿ ಮನವಿ



**ರಬಕವಿ–ಬನಹಟ್ಟಿ:** ಕೆಲವು ಪಟ್ಟಭದ್ರ ಹಿತಾಸಕ್ತಿಗಳು ರಾಷ್ಟ್ರೀಯ ವಿನಕರ ಸೇವಾ ಸಂಘದ ಪತ್ರ ಬಳಸಿ ದುರುಪಯೋಗ ಮಾಡಿಕೊಳ್ಳುತ್ತಿದ್ದು, ಕೂಡಲೇ ಈ ಕುರಿತು ಪರಿಶೀಲನೆ ಮಾಡಿ ಅಂಥವರ ಮೇಲೆ ಸೂಕ್ತ ಕ್ರಮ ತೆಗೆದುಕೊಳ್ಳಬೇಕು ಎಂದು ಕರ್ನಾಟಕ ರಾಜ್ಯ ನೇಕಾರ ಸೇವಾ ಸಂಘದ ರಾಜ್ಯಾಧ್ಯಕ್ಷ ಶಿವಲಿಂಗ ಟಿರಕಿ ಆಗ್ರಹಿಸಿದರು.

ಅವರು ಸೋಮವಾರ ಇಲ್ಲಿನ ತಹಶೀಲ್ದಾರ್ ಕಾರ್ಯಾಲಯದಲ್ಲಿ ತೇರದಾಳ ತಹಶೀಲ್ದಾರ್ ವಿಜಯಕುಮಾರ ಕಡಕೋಳ ಅವರಿಗೆ ಮನವಿ ಸಲ್ಲಿಸಿ ಮಾತನಾಡಿದರು.

ಮಾಣಕಾಪುರ ಪಾವರಲೂಮ್ ಅಸೋಸಿಯೇಶನ್ ಇದರ ನೊಂದಣಿಯನ್ನು ಬಳಸಿಕೊಂಡು ಅನಧಿಕೃತ ಸಹಿಯನ್ನು ಮಾಡಿ ಬನಹಟ್ಟಿಯ ನೇಕಾರರಾದ ಶಿವಾನಂದ ತೆಗ್ಗಿ, ಮಹಾದೇವ ನುಚ್ಚಿ, ಆನಂದ ಜಗದಾಳ, ವಿಶಾಲ ಬೀಳಗಿ, ಲಕ್ಕಪ್ಪ ಗಸ್ತಿ, ಶ್ರೀಧರ ಧಬಾಡಿ ಇವರು ಅನೇಕ ಇಲಾಖೆಗಳಿಗೆ ಮತ್ತು ಸಾಮಾಜಿಕ ಜಾಲತಾಣಗಳಲ್ಲಿ ಆರೋಪಗಳನ್ನು ಮಾಡುತ್ತಿದ್ದಾರೆ. ಇದೇ ಪತ್ರದ ಮೂಲಕ ಸರ್ಕಾರಕ್ಕೂ ತಪ್ಪು ಮಾಹಿತಿಯನ್ನು ಕೂಡಾ ನೀಡುತ್ತಿದ್ದಾರೆ. ಅವರು ಬಳಸುವ ಪತ್ರವು ಅನಧಿಕೃತವಾಗಿದ್ದು, ಅಂಥ ಪತ್ರಗಳಿಗೆ ಯಾವುದೆ ಮಾನ್ಯತೆ ನೀಡಬಾರದು.

ಮುಂದಿನ ದಿನಗಳಲ್ಲಿ ಈ ಪತ್ರವನ್ನು ಬಳಸಿಕೊಂಡು ಯಾವುದೆ ಹೋರಾಟ ಮಾಡಿದರೂ ಅದಕ್ಕೆ ಕರ್ನಾಟಕ ರಾಜ್ಯ ನೇಕಾರ ಸೇವಾ ಸಂಘವು ಜವಾಬ್ದಾರಿಯಾಗಿರುವುದಿಲ್ಲ ಎಂದು ಶಿವಲಿಂಗ ಟಿರಕಿ ತಿಳಿಸಿದರು.

ಈ ಸಂದರ್ಭದಲ್ಲಿ ರಾಜೇಂದ್ರ ಮಿರ್ಜಿ, ಸಂಗಪ್ಪ ಉದಗಟ್ಟಿ, ಗಂಗಪ್ಪ ಒಂಟಗೂಡಿ, ರಾಜು ನಡುವಿನಮನಿ, ರಮೇಶ ಬಸಪ್ಪಗೋಳ, ಮಲ್ಲಯ್ಯ ಮಠಪತಿ, ಲಕ್ಕಪ್ಪ ಪವಾರ ಮತ್ತು ಈರಪ್ಪ ಅಥಣಿ ಇದ್ದರು.

### ವಿಜಯದಶಮಿ ಉತ್ಸವ, ಪಥ ಸಂಚಲನ ಸಮಾರಂಭದಲ್ಲಿ ಸುಧೀರ ಘೋರ್ಪಡೆ ಕರೆ

# ಸೇವಾ ಮನೋಭಾವನೆ ಬೆಳೆಸಿಕೊಂಡಾಗ ಮಾತ್ರ ಬಲಿಷ್ಠ ರಾಷ್ಟ್ರ ನಿರ್ಮಾಣ

**ಬೈಲಹೊಂಗಲ:** ದೇಶದ ಪ್ರತಿಯೊಬ್ಬ ನಾಗರಿಕನು ರಾಷ್ಟ್ರೀಯ ಸೇವಾ ಮನೋಭಾವನೆ ಬೆಳೆಸಿಕೊಂಡಾಗ ಮಾತ್ರ ಬಲಿಷ್ಠ ರಾಷ್ಟ್ರ ನಿರ್ಮಾಣ ಮಾಡಲು ಸಾಧ್ಯವೆಂದು ಆರ್‌ಎಸ್‌ಎಸ್ ಕರ್ನಾಟಕ ಉತ್ತರ ಪ್ರಾಂತ ಸಂಪರ್ಕ ಪ್ರಮುಖ ಸುಧೀರ ಘೋರ್ಪಡೆ ಕರೆ ನೀಡಿದರು.

ಪಟ್ಟಣದ ಹೊಸೂರ ರಸ್ತೆಯಲ್ಲಿರುವ ಕೆಆರ್‌ಸಿಇಎಸ್ ಆಂಗ್ಲ ಮಾಧ್ಯಮ ಶಾಲೆಯ ಆವರಣದಲ್ಲಿ ಸ್ಥಳೀಯ ರಾಷ್ಟ್ರೀಯ ಸ್ವಯಂ ಸೇವಕ ಸಂಘದಿಂದ ರವಿವಾರ ರಾತ್ರಿ 7ಕ್ಕೆ ನಡೆದ ವಿಜಯದಶಮಿ ಉತ್ಸವ ಮತ್ತು ಪಥ ಸಂಚಲನ ಸಮಾರಂಭದ ಬೌಧಿಕ ಉದ್ದೇಶಿಸಿ ಮಾತನಾಡಿ, ಆರ್‌ಎಸ್‌ಎಸ್ ಪ್ರತಿಯೊಬ್ಬರಲ್ಲಿ ರಾಷ್ಟ್ರಾಭಿಮಾನ ಮೂಡಿಸುವಲ್ಲಿ ನಿರಂತರವಾಗಿ ಕೆಲಸ ಮಾಡುತ್ತಿದ್ದು, ಸಂಘ ಸಂಸ್ಥಾಪಣೆಗೊಂಡು ಶತಮಾನೋತ್ಸವ ಆಚರಣೆ ಮಾಡುತ್ತಿರುವದು ನಮ್ಮೆಲ್ಲರಿಗೆ ಸಂತಸದ ಸಂಗತಿ. ಆರ್‌ಎಸ್‌ಎಸ್ ಎಬಿವಿಪಿ, ರಾಷ್ಟ್ರೋತ್ಥಾನ ಬಳಗ, ಸೇವಾ ಭಾರತಿ, ವಿಶ್ವ ಹಿಂದೂ ಪರಿಷತ್, ಭಜರಂಗ ದಳ ಇವೆಲ್ಲವುಗಳು ಒಂದು ಪರಿವಾರ ಇದ್ದಂತೆ ಎಂದರು. ದೈಹಿಕ ಮತ್ತು ಮಾನಸಿಕ ಬೆಳವಣಿಗೆಗೆ ಆರ್‌ಎಸ್‌ಎಸ್ ಸಹಕಾರಿಯಾಗಿದೆ ಎಂದರು.

**ವಿವಿಧ ಕಾರ್ಯಕ್ರಮ:** ಧ್ವಜಾರೋಹಣ, ಆಯುಧ ಪೂಜೆ ಮಾಡಲಾಯಿತು. ಸಂಸ್ಥಾಪಕ ಡಾಕ್ಟರ್ ಜೀ, ಗುರೂಜಿ, ಭಾರತ ಮಾತೆ ಭಾವಚಿತ್ರಗಳಿಗೆ ಪೂಜೆ ಸಲ್ಲಿಸಲಾಯಿತು.

ಮುಖ್ಯ ಅತಿಥಿಗಳಾಗಿ ಡಾ.ಸಾಗರ ಕುಲಕರ್ಣಿ ಮಾತನಾಡಿ, ಆರ್‌ಎಸ್‌ಎಸ್ ಸಂಘಟಣೆ ಈ ದೇಶದ ಸಂಸ್ಕೃತಿ-ಸಂಸ್ಕಾರ ಉಳಿಸಲು ಕಂಕಣ ತೊಟ್ಟು ನಿಂತಿದ್ದು ಪ್ರತಿಯೊಬ್ಬರು ಸಂಘಟಿತರಾಗಿ ಬಲಿಷ್ಠ ಹಿಂದು ರಾಷ್ಟ್ರ ನಿರ್ಮಾಣಕ್ಕಾಗಿ ಸಂಕಲ್ಪ ತೊಡಬೇಕಾಗಿದೆ ಎಂದರು.

ಮಾಜಿ ಶಾಸಕ ಡಾ.ವಿಶ್ವನಾಥ ಪಾಟೀಲ, ಡಾ.ಎ.ಎನ್.ಬಾಳಿ, ವಿಜಯ ಮೆಟಗುಡ್ಡ, ಮುರಳೀಧರ ಮಾಳೋದೆ, ಮುಕುಂದ ಕುಲಕರ್ಣಿ, ಪ್ರಮೋದಕುಮಾರ ವಕ್ಕುಂದಮಠ, ಕಾಶೀನಾಥ ಬಿರಾದಾರ, ತಾಲೂಕಾ ಕಾರ್ಯನಿರ್ವಾಹಕ ರಮೇಶ ನೇಗಿನಹಾಳ, ಗಿರೀಶ ಹರಕುಣಿ, ಪ್ರಶಾಂತ ಅಮ್ಮಿನಬಾಂವಿ ಸೇರಿದಂತೆ ನೂರಾರು ಸ್ವಯಂಸೇವಕರು, ಮಹಿಳೆಯರು, ನಾಗರಿಕರು ಉಪಸ್ಥಿತರಿದ್ದರು.

ಡಿವೈಎಸ್ಪಿ ಡಾ.ವೀರಯ್ಯ ಹಿರೇಮಠ, ಸಿಪಿಐ ಪ್ರಮೋದ ಯಲಿಗಾರ ನೇತೃತ್ವದಲ್ಲಿ ಬಿಗಿ ಪೊಲೀಸ್ ಬಂದು ಬಸ್ತ್ ಏರ್ಪಡಿಸಲಾಗಿತ್ತು.



## ಕಣ್ಮನ ಸೆಳೆದ ಆಕರ್ಷಕ ಪಥ ಸಂಚಲನ

ಪಟ್ಟಣದಲ್ಲಿ ರವಿವಾರ ನಡೆದ ಆರ್‌ಎಸ್‌ಎಸ್ ಪಥಸಂಚಲನ ನೋಡುಗರ ಕಣ್ಮನ ಸೆಳೆಯಿತು. ಸ್ಥಳೀಯ ಪ್ರಮುಖ ಬೀದಿಗಳಲ್ಲಿ ಪಥ ಸಂಚಲನ ನಡೆಸಿದ ಸ್ವಯಂ ಸೇವಕರು ಹಿಂದೂ ರಾಷ್ಟ್ರ ನಿರ್ಮಾಣದಲ್ಲಿ ಜಾಗೃತಿ ಮೂಡಿಸಿದರು. ಚನ್ನಮ್ಮ ಸಮಾಧಿ ಸ್ಥಳದಿಂದ ಆರಂಭವಾದ ಪಥ ಸಂಚಲನ ರಾಯಣ್ಣ ವೃತ್ತ, ಜವಳಿಕೂಟ, ಉಪ್ಪಿನಕೂಟ, ಹಳೇ ಹನುಮಂತ ದೇವರ ದೇವಸ್ಥಾನ, ಇಂಚಲ ಕ್ರಾಸ್, ಬಸ್ ನಿಲ್ದಾಣ, ಸೋಮವಾರ ಪೇಟೆ, ಹರಳಯ್ಯ ಕಾಲೋನಿ ಮಾರ್ಗವಾಗಿ ಹೊಸೂರ ರಸ್ತೆಯಲ್ಲಿ ಸಂಚರಿಸಿ, ಕೆಆರ್‌ಸಿಇಎಸ್ ಶಾಲೆ ತಲುಪಿತು. ದಾರಿಯುದ್ದಕ್ಕೂ ಸ್ವಯಂ ಸೇವಕರ ಮೇಲೆ ದೇಶಾಭಿಮಾನಿಗಳು ಹೂಮಳೆ ಸುರಿಸಿದರು. ಭಾರತ ಮಾತಾಕೀ ಜೈ ಎಂಬ ಘೋಷಣೆ ಮೊಳಗಿದವು.

> ವ್ಯಕ್ತಿ ನಿರ್ಮಾಣ, ಬಲಿಷ್ಠ ನಾಯಕತ್ವದ ಮೂಲಕ ರಾಷ್ಟ್ರ ನಿರ್ಮಾಣದ ಕನಸು ಹೊತ್ತು ಡಾಕ್ಟರ ಕೇಶವ ಹೆಗಡೆವಾರ ಆರ್‌ಎಸ್‌ಎಸ್ ಸ್ಥಾಪನೆ ಮಾಡಿ ರಾಷ್ಟ್ರ ಮಟ್ಟದಲ್ಲಿ ಒಗ್ಗಟ್ಟಿನ ಕೊರತೆ ಇದ್ದಾಗ, ಮೊಘಲರು, ಬ್ರಿಟಿಷರ ಆಡಳಿತದಿಂದ ದೇಶ ತತ್ತರಿಸಿತ್ತು. ಇದರಿಂದ ಹೊರಬರುವ ಕಾರಣಕ್ಕಾಗಿಯೇ 1925ರಲ್ಲಿ ನಾಗಪೂರದಲ್ಲಿ ಕೆಲವೇ ಯುವಕರಿಂದ ಆರಂಭವಾದ ಆರ್‌ಎಸ್‌ಎಸ್ ಸಂಘಟಣೆ ದೇಶ್ಯಾದ್ಯಂತ 72 ಸಾವಿರ ಶಾಖೆಗಳನ್ನು ಹೊಂದಿದ್ದು, ಕೋಟ್ಯಾಂತರ ಸ್ವಯಂ ಸೇವಕರನ್ನು ಹೊಂದಿ ಸಂಘ ಹಿಂದು ಸಮಾಜದಲ್ಲಿ ಸಾಮರಸ್ಯ ಮೂಡಿಸುತ್ತಿದೆ.
>
> **ಸುಧೀರ ಘೋರ್ಪಡೆ**
> **ಆರ್‌ಎಸ್‌ಎಸ್ ಪ್ರಾಂತ ಸಂಪರ್ಕ ಪ್ರಮುಖರು, ಕರ್ನಾಟಕ ಉತ್ತರ**

# ಆಕರ್ಷಕ ಪಥಸಂಚಲನಕ್ಕೆ ಮನಸೋತ ದೇಶ ಭಕ್ತರು



**ತೇರದಾಳ:** ರಾಷ್ಟ್ರೀಯ ಸ್ವಯಂ ಸೇವಕ ಸಂಘದ ವಾರ್ಷಿಕೋತ್ಸವ ನಿಮಿತ್ತ ಇಲ್ಲಿನ ಸಂಘದ ಆಶ್ರಯದಲ್ಲಿ ಭಾನುವಾರ ನಡೆದ ಆಕರ್ಷಕ ಪಥಸಂಚಲಕ್ಕೆ ಸಾರ್ವಜನಿಕರು ಮನಸೋತರು.

ಪ್ರಭುಲಿಂಗ ಪದವಿ ಪೂರ್ವ ಕಾಲೇಜಿನಿಂದ ಪ್ರಾರಂಭಗೊಂಡ ಪಥಸಂಚಲನ, ಕಲ್ಲಟ್ಟಿ ಗಲ್ಲಿ, ಎಸ್‌ಬಿಐ, ದ್ವಾರ ಬಾಗಿಲು, ಪ್ರಭುದೇವರ ದೇವಸ್ಥಾನ, ಸಿದ್ಧೇಶ್ವರ ಗಲ್ಲಿ, ಮೋಪಗಾರ ಗಲ್ಲಿ, ಗುಮ್ಮಟ ಗಲ್ಲಿ, ಭೋವಿ ಗಲ್ಲಿ, ಅಂಬೇಡ್ಕರ್ ವೃತ್ತ, ಹಳಪೇಟ ಗಲ್ಲಿ, ಯಲ್ಲಮ್ಮದೇವಿ ದೇವಸ್ಥಾನ, ಹರಳಯ್ಯ ರಸ್ತೆ, ಮಹಾವೀರ ವೃತ್ತ, ಬಸ್ ನಿಲ್ದಾಣ, ಜಾಮೀಯಾ ಮಸಜೀದ, ತಹಸೀಲ್ದಾರ್ ಕಚೇರಿ, ಚಾವಡಿ ವೃತ್ತ, ಕನ್ನಡ ಶಾಲೆ, ಜವಳಿ ಬಜಾರ ಮುಖಾಂತರ ತೆರಳಿ ಸಿದ್ಧೇಶ್ವರ ಶಾಲಾ ಆವರಣ ತಲುಪಿ ಮುಕ್ತಾಯಗೊಂಡಿತು.

ಪಥಸಂಚಲನ ದಾರಿಯುದ್ಧಕ್ಕೂ ಬಣ್ಣ ಬಣ್ಣದ ರಂಗೋಲಿ ಸ್ವಾಗತ ಕೋರಿದವು. ಸಂಚಲನ ಆಗಮಿಸುತ್ತಿದ್ದಂತೆ ಅಲ್ಲಲ್ಲಿ ಜಮಾಯಿಸಿದ್ದ ಸಾರ್ವಜನಿಕರು ಗಣವೇಷಧಾರಿಗಳ ಮೇಲೆ ಪುಷ್ಪ ಎಸೆದು ಘೋಷನೆಗಳನ್ನು ಕೂಗಿದ್ದು ರೋಮಾಂಚನಗೊಳಿಸಿತು. ಸ್ವಾಮಿ ವಿವೇಕಾನಂದ, ಭಗತ್‌ಸಿಂಗ್, ಭಾರತ ಮಾತೆ, ಒಣಕೆ ಒಬ್ಬವ್ವ ಸೇರಿದಂತೆ ಮಹಾತ್ಮರ ವೇಷ ಧರಿಸಿದ ಪುಟಾಣಿಗಳು ಗಮನ ಸೆಳೆದರು. ಖಾಕಿ ಪ್ಯಾಂಟ್, ಬಿಳಿ ಶರ್ಟ್, ತಲೆಗೆ ಕಪ್ಪು ಟೋಪಿ, ಕಾಲಿಗೆ ಬೂಟು ಕೈಯಲ್ಲಿ ಲಾಠಿ ಹಿಡಿದುಕೊಂಡು ಹಾಕುತ್ತಿದ್ದ ಆಕರ್ಷಕ ಹೆಜ್ಜೆ, ಶಿಸ್ತಿನ ನಡಿಗೆಗೆ ದೇಶ ಭಕ್ತರು ಫಿದಾಗೊಂಡರು. ಕೊಳಲಿನ ನಾದ, ತುತ್ತೂರಿಯ ಸ್ವರ, ಡ್ರಂ ಹಾಗೂ ತಾಸೆ ಬಾರಿಸುವ ಕಲೆ ದೇಶ ಭಕ್ತಿಯನ್ನು ಇಮ್ಮಡಿಗೊಳಿಸಿತು. ತೇರದಾಳ, ಸಸಾಲಟ್ಟಿ, ತಮದಡ್ಡಿ, ಹಳಿಂಗಳಿ, ಗೋಲಭಾವಿ, ಕಾಲತಿಪ್ಪಿ, ಹನಗಂಡಿ ಸೇರಿದಂತೆ ಬೇರೆ ಬೇರೆ ಊರುಗಳಿಂದ ನೂರಾರು ಗಣವೇಷಧಾರಿಗಳು ಪಥಸಂಚಲನದಲ್ಲಿ ಪಾಲ್ಗೊಂಡಿದ್ದರು.

ಜಮಖಂಡಿ ಡಿಎಸ್ಪಿ, ಬನಹಟ್ಟಿ ಸಿಪಿಐ, ನಾಲ್ಕು ಪಿಎಸ್‌ಐ, ಆರು ಎಎಸ್ಐ, 60 ಪೊಲೀಸ್ ಹಾಗೂ ನೂರು ಗೃಹ ರಕ್ಷಕ ಸಿಬ್ಬಂದಿ ಮುಂಜಾಗ್ರತವಾಗಿ ಬಂದೋಬಸ್ತ್ ಕೈಗೊಂಡಿದ್ದರು.

# ಸಮಾಜದ ಅಭಿವೃದ್ಧಿಗೆ ಸಂಘಟನೆ ಅವಶ್ಯ: ಸಣಕಾಲ



**ರಬಕವಿ-ಬನಹಟ್ಟಿ:** ಯಾವುದೇ ಸಮಾಜ ಸರ್ವತೋಮುಖ ಅಭಿವೃದ್ಧಿಯಾಗಬೇಕಾದರೆ ಎಲ್ಲರಲ್ಲೂ ಒಗ್ಗಟ್ಟಿನ ಬಲ ಬೇಕು. ಸಂಘಟಿತರಾಗಿ ನಿಸ್ವಾರ್ಥ ಭಾವನೆಯಿಂದ ಸಮುದಾಯದ ಕಟ್ಟಕಡೆಯ ವ್ಯಕ್ತಿಯ ಆರ್ಥಿಕ, ಸಾಮಾಜಿಕ ಪ್ರಗತಿಗೆ ಮುಂದಾದರೆ ಯಾವುದೇ ಕ್ಲಿಷ್ಟ ಕಾರ್ಯಗಳು ಕೂಡ ಸುಲಭ ಸಾಧ್ಯವಾಗುತ್ತವೆಂದು ರಬಕವಿ ಶಿವಸಿಂಪಿ ಸಮಾಜದ ಅಧ್ಯಕ್ಷ ಸಿದ್ದಣ್ಣ ಸಣಕಾಲ ಹೇಳಿದರು.

ರಬಕವಿಯ ಶ್ರೀಶಿವದಾಸಿಮಯ್ಯ ಸಮುದಾಯ ಭವನದಲ್ಲಿ ನಡೆದ ವಾರ್ಷಿಕ ಮಹಾಸಭೆಯಲ್ಲಿ ಮಾತನಾಡಿದ ಅವರು, ಸಮಾಜದ ಮಕ್ಕಳು ಶಿಕ್ಷಣ ಕ್ಷೇತ್ರದಲ್ಲಿ ಗುರುತರ ಸಾಧನೆ ಮೆರೆದು ಸಮಾಜಕ್ಕೆ ಕೀರ್ತಿ ತರಬೇಕು. ಆರ್ಥಿಕ ಕಾರಣಕ್ಕೆ ಶಿಕ್ಷಣ ಸ್ಥಗಿತವಾಗುವಂತಿದ್ದರೆ ಅಂಥ ಮಕ್ಕಳ ಶಿಕ್ಷಣ ಪೂರ್ಣಗೊಳ್ಳಲು ನೆರವು ನೀಡಲು ಸಮಾಜದ ಧುರೀಣರು ಸಹಕರಿಸಬೇಕೆಂದರು. ಇದೇ ಸಂದರ್ಭದಲ್ಲಿ ಪ್ರತಿಭಾ ಪುರಸ್ಕಾರ, ಸಾಧಕರ ಸನ್ಮಾನ ಹಾಗೂ ನಿವೃತ್ತ ನೌಕರರ ಸನ್ಮಾನ ಜೊತೆಗೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

ದೇವಕಿ ಅರಬಳ್ಳಿ ಪ್ರಾರ್ಥಿಸಿದರು. ಪ್ರಕಾಶ ಸಣಕಾಲ ಸ್ವಾಗತಿಸಿದರು. ಚಂದ್ರಶೇಖರ ಚೆನ್ನಿ ಪ್ರಾಸ್ತಾವಿಕ ಮಾತುಗಳಾಡಿದರು. ಚಿದಾನಂದ ಸೊಲ್ಲಾಪುರ ಲೆಕ್ಕಪತ್ರ ಮಂಡಿಸಿದರು. ಮಲ್ಲೇಶಪ್ಪ ಸವದಿ, ಚಂದ್ರಶೇಖರ ತೆಲಸಂಗ, ಚಂದ್ರಶೇಖರ ಭೂಯಾರ, ದಾನಪ್ಪ ತುಂಗಳ, ಶ್ರೀಶೈಲ ಭೂಯಾರ, ಶಶಿಕಾಂತ ಜತ್ತಿ, ನಾಗಪ್ಪ ಅರಬಳ್ಳಿ, ಮಲ್ಲಿಕಾರ್ಜುನ ಆಸಂಗಿ, ಪ್ರವೀಣ ಪಾವಟೆ, ವೀರಣ್ಣ ಶಿವಣಗಿ, ಮಹೇಶ ಅರಬಳ್ಳಿ, ಬಾಬು ಗಂಗಾವತಿ, ವಿನಾಯಕ ಜತ್ತಿ, ಸಿದ್ಧರಾಮ ಸೋಲಾಪುರ ಮುಂತಾದವರಿದ್ದರು.

# ರೈತರಿಗೆ ವಿವಿಧ ಬಿತ್ತನೆ ಬೀಜ, ರಸಗೊಬ್ಬರ ವಿತರಣೆ

**ಯರಗಟ್ಟಿ:** ತಾಲೂಕಿನಾದ್ಯಂತ ಉತ್ತಮ ಮಳೆಯಾಗಿದ್ದು, ತಾಲೂಕಿನಲ್ಲಿ ಹಿಂಗಾರು ಮತ್ತು ಬೇಸಿಗೆ ಹಂಗಾಮಿನಲ್ಲಿ ಬಿತ್ತನೆಗೆ ಅವಶ್ಯವಿರುವ ವಿವಿಧ ಬಿತ್ತನೆ ಬೀಜ ಹಾಗೂ ರಸಗೊಬ್ಬರ ವಿತರಣೆ ಮಾಡಲಾಗುತ್ತಿದೆ ಎಂದು ಬೆಳಗಾವಿ ಜಂಟಿ ಕೃಷಿ ನಿರ್ದೇಶಕ ಸಲೀಂ ಸಂಗತ್ರಾಸ, ತಿಳಿಸಿದ್ದಾರೆ.

ಪ್ರಸಕ್ತ ಹಿಂಗಾರು ಹಂಗಾಮು ಪ್ರಾರಂಭವಾಗಿದ್ದು, ಹಿಂಗಾರು ಹಂಗಾಮಿನಲ್ಲಿ ಬೇಕಾಗುವ ಕಡಲೆ, ಜೋಳ, ಗೋಧಿ, ಸೂರ್ಯಕಾಂತಿ ಹಾಗೂ ಕುಸುಬೆ ಬಿತ್ತನೆ ಬೀಜ ಈಗಾಗಲೇ ತಾಲೂಕಿನ ರೈತ ಸಂಪರ್ಕ ಕೇಂದ್ರಗಳಲ್ಲಿ ದಾಸ್ತಾನು ಮಾಡಲಾಗಿದೆ. ರಿಯಾಯಿತಿ ದರದಲ್ಲಿ ರೈತ ಸಂಪರ್ಕ ಕೇಂದ್ರಗಳ ಮುಖಾಂತರ ವಿತರಣೆ ಮಾಡಲಾಗುತ್ತಿದೆ ಎಂದು ಶಾಸಕ ವಿಶ್ವಾಸ ವೈದ್ಯ ಹೇಳಿದರು.

ತಾಲೂಕಿನಲ್ಲಿ 2025-26 ನೇ ಸಾಲಿನ ಹಿಂಗಾರು ಹಂಗಾಮಿನ ಬೀಜ ವಿತರಣಾ ಕಾರ್ಯವನ್ನು ಸದರಿ ಹಂಗಾಮಿನಲ್ಲಿ ಲಭ್ಯವಿರುವ ದಾಸ್ತಾನು ಬಗ್ಗೆ ಮಾಹಿತಿ ನೀಡುತ್ತಾ ಹೋಬಳಿಯ ಉಪ ಮಾರಾಟ ಕೇಂದ್ರದಲ್ಲಿ ಈಗಾಗಲೇ ಕಡಲೆ 697 ಕ್ವಿ ಬೇಡಿಕೆ ಪೈಕಿ 370 ಕ್ವಿ ಹಾಗೂ ಜೋಳ 54 ಕ್ವಿ ಪೈಕಿ 30 ಕ್ವಿ ದಾಸ್ತಾನು ಇದ್ದು ಮುಂದಿನ ದಿನಗಳಲ್ಲಿ ಸೂರ್ಯಕಾಂತಿ, ಗೋಧಿ ಹಾಗೂ ಮುಸುಕಿನ ಜೋಳ ಬೀಜ ದಾಸ್ತಾನು ಹಾಗೂ ವಿತರಣೆ ಮಾಡಲಾಗುವುದು.



ಕಡಲೆ ಪ್ರತಿ 20 ಕೆ.ಜಿ ಪಾಕೆಟ್ ದರವು ರೂ.1160/- ಜೋಳ ಪ್ರತಿ 3 ಕೆ.ಜಿ ಪಾಕೆಟ್ ದರವು ರೂ.120/- ಹಾಗೂ ಗೋಧಿ ಪ್ರತಿ 30 ಕೆ.ಜಿ ಪಾಕೆಟ್ ದರವು ರೂ.1830/- ಇದ್ದು ಯಾವುದೇ ದಾಸ್ತಾನು ಕೊರತೆ ಇರುವುದಿಲ್ಲ.

ರೈತರು ಸಂಬಂದಿಸಿದ ಉಪ ಕೇಂದ್ರಕ್ಕೆ ಭೇಟಿ ನೀಡಿ ಬೀತ್ತನೆ ಬೀಜ ಪಡೆಯಲು ಸಾಹಯಕ ಕೃಷಿ ನಿರ್ದೇಶಕ ಶಿವಪ್ರಕಾಶ ಪಾಟೀಲ ತಿಳಿಸಿದರು.

ಈ ವೇಳೆ ತಹಶೀಲ್ದಾರ ಎಮ್ ವ್ಹಿ ಗುಂಡಪ್ಪಗೋಳ, ಪ. ಪಂ. ಮುಖ್ಯಾಧಿಕಾರಿ ಮಹೇಶ ಭಜಂತ್ರಿ, ಯರಗಟ್ಟಿ ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ಎಂ. ಜಿ. ಕಳಸಪ್ಪನವರ, ಆತ್ಮ ಸಿಬ್ಬಂದಿ ಉಮೇಶ ಯರಗಟ್ಟಿ, ಕೃಷಿ ಸಂಜೀವಿನಿ ಸಿಬ್ಬಂದಿಗಳಾದ ಶ್ರವಣ ಶಿವಪೂಜಿ, ಮಂಜು ಮುಂಡೆಶಿ ,ಬಸಪ್ಪ ದಳವಾಯಿ, ತುಕಾರಾಂ ಕಮತಗಿ, ಹಣಮಂತ ತಳವಾರ ರೈತರಾದ ಶಿವಾನಂದ ನಾಯಕಪ್ಪ, ಶಿ ಗೋಳ, ಸೋಮು ರೈನಾಪುರ, ಶಿವಾನಂದ ಕರಿಗೊನ್ನವರ, ಬಸವರಾಜ್ ಚಿಕಾಕಿ ಮತ್ತು ಧರ್ಮೇಶ್ ಚಿಕಾಕಿ ಹಾಜರಿದ್ದರು

# ಅರ್ಜಿ ಆಹ್ವಾನ

**ಧಾರವಾಡ:** 2025-26 ನೇ ಸಾಲಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಗಳಲ್ಲಿ (ವೃತ್ತಿಪರ ಪದವಿ ಮತ್ತು ಸ್ನಾತಕೋತ್ತರ ಪದವಿ ಕೋರ್ಸಿನ) ವಿದ್ಯಾರ್ಥಿಗಳಿಗೆ ಪ್ರವೇಶಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಅರ್ಹ ವಿದ್ಯಾರ್ಥಿಗಳು ಪೋಷಕರ ವಾರ್ಷಿಕ ಆದಾಯ ಮಿತಿ ಪ್ರವರ್ಗ-1, ಎಸ್,ಸಿ ಮತ್ತು ಎಸ್.ಟಿ ರೂ. 2.50 ಲಕ್ಷ, ಪ್ರವರ್ಗ-2ಎ, 2ಬಿ, 3ಎ, 3ಬಿ ಹಾಗೂ ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ಆದಾಯ ರೂ.1 ಲಕ್ಷ ಹೊಂದಿರುವ ವಿದ್ಯಾರ್ಥಿಗಳು ಅಕ್ಟೋಬರ 14, 2025 ರೊಳಗಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕು. ಮಾಹಿತಿಗಾಗಿ ದೂರವಾಣಿ ಸಂಖ್ಯೆ : 08362447961 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ.

### ರಾಣಿ ಚೆನ್ನಮ್ಮ ವಿ.ವಿಯ ಪಠ್ಯದಲ್ಲಿಯ 'ಬಂಗಾರದ ಮನುಷ್ಯ' ಪಾಠದ ಚಲನಚಿತ್ರ ಪ್ರದರ್ಶನ

# ಸರ್ವಕಾಲಿಕ ಮೌಲ್ಯಗಳನ್ನು ಎತ್ತಿ ಹಿಡಿಯುವ ಅತ್ಯುತ್ತಮ ದೃಶ್ಯ ಕಾವ್ಯ

**ಬೆಳಗಾವಿ:** ರಾಣಿ ಚೆನ್ನಮ್ಮ ವಿ. ವಿಯ ಬಿ ಸಿ ಎ ಪಠ್ಯದಲ್ಲಿ ಅಳವಡಿಸಲಾಗಿರುವ 'ಬಂಗಾರದ ಮನುಷ್ಯ' ಪಾಠದ ಚಲನಚಿತ್ರ ಪ್ರದರ್ಶನ ಇತ್ತೀಚಿಗೆ ಗೋಗಟೆ ಕಾಲೇಜಿನ ಸಭಾಭವನದಲ್ಲಿ ನಡೆಯಿತು.

ಜೀವನದಲ್ಲಿಯ ನೈಜ ಮೌಲ್ಯಗಳನ್ನು ಬಿತ್ತುವ ಮತ್ತು ಎತ್ತಿ ಹಿಡಿಯುವ ಸರ್ವಕಾಲಿಕ ಸತ್ಯಗಳನ್ನು ಅಳವಡಿಸಿಕೊಂಡಿರುವ ಬಂಗಾರದ ಮನುಷ್ಯ ಚಲನಚಿತ್ರ ನಿಜಕ್ಕೂ ಇಂದಿನ ಯುವ ಪೀಳಿಗೆಗೆ ಅತಿ ಅಗತ್ಯವಾಗಿದೆ. ಮೌಲ್ಯ ಗಳು ಮತ್ತು ಸಂಸ್ಕೃತಿ ಎಂಬುದು ಹದಗೆಟ್ಟು ಹೋಗುತ್ತಿರುವ ಇಂದಿನ ಯುವ ಸಮೂಹ ಮತ್ತೆ ಮೂಲತಳಹದಿಗೆ ಬರಲು ಇಂತಹ ದೃಶ್ಯಕಾವ್ಯಗಳು ಸಹಕಾರಿಯಾಗುತ್ತವೆ ಎಂದು ಚಲನಚಿತ್ರ ಪ್ರದರ್ಶನ ಅಧ್ಯಕ್ಷತೆ ವಹಿಸಿದ್ದ ಬಿಸಿಎ ವಿಭಾಗದ ಮುಖ್ಯಸ್ಥೆ ಅಸ್ಮಿತಾ ದೇಶಪಾಂಡೆ ಮಾತನಾಡಿದರು.




ಉದ್ಘಾಟಕರಾಗಿ ಆಗಮಿಸಿದ್ದ ಚಿತ್ರ ನಿರ್ಮಾಪಕ ಡಾ. ದಯಾನಂದ ಚಿಕ್ಕಮಠ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ ಮಕ್ಕಳಲ್ಲಿ ಎಲ್ಲಾ ಬುದ್ಧಿ ಮತ್ತೆ ಇದ್ದರೂ ಸಹ ಸಂಸ್ಕಾರದ ಕೊರತೆ ಎದ್ದು ಕಾಣುತ್ತಿದೆ ಆ ನಿಟ್ಟಿನಲ್ಲಿ ಇಂತಹ ಚಿತ್ರಗಳು ಅವಶ್ಯಕವಾಗಿವೆ ಎಂದರು.

ಕ. ಸಾ. ಪ ಜಿಲ್ಲಾ ಕಾರ್ಯದರ್ಶಿ ಎಂ. ವೈ. ಮೆಣಸಿನಕಾಯಿ, ಆರ್. ಎಲ್. ಎಸ್ ಕಾಲೇಜಿನ ಪ್ರಾಧ್ಯಾಪಕ ಶಶಿಕಾಂತ ತೇರದಾಳೆ,ಸಾಹಿತಿ ಡಾ. ಅ. ಬ. ಇಟಗಿ, ಜ್ಞಾನದೀಪ ಶಿಕ್ಷಣ ಸಂಸ್ಥೆ ಅಧ್ಯಕ್ಷ ರಮೇಶ ಬಾಗೇವಾಡಿ, ಸಾಹಿತಿ ಡಿ. ಎಸ್. ದೊಡಭಂಗಿ, ಮಂಜುನಾಥ ವಸ್ತ್ರದ ಇಂದಿನ ಪ್ರಸ್ತುತ ಸ್ಥಿತಿಗತಿ ಮತ್ತು ಚಲನಚಿತ್ರದ ಮೌಲ್ಯಗಳನ್ನು ಕುರಿತಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ, ಕಾಲೇಜು ಆಡಳಿತ ಮಂಡಳಿಯ ಸದಸ್ಯರು, ಬಿಸಿಎ, ಬಿಬಿಎ ಸೇರಿದಂತೆ ಕಾಲೇಜಿನ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಕಾರ್ಯಕ್ರಮದ ಆರಂಭದಲ್ಲಿ ಕನ್ನಡ ಪ್ರಾಧ್ಯಾಪಕ ಬಿ ಬಿ ಮಠಪತಿ ಸ್ವಾಗತಿಸಿ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಶೃತಿ ಕೆರೂರ ನಿರೂಪಿಸಿದರು. ಶಿವಾನಂದ ತಲ್ಲೂರ ವಂದಿಸಿದರು.

# ಹೊಸದಾಗಿ ಮತದಾರ ಪಟ್ಟಿ: ಅರ್ಜಿ ಆಹ್ವಾನ

**ಗದಗ :** ಕರ್ನಾಟಕ ಪಶ್ಚಿಮ ಪದವೀಧರರ ಕ್ಷೇತ್ರಗಳಿಗೆ ಸಂಬಂಧಿಸಿದಂತೆ ಹೊಸದಾಗಿ ಮತದಾರ ಪಟ್ಟಿಗಳ ತಯಾರಿಕೆ ಕುರಿತಂತೆ ಭಾರತ ಚುನಾವಣಾ ಆಯೋಗವು ತಮ್ಮ ನಂ.322. LC/G&T/E-ROLL/2026/BIEN, ದಿನಾಂಕ: 12.09.2025 ರಂದು ಹೊಸದಾಗಿ ಮತದಾರ ಪಟ್ಟಿ ತಯಾರಿಸಲು ವೇಳಾಪಟ್ಟಿಯನ್ನು ಹೊರಡಿಸಿರುತ್ತಾರೆ.

ದಿನಾಂಕ:30.09.2025 ರಿಂದ 06.11.2025 ರವರೆಗೆ ದಿನಾಂಕ: 01.11.2025 ಅರ್ಹತಾ ದಿನಾಂಕಕ್ಕಿಂತ ಮೂರು ವರ್ಷ ಮುಂಚೆ ಪದವಿ ಪೂರ್ಣಗೊಳಿಸಿದ ಅರ್ಹ ವ್ಯಕ್ತಿಯು ಪದವೀಧರ ಮತದಾರರಾಗಿ ಹೆಸರು ನೋಂದಣಿ ಮಾಡಲು ಅರ್ಜಿಯನ್ನು ನಮೂನೆ 18 ರಲ್ಲಿ ಇತ್ತೀಚಿನ ಭಾವಚಿತ್ರ, ದೃಡೀಕರಿಸಲ್ಪಟ್ಟ ಪದವಿ ಪ್ರಮಾಣ ಪತ್ರಗಳು ಹಾಗೂ ಸಾಮಾನ್ಯವಾಗಿ ವಾಸಿಸುತ್ತಿರುವ ದಾಖಲೆಗಳನ್ನು ಸಹಾಯಕ ಮತದಾರ ನೋಂದಣಾಧಿಕಾರಿಗಳಿಗೆ ಅಥವಾ ಗೊತ್ತುಪಡಿಸಿದ ಅಧಿಕಾರಿಗಳಿಗೆ ಸಲ್ಲಿಸಿ ಮತದಾರ ಪಟ್ಟಿಗಳಲ್ಲಿ ನೋಂದಾಯಿಸಿಕೊಳ್ಳಲು ಈ ಮೂಲಕ ಕೋರಿದೆ.

ದಿನಾಂಕ: 30.09.2025 ರಿಂದ 06.11.2025 ರವರೆಗೆ ಸ್ವೀಕೃತ ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ ಅರ್ಜಿಯನ್ನು ವಿಲೇಗೊಳಿಸಿ ದಿನಾಂಕ: 25.11.2025 ರಂದು ಕರಡು ಮತದಾರ ಪಟ್ಟಿಯನ್ನು ಹೊರಡಿಸಲಾಗುವುದು.

ದಿನಾಂಕ: 25.11.2025 ರಿಂದ ದಿನಾಂಕ: 10.12.2025 ರವರೆಗೆ ಕರಡು ಮತದಾರ ಪಟ್ಟಿಗೆ ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಲು ಕಾಲವಕಾಶವನ್ನು ನೀಡಲಾಗುವುದು. ಸದರಿ ಅವಧಿಯಲ್ಲಿ ಸ್ವೀಕೃತ ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ ಅರ್ಜಿಗಳನ್ನು ವಿಲೇಗೊಳಿಸಿ ದಿನಾಂಕ: 30.12.2025 ರಂದು ಅಂತಿಮ ಮತದಾರ ಪಟ್ಟಿಯನ್ನು ಪ್ರಕಟಿಸಲಾಗುವುದು.

ಈ ಹಿಂದೆ ಕಳೆದ ದ್ವೈವಾರ್ಷಿಕ ಚುನಾವಣೆಯಲ್ಲಿ ಹೆಸರು ಸೇರ್ಪಡೆಗೊಂಡಿದ್ದವರು ಸಹ, ಪ್ರತಿ ಒಬ್ಬ ಅರ್ಹ ಮತದಾರರು ಹೊಸದಾಗಿ ಮತದಾರ ಪಟ್ಟಿಗೆ ನಮೂನೆ 18 ನ್ನು ಸಲ್ಲಿಸಿ ಹೆಸರು ಸೇರ್ಪಡೆಗೊಳಿಸಬೇಕಾಗಿರುತ್ತದೆ. ಕಾರಣ, ಪ್ರತಿಯೊಬ್ಬ ಅರ್ಹ ಮತದಾರರು ತಮ್ಮ ಹೆಸರುಗಳನ್ನು ಮತದಾರ ಪಟ್ಟಿಯಲ್ಲಿ ಸೇರ್ಪಡೆಗೊಳಿಸಲು ಜಿಲ್ಲಾಧಿಕಾರಿ & ಜಿಲ್ಲಾ ಚುನಾವಣಾಧಿಕಾರಿ, ಗದಗ & ಕರ್ನಾಟಕ ಪಶ್ಚಿಮ ಪದವೀಧರರ ಕ್ಷೇತ್ರದ ಸಹಾಯಕ ಮತದಾರ ನೋಂದಣಾಧಿಕಾರಿಗಳೂ ಆಗಿರುವ ಗದಗ ಜಿಲ್ಲಾಧಿಕಾರಿ ಸಿ. ಎನ್. ಶ್ರೀಧರ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

# ರಾಜ್ಯ ಮಟ್ಟದ ಮಹಿಳಾ ಸಮಾವೇಶಕ್ಕೆ ಚಾಲನೆ

**ರಾಯಬಾಗ:** ಬ್ರೂಣ ಹತ್ಯೆ ಹೆಚ್ಚಾಗಿ ಆಗುತ್ತಿರುವುದು ಜೈನ ಸಮಾಜದಲ್ಲಿ. ಇದು ದೊಡ್ಡ ಆಘಾತಕಾರವಾದ್ದು. ಹಾಗಾಗಿ ಬ್ರೂಣ್ ಹತ್ಯೆ ಯಾರೂ ಮಾಡಬೇಡಿ ಎಂದು ಶ್ರೀ ಗೊಮಟೇಶ ಶಿಕ್ಷಣ ಸಂಸ್ಥೆಯ ಖಜಾಂಚಿ ಲಲಿತಾ ಎನ್ ಮಗದುಮ್ ಅವರು ಮಹಿಳೆಯರಿಗೆ ಸಲಹೆ ನೀಡಿದ್ದಾರೆ.

ತಾಲೂಕಿನ ನಸಲಾಪೂರ ಗ್ರಾಮದಲ್ಲಿ ಪಾವನ ವರ್ಷಾಯೋಗ ನಿಮಿತ್ತಬಾಲಾಚಾರ್ಯ ಡಾ.ಶ್ರೀ ಸಿದ್ಧಸೇನ ಮುನಿಮಹಾರಾಜರ ನೇತೃತ್ವದಲ್ಲಿ ರಾಜ್ಯ ಮಟ್ಟದ ಮಹಿಳಾ ಸಮಾವೇಶಕ್ಕೆ ಚಾಲನೆ ನೀಡಿ ಮಾತನಾಡಿದರು. ದೊಡ್ಡವರು ಹೇಳಿದ ಹಾಗೆ ಧರ್ಮ ಉಳಿದಿದ್ದರೆ ಹೆಣ್ಣುಮಕ್ಕಳಿಂದ ಆದೇ ಹೆಣ್ಣುಮಕ್ಕಳು ಏಕೆಬೇಡ ಈ ಬಗ್ಗೆ ಪೋಷಕರು ಗಂಭೀರವಾಗಿ ತಿಳಿದುಕೊಳ್ಳಬೇಕು ಎಂದು ಸಲಹೆ ನೀಡಿದರು. ಮಕ್ಕಳ ಎದುರು ಹಣ ಎಣಿಸುವ ಕಾರ್ಯ ಮಾಡಬೇಡಿ. ಅವರು ದುಡಿದು ತಿನ್ನುವ ಬದಲು ನಿಮ್ಮ ಹಣ ಖರ್ಚು ಮಾಡುವ ಕೆಲಸಕ್ಕೆ ಮುಂದಾಗುತ್ತಾರೆ. ಅವರಿಗೆ ಜವಾಬ್ದಾರಿ ಇಲ್ಲದಂತ್ತೆ ಆಗುತ್ತದೆ. ಹಾಗಾಗಿ ಅವರಿಗೆ ನಿಮ್ಮ ಕಷ್ಟು ಹೇಳಿ ಎಂದರು.

ಅಖೀಲ ಕರ್ನಾಟಕ ಮಹಿಳಾ ಉಪಾಧ್ಯಕ್ಷೆ ಚಂದ್ರಕಲಾ ಸೊಲ್ಲಾಪುರೆ ಮಾತನಾಡಿ, ಅಂದು ಹಿರಿಯರಿಗೆ ಗೌರವ ಕೊಡುವ ಮಕ್ಕಳಿದ್ದರು. ಇಂದು ಗೌರವ ಕೊಡುತ್ತಿಲ್ಲ. ಹಾಗಾಗಿ ಪೋಷಕರಾದವರು ಮಕ್ಕಳಿಗೆ ಸಂಸ್ಕೃತಿ ಕಲಿಸಬೇಕಿದೆ. ಸಿದ್ಧ ಸೇನ ಮುನಿಮಹಾರಾಜರು ಅನೇಕ ಯುವಕರು ಕುಡಿತದ ಚಟದಿಂದ ಬಿಡಿಸಿದ್ದಾರೆ. ಅಲ್ಲದೇ ಅವರ ಸಮಾಜ ಕಟ್ಟುವ ಕೆಲಸ ಎಲ್ಲರೂ ಮೆಚ್ಚುವಂತದ್ದು ಎಂದರಲ್ಲದೇ ಸಂಸ್ಕೃತಿಯ ಪಾಠವನ್ನೂ ಭೋಧಿಸುತ್ತಾರೆ ಎಂದರು.



ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ವೀನಶ್ರೀ ಅಭಿನಂದನ ಪಾಟೀಲ ಅವರು, ಜೈನ ಧರ್ಮ ಹುಟ್ಟಿಕೊಂಡಿತೋ ಅಂದೇ ಅಪ್ಡೇಟ್ ಆಗಿದೆ. ಆದರೆ ಕೆಲ ಆಚಾರ ವಿಚಾರ ಬದಲಿಯಾಗಿರಬಹುದು. ಧರ್ಮಕ್ಕೆ ಯಾವುದೇ ಧಕ್ಕೆಯಾಗಿಲ್ಲ. ಮಕ್ಕಳಿಗೆ ಶಿಕ್ಷಣ ನೀಡುವುದರ ಜೊತೆಗೆ ಧರ್ಮದ ಜಾಗೃತಿ ಮೂಡಿಸಬೇಕು ಎಂದರಲ್ಲದೇ ಕಾಲಕ್ಕೆ ತಕ್ಕ ಮಕ್ಕಳು ಬದಲಾಗಬೇಕು. ಆದರೆ ಸಂಸ್ಕೃತಿ ಆಚಾರ ವಿಚಾರ ಮರೆಯಬಾರದ ಹಾಗೇ ಪೋಷಕರು ಬೆಳೆಸಬೇಕು ಎಂದರು.

ಈ ಸಂದರ್ಭದಲ್ಲಿ ವಿಲಾಸಮತಿ ಈರಗೌಡ ಪಾಟೀಲ, ಸುರೇಖಾ ಗೌರಗೌಂಡ, ವೈಶಾಲಿ ಭರತೇಶ ಬನವಣೆ, ನೀತಾ ಪಾಟೀಲ, ಶಕುಂತಲಾ ಕಾಂತೆ, ಶಕುಂತಲಾ ಹಂಜೆ, ಪದ್ಮಾವತಿ ಖೆಮಲಾಪುರೆ ಸೇರಿದಂತೆ ಬಾಗಲಕೋಟ, ಬೆಳಗಾವಿ, ಧಾರವಾಡ, ವಿಜಯಪುರ ನೂರಾರು ಮಹಿಳೆಯರು ಹಾಗೂ ಚಾತುರ್ಮಾಸಕಮಿಟೊ ಸದಸ್ಯರು ಸಮಾವೇಶದಲ್ಲಿ ಭಾಗವಹಿಸಿದ್ದರು. ವಿದ್ಯಾ ಪಾಟೀಲ ಸ್ವಾಗತಿಸಿದರು. ವೀರಶ್ರೀ ಸಮಾಜೆ ನಿರೂಪಿಸಿದರು. ಸಾಧನಾ ಪಾಟೀಲ ವಂದಿಸಿದರು.

# ಮೂಲ ಹಂತದ ಸಮೀಕ್ಷೆಯ ಸ್ಥಳ ಬದಲಾವಣೆ

**ಧಾರವಾಡ:** ಜಿಲ್ಲೆಯಲ್ಲಿ ಲಿಂಗತ್ವ ಅಲ್ಪಸಂಖ್ಯಾತರರ ಮೂಲ ಹಂತದ ಸಮೀಕ್ಷೆಯನ್ನು ಸಪ್ಟೆಂಬರ 15, 2025 ರಿಂದ ಪ್ರಾರಂಭವಾಗಿ ನವೆಂಬರ 21, 2025 ರವರೆಗೂ ನಡೆಯುತ್ತಿದೆ. ಸರ್ಕಾರಿ ಜಿಲ್ಲಾ ಮತ್ತು ತಾಲ್ಲೂಕಿನ ಆಸ್ಪತ್ರೆಗಳಲ್ಲಿ ನಡೆಸುತ್ತಿದ್ದ ಸಮೀಕ್ಷೆಯನ್ನು ಸಪ್ಟೆಂಬರ 21, 2025 ರಂದು ಸರ್ಕಾರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಕಾರ್ಯದರ್ಶಿಗಳು ನೀಡಿದ ನಿರ್ದೇಶದನ್ವಯ ಸಮೀಕ್ಷೆಯನ್ನು ಸ್ಥಳ ಬದಲಾವಣೆ ಮಾಡಲಾಗಿದೆ.

ಸರ್ಕಾರದ ಕಾರ್ಯದರ್ಶಿ ಅವರ ನಿರ್ದೇಶನದಂತೆ ಸ್ಥಳ ಬದಲಾವಣೆ ಮಾಡಿ ಉಪ ನಿರ್ದೇಶಕರ ಕಚೇರಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಬಾಲಭವನ ಧಾರವಾಡ ಮತ್ತು ತಾಲೂಕು ಸಿಡಿಪಿಓ ಕಛೇರಿಗಳಲ್ಲಿ ಹಾಗೂ ಇನ್ನಿತರ ಸರ್ಕಾರಿ ಕಛೇರಿಗಳಲ್ಲಿ ಸಮೀಕ್ಷೆಯ ಕಾರ್ಯವನ್ನು ನಡೆಸಲಾಗುತ್ತಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



**ಗೋಕಾಕ :ಇಲ್ಲಿನ ಶ್ರೀ ವಿವೇಕಾನಂದ ಯೋಗ ಕೇಂದ್ರದ ಯೋಗ ಪಟುಗಳು ನಾಡಹಬ್ಬ ದಸರಾ ಅಂಗವಾಗಿ ಮೈಸೂರಿನ ವಸ್ತು ಪ್ರದರ್ಶನ ಪ್ರಾಧಿಕಾರದ ಆವರಣದಲ್ಲಿ ಕರ್ನಾಟಕ ಸರಕಾರ ಹಮ್ಮಿಕೊಂಡ ರಾಜ್ಯ ಮಟ್ಟದ ಯೋಗಾಸನ ಸ್ಪರ್ಧೆಯಲ್ಲಿ ಭಾಗವಹಿಸಿದರು. 18-21 ವರ್ಷದ ಪುರುಷರ ವಿಭಾಗದಲ್ಲಿ ಗುರುನಾಥ ಬ ಮಧಲಭಾವಿ ನಾಲ್ಕನೇ ಸ್ಥಾನ ಪಡೆದಿದ್ದಾನೆ.**

# ಶಾಲೆ, ಕಚೇರಿಗೆ ಅಪರ ಆಯುಕ್ತರ ಭೇಟಿ

**ಚಡಚಣ:** ಶುಕ್ರವಾರರಂದು ಚಡಚಣ ತಾಲೂಕಿನ ಕರ್ನಾಟಕ ಮಹಾರಾಷ್ಟ್ರ ಗಡಿಭಾಗದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಉಮರಜ ಶಾಲೆಗೆ ಬೆಳಗಾವಿ ವಿಭಾಗದ ಶಾಲಾ ಶಿಕ್ಷಣ ಇಲಾಖೆಯ ಅಪರ ಆಯುಕ್ತರಾದ ಡಾ ಈಶ್ವರ ಉಳ್ಳಾಗಡ್ಡಿ ಅವರು ಸದರಿ ಶಾಲೆಯ ಕುರಿತು ಗ್ರಾಮಸ್ಥರ ದೂರು ಹಾಗೂ ದಿನಪತ್ರಿಕೆಯಲ್ಲಿ ಪ್ರಕಟವಾದ ವರದಿ ಆಧಾರದ ಮೇಲೆ ಸಂದರ್ಶನ ನೀಡಿದರು.

ಸಂದರ್ಶನ ಸಂದರ್ಭದಲ್ಲಿ ಶಾಲೆಯಲ್ಲಿನ ಮೂಲಭೂತ ಸೌಕರ್ಯಗಳ ಕುರಿತಾಗಿ ವೀಕ್ಷಣೆ ಮಾಡಲಾಗಿ, ಶಾಲೆಯ ಕೆಲವು ಕೊಠಡಿಗಳು ದುರಸ್ತಿ ಅಂಚಿನಲ್ಲಿದ್ದು, ಮಕ್ಕಳ ಹಿತದೃಷ್ಟಿಯಿಂದ ಸದರಿ ಕೊಠಡಿಗಳನ್ನು ಹೊರತುಪಡಿಸಿ, ಉಳಿದ ಸುರಕ್ಷಿತವಾಗಿರುವ ಕೊಠಡಿಗಳಲ್ಲಿ 1 ರಿಂದ 4 ನೇ ತರಗತಿಯ ಪಾಠಬೋಧನೆಯನ್ನು ನಡೆಸುವಂತೆ ಹಾಗೂ 5 ರಿಂದ 7 ನೇ ತರಗತಿಯ ಪಾಠಬೋಧನೆಯನ್ನು ಸರಕಾರಿ ಪ್ರೌಢ ಶಾಲೆ ಉಮರಜ ಇಲ್ಲಿ ಲಭ್ಯವಿರುವ ಕೊಠಡಿಗಳಲ್ಲಿ ನಡೆಸುವಂತೆ ಸ್ಥಳದಲ್ಲಿ ಹಾಜರಿದ್ದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಚಡಚಣ ಇವರಿಗೆ ಸೂಚಿಸಲಾಯಿತು.



ಸದರಿ ಶಾಲೆಯ ದುರಸ್ತಿ ಹಾಗೂ ಪಾಠ ಬೋಧನೆ ಕುರಿತು ತುರ್ತು ಕ್ರಮ ಕೈಗೊಳ್ಳುವಂತೆ ಉಪನಿರ್ದೇಶಕರು ಅಶಾಲಾ ಶಿಕ್ಷಣ ಇಲಾಖೆ ವಿಜಯಪುರ ಇವರಿಗೆ ಸೂಚಿಸಲಾಯಿತು.

ಮುಂದುವರೆದು ಕ್ಷೇತ್ರ ಶಿಕ್ಷಣಾಧಿಕಾರಿ ಗಳ ಕಚೇರಿ ಇಂಡಿಗೆ ಸಂದರ್ಶನ ನೀಡಿ ಸಾರ್ವಜನಿಕರು ಹಾಗೂ ಶಿಕ್ಷಕರಿಗೆ ನೀಡಬೇಕಾದ ಸೇವಾ ಸೌಲಭ್ಯಗಳನ್ನು ನಿಗದಿಪಡಿಸಲಾದ ಸಮಯದೊಳಗೆ ನಿಯಮಾನುಸಾರ ನೀಡುವ ನಿಟ್ಟಿನಲ್ಲಿ ಕಾರ್ಯ ನಿರ್ವಹಿಸಿದ ಕುರಿತು ಪರಿಶೀಲನೆ ಮಾಡಿ ಕಛೇರಿಯ ಎಲ್ಲ ಅಧಿಕಾರಿ/ಸಿಬ್ಬಂದಿ ವರ್ಗದವರಿಗೆ ಮಾರ್ಗದರ್ಶನ ನೀಡಲಾಯಿತು.

### ಗರಡಿ ಮನೆ, ಕುಸ್ತಿ ಮೈದಾನದ ನವೀಕರಣ ಕಾಮಗಾರಿಗೆ ಶಾಸಕ ಸಿದ್ದು ಸವದಿ ಚಾಲನೆ

# ದೇಶೀಯ ಕ್ರೀಡೆಗಳ ಉಳಿವಿಗೆ ಬೇಕು ರಾಜಾಶ್ರಯ



**ರಬಕವಿ-ಬನಹಟ್ಟಿ:** ಭಾರತೀಯ ಪರಾಂಪರಾಗತ ಕ್ರೀಡೆಗಳಲ್ಲಿ ಬಹಳಷ್ಟು ಬೌದ್ಧಿಕ, ಶಾರೀರಿಕ ಕೌಶಲ್ಯ ವೃದ್ಧಿಸುವ ಅಂಶಗಳಿದ್ದಾಗಲೂ ಅವನತಿ ಹೊಂದಿವೆ. ಕುಸ್ತಿ ವಿದ್ಯೆ ಶಾರೀರಿಕ, ಬೌದ್ಧಿಕ ವಿಕಸನದ ಪ್ರಮುಖ ಕ್ರೀಡೆಯಾಗಿದ್ದು, ಪೈಲ್ವಾನರನ್ನು ರೂಪಿಸುವಲ್ಲಿ ಪೌಷ್ಟಿಕ ಆಹಾರ, ಸಾಧನೆಯ ಪಟ್ಟುಗಳ ನೀಡಿಕೆಯು ಬಹು ವೆಚ್ಚದ್ದಾಗಿದ್ದು, ಅದೂ ಕೂಡ ಈಗ ಗ್ರಾಮೀಣ ಭಾಗದಲ್ಲಿ ಮಾತ್ರ ಉಳಿದಿದೆ. ದೇಶೀಯ ಕ್ರೀಡೆಗಳ ಉಳಿಕೆಗೆ ಮತ್ತು ಬೆಳವಣಿಗೆಗೆ ರಾಜಾಶ್ರಯದ ಅಗತ್ಯವಿದ್ದು, ಸರ್ಕಾರ ನೆರೆಯ ಮಹಾರಾಷ್ಟ್ರ ರಾಜ್ಯ ಸರ್ಕಾರ ಪೈಲ್ವಾನರಿಗೆ ನೀಡುವ ಸೌಲಭ್ಯ ಮತ್ತು ಮಾಸಾಶನ ನೀಡುವ ಮೂಲಕ ಉಳಿಸಿ ಬೆಳೆಸಲು ಮುಂದಾಗಬೇಕೆಂದು ಶಾಸಕ ಸಿದ್ದು ಸವದಿ ಹೇಳಿದರು.

ರಬಕವಿಯ ಶ್ರೀಜೈ ಹನುಮಾನ ಗರಡಿ ಮನೆ ಮತ್ತು ಕುಸ್ತಿ ಮೈದಾನದ ನವೀಕರಣಕ್ಕೆ ಸರ್ಕಾರ ನೀಡಿರುವ ರು.85 ಲಕ್ಷ ಅನುದಾನದ ಕಾಮಗಾರಿಗಳಿಗೆ ಸಸಿಗೆ ನೀರುಣಿಸಿ ಚಾಲನೆ ನೀಡಿ ಮಾತನಾಡಿ, ಶಾಸಕ ಸಿದ್ದು ಸವದಿ ಮೊದಲ ಕಂತಿನಲ್ಲಿ 60 ಲಕ್ಷ ರೂ. ಮತ್ತು ಇದೀಗ 25 ಲಕ್ಷ ರೂ. ಅನುದಾನ ಸರ್ಕಾರ ಗರಡಿಮನೆ ಮತ್ತು ಕುಸ್ತಿ ಮೈದಾನದ ನವೀಕರಣಕ್ಕೆ ಬಿಡುಗಡೆಗೊಳಿಸಿದ್ದು, ಪೈಲ್ವಾನರು ಸದುಪಯೋಗ ಪಡಿಸಿಕೊಳ್ಳಬೇಕೆಂದರು.

ಗುರುದೇವ ಶ್ರೀಬ್ರಹ್ಮಾನಂದ ಆಶ್ರಮದ ಗುರುಸಿದ್ದೇಶ್ವರ ಶ್ರೀಗಳು ಬಲ ಮತ್ತು ಬುದ್ಧಿಶಕ್ತಿ ವೃದ್ಧಿಸುವ ಹೆಚ್ಚಿಸುವತ್ತ ನಮ್ಮ ಪೂರ್ವಜರು ರೂಢಿಸಿ, ರೂಪಿಸಿದ ಕ್ರೀಡೆಗಳನ್ನು ನಾವೆಲ್ಲರೂ ಬೆಂಬಲಿಸಿ ಉಳಿಸಿಕೊಳ್ಳಬೇಕೆಂದು ಆಶೀರ್ವಚನ ನೀಡಿದರು.

ವೇದಿಕೆಯಲ್ಲಿ ನಗರಾಧ್ಯಕ್ಷೆ ವಿದ್ಯಾ ದಬಾಡಿ, ಉಪಾಧ್ಯಕ್ಷೆ ದೀಪಾ ಗಾಡಿವಡ್ಡರ, ನಗರ ಬಿಜೆಪಿ ಅಧ್ಯಕ್ಷ ಶ್ರೀಶೈಲ ಬೀಳಗಿ ಉಪಸ್ಥಿತರಿದ್ದರು. ಪ್ರಭು ಉಮದಿ ಸ್ವಾಗತಿಸಿದರು. ಡಾ.ಸಂಗಮೇಶ ಹತಪಾಕಿ ನಿರೂಪಿಸಿದರು. ಭೀಮಶಿ ಪಾಟೀಲ ವಂದಿಸಿದರು. ಸಮಾರಂಭದಲ್ಲಿ ಮಾಜಿ ನಗರಾಧ್ಯಕ್ಷ ಸಂಜಯ ತೆಗ್ಗಿ, ಜಯಪ್ರಕಾಶ ಸೊಲ್ಲಾಪುರ, ಶಿವಾನಂದ ಹೊಸಮನಿ, ಗೌರಿ ಮಿಳ್ಳಿ, ದುರ್ಗವ್ವ ಹರಿಜನ, ವಸ್ತಾದ ವಲ್ಲಿ, ಹನುಮಂತ ಪೈಲ್ವಾನ್ ಸೇರಿದಂತೆ ಪ್ರಮುಖರಿದ್ದರು.

# ದೇಶದ ಸುಭದ್ರತೆಗೆ ಗ್ರಾಮೀಣ ಯುವಕರು ಸೈನ್ಯ ಸೇರಲಿ

**ಬೈಲಹೊಂಗಲ:** ದೇಶ ರಕ್ಷಣೆಯಲ್ಲಿ ಗ್ರಾಮೀಣ ಯುವಕರ ಪಾತ್ರವೂ ಕೂಡಾ ಅತೀ ಅವಶ್ಯವಾಗಿದ್ದು ಸೈನಿಕ ಇಲಾಖೆಗೆ ಸೇರಿ ಜೀವನ ಯಶಸ್ವಿಗೊಳಿಸಿ ಪಾಲಕರ ಕೀರ್ತಿ ತರಬೇಕೆಂದು ಗ್ರಾ.ಪಂ.ಅಧ್ಯಕ್ಷ ಮಂಜುನಾಥ ಬಸರಗಿ ಹೇಳಿದರು.

ಅವರು ತಾಲೂಕಿನ ಪಟ್ಟಿಹಾಳ (ಕೆ.ಬಿ) ಗ್ರಾಮದ ಶ್ರೀ ಬಸವೇಶ್ವರ ಕಲ್ಯಾಣ ಮಂಟಪದಲ್ಲಿ ಶನಿವಾರ ನಡೆದ ವೀರಯೋಧ ಚಂದ್ರಗೌಡ ಗುರಪಾದಗೌಡ ಪಾಟೀಲ ಇವರು ಭಾರತೀಯ ಸೈನ್ಯದಲ್ಲಿ ಸುಮಾರು 24 ವರ್ಷಗಳ ಕಾಲ ಅವಿರತ ಸೇವೆ ಸಲ್ಲಿಸಿ ಸ್ವಗ್ರಾಮಕ್ಕೆ ಆಗಮಿಸಿದ ಪ್ರಯುಕ್ತ ಶಿವಲಿಂಗ ಹುರಕಡ್ಲಿ ಗೆಳೆಯರ ಬಳಗ, ಗ್ರಾಮಸ್ಥರು ಹಾಗೂ ತಾಲೂಕಾ ಮಾಜಿ ಸೈನಿಕರ ಸಮನ್ವಯ ಸಮಿತಿ ಪದಾಧಿಕಾರಿಗಳು ಇವುಗಳ ಸಂಯುಕ್ತ ಆಶ್ರಯದಲ್ಲಿ ಏರ್ಪಡಿಸಿದ ಸ್ವಾಗತ ಹಾಗೂ ಅಭಿನಂದನಾ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮುಖ್ಯ ಅತಿಥಿಯಾದ ಪಿಕೆಪಿಎಸ್ ಅಧ್ಯಕ್ಷ ಶಿವಪ್ಪ ಗಡದವರ ಮಾತನಾಡಿ, ದೇಶ ಕಾಯುವ ಅವಕಾಶ ಸಿಗುವದು ಅತೀ ದುರ್ಲಭವಾಗಿದ್ದು ಭಗವಂತ ಕೊಟ್ಟ ಸೇವೆಯನ್ನು ಪ್ರಾಮಾಣಿಕವಾಗಿ ಸಲ್ಲಿಸಿ ಸೈನ್ಯದಲ್ಲಿರುವ ಯುವಕರು ಗ್ರಾಮಕ್ಕೆ ಕೀರ್ತಿ ತಂದು ಸಮಾಜಕ್ಕೆ ಮಾದರಿಯಾಗಬೇಕೆಂದರು.

ಬೈಲಹೊಂಗಲ ತಾಲೂಕಾ ಮಾಜಿ ಸೈನಿಕರ ಸಮನ್ವಯ ಸಮಿತಿಯ ಉಪಾಧ್ಯಕ್ಷ ಚಂದ್ರಶೇಖರ ನೇಸರಗಿ, ಸದಸ್ಯ ಚಂದ್ರಗೌಡ ಪಾಟೀಲ, ವೇ.ಮೂ. ಗೊಡಚಯ್ಯ ಹಿರೇಮಠ, ಶಿವಲಿಂಗಪ್ಪ ಹುರಕಡ್ಲಿ, ಮಾಜಿ ಸೈನಿಕ ಶಿವನಗೌಡಾ ಪಾಟೀಲ, ಅರ್ಜುನ ಕತ್ತಿ, ವೀರಯ್ಯ ಪೂಜೇರ, ಉಳವಪ್ಪ ಗುರ್ಲಕಟ್ಟಿ, ಲಕ್ಷ್ಮೀ ಪಾಟೀಲ, ವೀರುಪಾಕ್ಷಪ್ಪ ಚಂದರಗಿ, ಶಿವಲಿಂಗಪ್ಪ ಕತ್ತಿ, ಬಸವರಾಜ ಪತಾತ, ಆತ್ಮಾನಂದ ಅಬ್ಬಾಯಿ, ನಿಂಗಯ್ಯ ಪೂಜೇರ, ಬಸವರಾಜ ಸವಟಗಿ, ಮಹಾಂತೇಶ ಕತ್ತಿ, ಆಲಿಸಾಬ್ ನಧಾಪ್, ಬಸವರಾಜ ಕತ್ತಿ, ತಾಲೂಕಾ ಕಜಾಪ ವಕ್ತಾರ ಮಹಾಂತೇಶ ರಾಜಗೋಳಿ, ಸಮರ್ಥ ಪಾಟೀಲ ಮುಂತಾದವರು ಉಪಸ್ಥಿತಿದ್ದರು.

ಗ್ರಾಮದ ನಿವೃತ ಯೋಧ ಚಂದ್ರಗೌಡ ಪಾಟೀಲ ಅವರನ್ನು ಶಿವಲಿಂಗ ಹುರಕಡ್ಲಿ ಗೆಳೆಯರ ಬಳಗದಿಂದ ಸತ್ಕರಿಸಲಾಯಿತು. ಸೈನ್ಯದಲ್ಲಿ ನಡೆದ ಸೇವಾವಧಿಯಲ್ಲಿನ ಘಟನಾವಳಿಗಳ ಬಗ್ಗೆ ಮಾರ್ಮಿಕವಾಗಿ ವಿವರಿಸಿದರು. ವಿವಿಧ ಕ್ಷೇತ್ರದ ಸಾಧಕರನ್ನು ಸನ್ಮಾನಿಸಲಾಯಿತು. ಶಿಕ್ಷಕ ಮಹಾಂತೇಶ ಮುರಗೋಡ ಸ್ವಾಗತಿಸಿದರು. ಆತ್ಮಾನಂದ ಅಬ್ಬಾಯಿ ನಿರೂಪಿಸಿದರು. ಬಸವರಾಜ ಸವಟಗಿ ವಂದಿಸಿದರು.



**ತಾಲೂಕಿನ ಪಟ್ಟಿಹಾಳ (ಕೆ.ಬಿ.) ಗ್ರಾಮದಲ್ಲಿ ವೀರಯೋಧ ಚಂದ್ರಗೌಡ ಪಾಟೀಲ ಅವರನ್ನು ಗ್ರಾಮಸ್ಥರು, ತಾಲೂಕಾ ಮಾಜಿ ಸೈನಿಕರ ಸಮನ್ವಯ ಸಮಿತಿ ಸದಸ್ಯರು ಸತ್ಕರಿಸಿದರು.**



## ಕಿತ್ತೂರ ಕರ್ನಾಟಕ ಸೇನೆ ಕಾರ್ಯಕರ್ತರ ಸಭೆ

**ಹಳ್ಳೂರ:** ಚಿಕ್ಕೋಡಿ ಶೈಕ್ಷಣಿಕ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಕಿತ್ತೂರು ಕರ್ನಾಟಕ ಸೇನೆಯ ಜಿಲ್ಲಾ ಅಧ್ಯಕ್ಷರು ಪದಾಧಿಕಾರಿಗಳು ಹಾಗೂ ಸದಸ್ಯರುಗಳು ಮಹತ್ವದ ಸಭೆಯನ್ನು ರವಿವಾರದಂದು ಚಿಕ್ಕೋಡಿ ನಗರದ ಪ್ರವಾಸಿ ಮಂದಿರದಲ್ಲಿ ನಡೆಯಿತು.

ಈ ಸಭೆಯಲ್ಲಿ ಶ್ರೀ ರಮೇಶ ರಾಮಗಾನಟ್ಟಿ ರಾಜ್ಯ ಸಂಘಟನಾ ಕಾರ್ಯದರ್ಶಿ ಶ್ರೀ ಶಿವಾನಂದ ನವಿನಾಳ, ರಾಜ್ಯ ಸಂಚಾಲಕರು ಶ್ರೀ ನಾಗೇಶ ಮಾಳಿ, ಜಿಲ್ಲಾಧ್ಯಕ್ಷರು ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆ ಶ್ರೀ ಅಶೋಕ ಪಾಟೀಲ, ಜಿಲ್ಲಾಧ್ಯಕ್ಷರು ಯುವ ಘಟಕ ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆ ಸಾಹುಕಾರ ಬಸ್ತವಾಡೆ.ಜಿಲ್ಲಾ ಸಂಚಾಲಕರು , ರೋಹನ ಕಾಂಬಳೆ ಹಾಗೂ ತಾಲೂಕಿನ ಅಧ್ಯಕ್ಷರು ಪದಾಧಿಕಾರಿಗಳು ಹಾಗೂ ಸದಸ್ಯರುಗಳು ಭಾಗವಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

## ಚಂದ್ರಶೇಖರಗೌಡ ಪಾಟೀಲ ಅವಿರೋಧ ಆಯ್ಕೆ



**ಬಸವನಬಾಗೇವಾಡಿ:** ಪಟ್ಟಣದ ತಾಲೂಕಾ ಒಕ್ಕಲುತನ ಹುಟ್ಟುವಳಿ ಮಾರಾಟ ಸಹಕಾರಿ ಸಂಘದ ಅಧ್ಯಕ್ಷ ಚಂದ್ರಶೇಖರ. ಎಸ್. ಪಾಟೀಲ ಅವರು ವಿಜಯಪುರ ಜಿಲ್ಲಾ ಸಹಕಾರ ಯುನಿಯನ್ ನಿಯಮಿತಕ್ಕೆ ಐದು ವರ್ಷಗಳ ಅವಧಿಗೆ ನಿರ್ದೇಶಕರಾಗಿ ಪಟ್ಟಣದ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ರಿಟರ್ನಿಗ್ ಅಧಿಕಾರಿ ಚೇತನ ಭಾವಿಕಟ್ಟಿ ತಿಳಿಸಿದ್ದಾರೆ. ಸದಸ್ಯತ್ವ ಹೊಂದಿದ ಜಿಲ್ಲೆಯ ಎಲ್ಲಾ ತಾಲೂಕುಗಳ ಒಕ್ಕಲುತನ ಹುಟ್ಟುವಳಿ ಮಾರಾಟ ಸಹಕಾರಿ ಸಂಘಗಳಿಂದ ಸದಸ್ಯರ ಆಯ್ಕೆ ಚುನಾವಣೆಯಲ್ಲಿ ಅವಿರೋಧವಾಗಿ ಆಯ್ಕೆಯಾದ ಇವರು ಪಟ್ಟಣದ ತಾಲೂಕಾ ಒಕ್ಕಲುತನ ಹುಟ್ಟುವಳಿ ಮಾರಾಟ ಸಹಕಾರಿ ಸಂಘಕ್ಕೆ ಸತತವಾಗಿ ನಾಲ್ಕು ಬಾರಿ ನಿರ್ದೇಶಕರಾಗಿ ಆಯ್ಕೆಯಾಗಿ ಪ್ರಸ್ತುತ ಪ್ರಥಮ ಬಾರಿಗೆ ಅಧ್ಯಕ್ಷರಾಗಿ ಸೇವೆ ಸಲ್ಲಿಸುತ್ತಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.




## ಉತ್ತಮ ಫಾರ್ಮಸಿಸ್ಟ್ ಪ್ರಶಸ್ತಿ

**ಗೋಕಾಕ:** ಬೆಳಗಾವಿ ಜಿಲ್ಲೆಯ ಗೋಕಾಕ ಸಾರ್ವಜನಿಕ ಆಸ್ಪತ್ರೆಯ ಫಾರ್ಮಸಿಸ್ಟ್‌ಗಳಾದ ರಾಜೇಂದ್ರ ಕುಮಾರ ಕುರುಬಗಟ್ಟಿ ವಿಭಾಗೀಯ ಔಷಧಿ ದಾಸ್ತಾನದ ಮೇಲ್ವಿಚಾರಕರಾದ ಸುರೇಶ ಶಿಂದಿಹಟ್ಟಿ ಹಾಗೂ ವಿನಾಯಕ ದೇಶನೂರ ಬೆಳಗಾವಿ ಅವರ ಸೇವೆಯನ್ನು ಪರಿಗಣಿಸಿ ಜಿಲ್ಲಾ ಮಟ್ಟದ ಉತ್ತಮ ಫಾರ್ಮಸಿಸ್ಟ್ ಎಂದು ಗುರುತಿಸಿ ಸನ್ಮಾನಿಸಲಾಗಿದೆ.

ಬೆಳಗಾವಿ ನಗರದಲ್ಲಿ ಜರುಗಿದ ಅಂತರಾಷ್ಟ್ರೀಯ ಫಾರ್ಮಸಿಸ್ಟ್ ದಿನಾಚರಣೆ ಭವ್ಯ ಕಾರ್ಯಕ್ರಮದಲ್ಲಿ ಇವರನ್ನು ಗೌರವಿಸಿ ಸನ್ಮಾನಿಸಲಾಯಿತು.

# ಬಸ್ ಕಾರ್ಯಾಚರಣೆಯಲ್ಲಿ ವ್ಯತ್ಯಯ: ಪ್ರಯಾಣಿಕರ ಪರದಾಟ



**ಬಸವನಬಾಗೇವಾಡಿ:** ಪಟ್ಟಣದ ಬಸ್ ನಿಲ್ದಾಣದಲ್ಲಿ ಸೋಮವಾರ ಬಸ್ ಕಾರ್ಯಾಚರಣೆಯಲ್ಲಿ ವ್ಯತ್ಯಯ ಉಂಟಾಗಿರುವದರಿಂದಾಗಿ ಪ್ರಯಾಣಿಕರು ಬಸ್ ನಿಲ್ದಾಣದೊಳಗೆ ಬರುವ ಬಸ್ ಏರಲು ಒಮ್ಮೆಲೆ ಓಡಿ ಹೋಗಿ ಹತ್ತುವದು ಕಂಡುಬಂದಿತ್ತು. ಇದರಿಂದಾಗಿ ವೃದ್ಧ ಪ್ರಯಾಣಿಕರು, ಮಕ್ಕಳು ಪರದಾಡುವಂತಾಯಿತು.

ಕೊಪ್ಪಳದಲ್ಲಿ ಸಿಎಂ ಸಿದ್ದರಾಮಯ್ಯನವರ ಸಮಾವೇಶ ಇರುವದರಿಂದಾಗಿ ಹೆಚ್ಚಿನ ವಾಹನಗಳು ಲಭ್ಯವಿರದ ಕಾರಣದಿಂದಾಗಿ ದೂರ ಊರುಗಳಿಗೆ ತೆರಳುವ ಬಸ್ ಕಾರ್ಯಾಚರಣೆ ರದ್ದು ಪಡಿಸಿದ್ದ ಹಿನ್ನೆಲೆಯಲ್ಲಿ ದೂರದ ಊರುಗಳಿಗೆ ತೆರಳುವ ಪ್ರಯಾಣಿಕರು ಪರದಾಡಿದರು. ಪ್ರತಿನಿತ್ಯ ಬೆಳಗ್ಗೆ 7.15 ಗಂಟೆಗೆ ಬಸವನಬಾಗೇವಾಡಿಯಿಂದ ಹುಬ್ಬಳ್ಳಿಗೆ ತೆರಳುವ ಬಸ್‌ಗೆ ತೆರಳಲು ಸಾಕಷ್ಟು ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಸೇರಿದಂತೆ ಪ್ರಯಾಣಿಕರು ಹುಬ್ಬಳ್ಳಿ ಬಸ್ ಗೆ ತೆರಳಲು ಕಾಯುತ್ತಿರುವದು ಕಂಡುಬಂದಿತ್ತು. 7.30 ಗಂಟೆಯಾದರೂ ಬಸ್ ಬಾರದೇ ಇರುವದನ್ನು ಗಮನಿಸಿದ ಪ್ರಯಾಣಿಕರು ಸಾರಿಗೆ ನಿಯಂತ್ರಕರನ್ನು ಕೇಳಿದಾಗ ಕೊಪ್ಪಳಕ್ಕೆ ಬಸ್ ಸಿಸಿ ಹೋಗಿವೆ. ದೂರದ ಊರುಗಳಿಗೆ ತೆರಳುವ ಬಸ್ ಕಾರ್ಯಾಚರಣೆ ಇಂದು ರದ್ದುಪಡಿಸಲಾಗಿದೆ. ಕೇವಲ ಸ್ಥಳೀಯ ಬಸ್ ಕಾರ್ಯಾಚರಣೆ ಮಾತ್ರ ಇಂದು ಇದೆ. ಪ್ರಯಾಣಿಕರು ಸಹಕರಿಸಬೇಕೆಂದು ಹೇಳಿದರು.

ಬಸ್ ಕಾರ್ಯಾಚರಣೆಯಲ್ಲಿ ವ್ಯತ್ಯಯ ಉಂಟಾಗಿರುವದರಿಂದಾಗಿ ಬಸ್ ನಿಲ್ದಾಣದಲ್ಲಿ ಹೆಚ್ಚು ಪ್ರಯಾಣಿಕರು ಕಂಡುಬಂದರು. ವಿಜಯಪುರ, ಕೊಲ್ಹಾರ, ನಿಡಗುಂದಿ, ದೇವರಹಿಪ್ಪರಗಿ ಸೇರಿದಂತೆ ಸ್ಥಳೀಯವಾಗಿ ಊರುಗಳಿಗೆ ತೆರಳುವ ಬಸ್ ಕಾರ್ಯಾಚರಣೆ ಎಂದಿನಂತೆ ಇರುವದು ಕಂಡುಬಂದಿತ್ತಾದರೂ ಬಸ್ ನಲ್ಲಿ ನೂಕ್ಕುನುಗ್ಗಲು ಕಂಡುಬಂದಿತ್ತು. ಪ್ರತಿಯೊಂದು ಬಸ್ಸಿನಲ್ಲಿ ಪ್ರಯಾಣಿಕರು ನಿಂತುಕೊಂಡು ಹೋಗುವದು ಕಂಡುಬಂದಿತ್ತು.

ಈ ಕುರಿತು ಬಸ್ ಘಟಕದ ವ್ಯವಸ್ಥಾಪಕ ಚಿತ್ತವಾಡಗಿ ಅವರನ್ನು ಸಂಪರ್ಕಿಸಿದಾಗ, ಕೊಪ್ಪಳದಲ್ಲಿ ಕ.ಕ.ಪ್ರದೇಶ ಅಭಿವೃದ್ಧಿ ಮಂಡಳಿಯಿಂದ ವಿವಿಧ ಕಾಮಗಾರಿಗಳ ಅಡಿಗಲ್ಲು ಹಾಗೂ ಉದ್ಘಾಟನಾ ಸಮಾರಂಭಕ್ಕೆ ಸಿಎಂ ಸಿದ್ದರಾಮಯ್ಯ ಸೇರಿದಂತೆ ಅನೇಕ ಸಚಿವರು, ಗಣ್ಯರು ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ಅಲ್ಲಿಗೆ ಬಸ್ ಗಳು ಹೋಗಿವೆ. ಸ್ಥಳೀಯ ಬಸ್ ಕಾರ್ಯಾಚರಣೆ ಎಂದಿನಂತೆ ಇದೆ. ಇದರ ಕುರಿತು ನಿಯಂತ್ರಕರ ಕೋಣೆಯ ಗೋಡೆಗೆ ಮಾಹಿತಿ ಅಂಟಿಸಲಾಗಿದೆ ಎಂದು ಹೇಳಿದರು.

## ಜಾತ್ರೆಯ ಪ್ರಯುಕ್ತ ಹೆಚ್ಚುವರಿ ಸಾರಿಗೆ ವ್ಯವಸ್ಥೆ

**ಬೆಳಗಾವಿ:** ಶ್ರೀ ಪಂತ ಮಹಾರಾಜ ಬಾಳೇಕುಂದ್ರಿ ಗ್ರಾಮದ ಜಾತ್ರೆಯು ದಿನಾಂಕ: 08-10-2025 ರಿಂದ 10-10-2025 ರ ವರೆಗೆ ಜರುಗಲಿದ್ದು, ಸದರಿ ಜಾತ್ರೆಯ ಮುಖ್ಯ ದಿನ 10-10-2025 ರಂದು ಇರುತ್ತದೆ. ಜಾತ್ರೆಯ ಸಮಯದಲ್ಲಿ ಹೆಚ್ಚಿನ ಜನ ಸಾಂದ್ರತೆ ಆಗುವುದರಿಂದ, ಜಾತ್ರೆಗೆ ಹೋಗಿ ಬರುವ ಪ್ರಯಾಣಿಕರ ಅನುಕೂಲಕ್ಕಾಗಿ ಹೆಚ್ಚಿನ ಸಂಖ್ಯೆಯಲ್ಲಿ ವಿಶೇಷ ವಾಹನಗಳನ್ನು ಬೆಳಗಾವಿ ನಗರ ಬಸ್ ನಿಲ್ದಾಣದಿಂದ ಹಾಗೂ ಪಂತ ಬಾಳೇಕುಂದ್ರಿಯಿಂದ ಕಾರ್ಯಾಚರಣೆಗೊಳಿಸಲು ವ್ಯವಸ್ಥೆ ಮಾಡಿಕೊಳ್ಳಲಾಗಿದೆ. ಸಾರ್ವಜನಿಕ ಪ್ರಯಾಣಿಕರಿಗೆ ಉತ್ತಮ ಸಾರಿಗೆ ಸೌಲಭ್ಯ ಒದಗಿಸುವ ದೃಷ್ಠಿಯಿಂದ ಸದರಿ ಜಾತ್ರಾ ಅವಧಿಯಲ್ಲಿ ಬೆಳಗಾವಿ ಬಸ್ ನಿಲ್ದಾಣದಲ್ಲಿ ಜಾತ್ರಾ ಒಂದು ಸ್ಥಾಪಿಸಿ, 2 ಜನ ಕೆ.ಎಸ್.ಟಿ ವೇದಗಳನ್ನು ಶ್ರೀ ಪಂತ ಬಾಳೇಕುಂದ್ರಿಯ ಜಾತ್ರಾ ಬಿಂದುವುನಲ್ಲಿ 3 ಜನ ಕೆ.ಎಸ್.ಟಿ ಪೇದೆಗಳನ್ನು ನಿಯೋಜಿಸಿ, ವಾಹನಗಳ ಸುಗಮ ಕಾರ್ಯಾಚರಣೆಗೆ ಕ್ರಮ ಕೈಗೊಳ್ಳಲಾಗಿದೆ. ಸಾರ್ವಜನಿಕ ಪ್ರಯಾಣಿಕರು ಹೆಚ್ಚುವರಿ ಸಾರಿಗೆ ವ್ಯವಸ್ಥೆಯ ಸದುಪಯೋಗ ಪಡೆದುಕೊಳ್ಳಬಹುದಾಗಿದೆ ಎಂದು ವಾ.ಕ.ರ.ಸಾ ಸಂಸ್ಥೆಯ ವಿಭಾಗಿಯ ನಿಯಂತ್ರಣಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯಾರ್ಥಿ ನಿಲಯ: ಕಟ್ಟಡಗಳ ಮಾಲಿಕರಿಗೆ ಮನವಿ

**ಬೆಳಗಾವಿ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಬೆಂಗಳೂರು ಇವರು ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ ಬೈಲಹೊಂಗಲ (ಡಿಟಿ) (ಃಅಫಅ-88) ವಿದ್ಯಾರ್ಥಿ ನಿಲಯವನ್ನು ಸೂಕ್ತ ಬಾಡಿಗೆ ಕಟ್ಟಡಕ್ಕೆ ಸ್ಥಳಾಂತರಿಸಲು ಅನುಮತಿ ನೀಡಿರುತ್ತಾರೆ. 60 ಸಂಖ್ಯಾ ಬಲವುಳ್ಳ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ ಬೈಲಹೊಂಗಲ (ಡಿಟಿ) (ಃಅಫಅ-88) ಕ್ಕೆ ಬಾಡಿಗೆ ಕಟ್ಟಡವನ್ನು ಒದಗಿಸಲು ಇಚ್ಚಿಸುವ ಕಟ್ಟಡಗಳ ಮಾಲೀಕರು ಕಟ್ಟಡವು ಮೂಲಭೂತ ಸೌಕರ್ಯಗಳನ್ನು ಒಳಗೊಂಡ ಬಗೆಗೆ ಛಾಯಾ ಚಿತ್ರಗಳೊಂದಿಗೆ ಮನವಿಯನ್ನು ಅ.12ರ ಒಳಗಾಗಿ ಬೈಲಹೊಂಗಲ ತಾಲೂಕ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಗೆ ಸಲ್ಲಿಸಬಹುದಾಗಿದೆ ಎಂದು ಬೈಲಹೊಂಗಲ ತಾಲೂಕಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



## ಎಚ್ಚೆತ್ತ ಅಧಿಕಾರಿಗಳು: ಬರದಿಂದ ಸಾಗಿದ ಕಾಮಗಾರಿ

**ಯರಗಟ್ಟಿ:** ಗ್ರಾಮದಲ್ಲಿ ಕುಡಿಯುವ ನೀರಿಗೆ ಸಮಸ್ಯೆಯಿದ್ದು ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುವ ಮೂಲಕ ಕೂಡಲೇ ನೀಗಿಸುವಂತೆ ಆರ್ ಡಬ್ಲ್ಯೂ ಎಸ್ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಮಾಡಮಗೇರಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕುರುಬಗಟ್ಟಿ ಗ್ರಾಮಸ್ಥರು ಶುಕ್ರವಾರ ಕುಡಿಯುವ ನೀರು ಪೂರೈಕೆ ಮಾಡುವಂತೆ ಗ್ರಾಮ ಪಂಚಾಯಿತಿ ಎದುರು ಧರಣಿ ನಡೆಸುತ್ತಿದ್ದರೂ ಧರಣಿಗೆ ಎಚ್ಚೆತ್ತ ಅಧಿಕಾರಿಗಳು ಕುರುಬಗಟ್ಟಿ ಗ್ರಾಮದಲ್ಲಿ ಪೈಪ್ ಲೈನ್ ಕಾಮಗಾರಿ ಭರದಿಂದ ಸಾಗಿದೆ ಸೋಮವಾರ ಕಾಮಗಾರಿ ಪೂರ್ಣಗೊಂಡು ಮನೆ ಮನೆ ಕುಡಿಯುವ ನೀರು ಪೂರೈಕೆ ಮಾಡಲಾಗುವುದು ಎಂದು ಗ್ರಾ. ಪಂ. ಅಧ್ಯಕ್ಷ ಲಕ್ಕಪ್ಪ ಸನ್ನಿಂಗವನ್ನರ ತಿಳಿಸಿದರು. ಈ ಮಾತನಾಡಿದ ಗ್ರಾಮಸ್ಥರು ನಮ್ಮ ಧರಣಿಗೆ ಸ್ಪಂದಿಸಿದ ಮೇಲಾಧಿಕಾರಿಗಳು ಕಾಮಗಾರಿ ಪ್ರಾರಂಭಿಸಿದ್ದಕ್ಕೆ ಹಾಗೂ ಮಾಧ್ಯಮ ಮಿತ್ರರಿಗೆ ಗ್ರಾಮಸ್ಥರಿಂದ ಅಭಿನಂದನೆ ಸಲ್ಲಿಸಿದರು.


## ವಿವಿಧ ಸಾಲ ಯೋಜನೆಗಳಿಗೆ ಅರ್ಜಿ ಆಹ್ವಾನ

**ಬೆಳಗಾವಿ:** 2025-26 ನೇ ಸಾಲಿಗೆ ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯಿಂದ ಆರ್ಥಿಕವಾಗಿ ಹಿಂದುಳಿದ ಅರ್ಹ ಬ್ರಾಹ್ಮಣ ಸಮುದಾಯದವರಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು "ವಿ.ಪ್ರ ಸ್ವ ಉದ್ಯಮ ನೇರ ಸಾಲ ಯೋಜನೆಯಡಿ ಅರ್ಜಿ ಆಹ್ವಾನಿಸಲಾಗಿದೆ.ಹಸು ಸಾಕಾಣಿಕೆ, ಗುಡಿ ಕೈಗಾರಿಕೆ, ಸಣ್ಣ ಕೈಗಾರಿಕೆ, ಹೋಟೆಲ್ ಉದ್ಯಮ, ಟ್ಯಾಕ್ಸಿ ಇತ್ಯಾದಿ ವ್ಯಾಪಾರ ವಹಿವಾಟುಗಳನ್ನು ಕೈಗೊಳ್ಳಲು ಕನಿಷ್ಠ ರೂ. 1 ಲಕ್ಷ ಹಾಗೂ ಗರಿಷ್ಠ ರೂ. 2 ಲಕ್ಷಗಳವರೆಗೆ ಆರ್ಥಿಕ ನೆರವನ್ನು ಒದಗಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಮಂಡಳಿಯ ಸಹಾಯವಾಣಿ ಸಂಖ್ಯೆ: 8762249230 ಗೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಕೌಶಲ್ಯಾಭಿವೃದ್ಧಿ ಕಛೇರಿಯ ಅಧಿಕಾರಿಗಳು ತಿಳಿಸಿದ್ದಾರೆ.

## ಅರ್ಜಿ ಸಲ್ಲಿಕೆಗೆ ಅವಧಿ ವಿಸ್ತರಣೆ

**ಬಾಗಲಕೋಟೆ:** 2025-26ನೇ ಸಾಲಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ ನಂತರದ ವಿದ್ಯಾರ್ಥಿನಿಲಯಗಳಿಗೆ (ವೃತಿಪರ ಪದವಿ ಮತ್ತು ಸ್ನಾತಕೋತ್ತರ ಪದವಿ ಕೋರ್ಸಿನ ವಿದ್ಯಾರ್ಥಿಗಳಿಗೆ ಮಾತ್ರ) ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳಿಗೆ ಆನ್ಲೈನ್ ಮೂಲಕ ಅರ್ಜಿ ಸಲ್ಲಿಸುವ ಅವಧಿಯನ್ನು ಅ. 14 ವರೆಗೆ ವಿಸ್ತರಿಸಲಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ತಿಳಿಸಿದ್ದಾರೆ.

# ಬಂಜೆತನ ನಿವಾರಣೆಗೆ ಗುಣಮಟ್ಟದ ಆಹಾರ ಸೇವಿಸಿ



**ನೇಸರಗಿ:** ಮಹಿಳೆಯರು ಇಂದಿನ ದಿನನಗಳಲ್ಲಿ ಆಹಾರ ಪದ್ಧತಿಯಲ್ಲಿ ಕೆಲವಾರು ಪದಾರ್ಥಗಳ ದಿನನಿತ್ಯ ಸೇವನೆಯಿಂದ ಸುಮಾರು 5 ಜನ ಗರ್ಭಿಣಿ ಮಹಿಳೆಯರಲ್ಲಿ ಇಬ್ಬರಿಗೆ ಸಮಸ್ಯೆ ಉಂಟಾಗುತ್ತಿದ್ದು ಆದ್ದರಿಂದ ಗರ್ಭಿಣಿ ಮಹಿಳೆಯರು ಹಾಗೂ ಮದುವೆಯಾದ ಮಹಿಳೆಯರು ಮನೆಯಲ್ಲಿ ತಯಾರಿಸಿ ಶುದ್ದ ಆಹಾರ ಪದಾರ್ಥಗಳನ್ನು ಸೇವಿಸುವದರಿಂದ ಬಂಜೆತನ ನಿವಾರಣೆಗೆ ಮೊದಲ ಪಾಠ ಎಂದು ಹೋಪ್ ಟೆಸ್ಟ್ ಟ್ಯೂಬ್ ಬೇಬಿ ಸೆಂಟರ ಬೆಳಗಾವಿ ಇದರ ಮುಖ್ಯ ವೈದ್ಯರು ಹಾಗೂ ಕಣೇರಿ ಮಠದ ಆಸ್ಪತ್ರೆಯ ನಿರ್ದೇಶಕರು, ಸ್ತ್ರಿರೋಗ ತಜ್ಞರಾದ ಡಾ. ವರ್ಷಾ ವಿವೇಕರಾವ ಪಾಟೀಲ ಹೇಳಿದರು.

ಅವರು ರವಿವಾರದಂದು ಗ್ರಾಮದ ವೇದಾಂತ ಕ್ಲಿನಿಕ್ ಡಾ. ಪ್ರಕಾಶ ಹಲ್ಯಾಳ (ಡಾ. ವನ್ನೂರ) ಆಸ್ಪತ್ರೆಯಲ್ಲಿ ಆಯೋಜಿಸಿದ್ದ ಉಚಿತ ಬಂಜೆತನ ತಪಾಸಣೆ ಶಿಬಿರ ಉದ್ಘಾಟನೆ ನೆರವೇರಿಸಿ ಮಾತನಾಡಿ ಡಾ. ಪ್ರಕಾಶ ಹಲ್ಯಾಳ ಅವರು ಅರೋಗ್ಯ ಸೇವೆಯನ್ನು ಉನ್ನತ ಮಟ್ಟದಲ್ಲಿ ಸಲ್ಲಿಸುತ್ತಿದ್ದು ಅವರು ಈ ಭಾಗದ ಜನರ ಬಂಜೆತನ ನಿವಾರಣೆಗೆ ಶಿಬಿರ ಆಯೋಜನೆ ಮಾಡಿ ಜನಸೇವೆ ಮಾಡುತ್ತಿದ್ದಾರೆ ಎಂದರು. ದಿವ್ಯ ಸಾನಿಧ್ಯ ವಹಿಸಿದ್ದ ನೇಸರಗಿ - ಮಲ್ಲಾಪೂರ ಕೆ ಎನ್ ಶ್ರೀ ಗಾಳೇಶ್ವರ ಮಠದ ಶ್ರೀ ಚಿದಾನಂದ ಮಹಾಸ್ವಾಮಿಗಳು ಮಾತನಾಡಿ ಶಿಬಿರಕ್ಕೆ ಬಂದ ವೈದರಾದ ಡಾ. ವರ್ಷಾ ಅವರು ಬೇರೆ ಯಾರು ಅಲ್ಲ ಅವರು ರಾಯಭಾಗ ಹುಲಿ, ಮಾಜಿ ಮಂತ್ರಿ ವಿ ಎಲ್ ಪಾಟೀಲ ಅವರ ಸೊಸೆ ಹಾಗೆ ಮಾಜಿ ಎಮ್ ಎಲ್ ಸಿ ವಿವೇಕರಾವ ಪಾಟೀಲ ಅವರ ಧರ್ಮಪತ್ನಿ ಆಗಿದ್ದು ಅಂತಹ ದೊಡ್ಡ ಮನೆತನದ ಸೊಸೆ ಇಂದು ಇಂತಹ ವೈದ್ಯಕೀಯ ಸೇವೆ ಸಲ್ಲಿಸುತ್ತಿರುವದು ಹೆಮ್ಮೆ ಎಂದರು.

ಡಾ ಪ್ರಕಾಶ ಹಲ್ಯಾಳ ಮಾತನಾಡಿ ನಾನು ನೇಸರಗಿ ಹಾಗೂ ಸುತ್ತಮುತ್ತಲಿನ ಗ್ರಾಮಗಳ ವೈದ್ಯಕೀಯ ಸೇವೆಯಲ್ಲಿ ಸದಾ ಕೆಲಸ ಮಾಡುವ ಪ್ರಯುಕ್ತ ಬಿಡುವಿಲ್ಲದ ಪ್ರಯುಕ್ತ ಇಂತಹ ಶಿಬಿರಗಳನ್ನು ಆಯೋಜನೆ ಮಾಡಲು ಸಾಧ್ಯವಾಗಿಲ್ಲ. ಮುಂದಿನ ದಿನಗಳಲ್ಲಿ ಬಿಡುವು ಮಾಡಿಕೊಂಡು ಎಲ್ಲ ವಿಭಾಗದ ಅರೋಗ್ಯ ಶಿಬಿರಗಳನ್ನು ಆಯೋಜನೆ ಮಾಡುತ್ತೇನೆ ಇದಕ್ಕೆ ಸಾರ್ವಜನಿಕರ ಸಹಕಾರ ಮುಖ್ಯ ಮತ್ತು ಡಾ ವರ್ಷಾ ಮೇಡಮ್ ಅವರು ಬಂಜೆತನ ಚಿಕಿತ್ಸೆಗೆ ರಿಯಾಯತಿ ನೀಡುತ್ತಿದ್ದಾರೆ ಇದರ ಸದುಪಯೋಗ ಬಂಜೆತನ ಅನುಭವಿಸುತ್ತಿರುವ ಸ್ತ್ರೀಯರು ಪಡೆಯಬೇಕು ಎಂದರು.

ಈ ಸಂದರ್ಭದಲ್ಲಿ ಗ್ರಾ ಪಂ ಅಧ್ಯಕ್ಷರಾದ ವೀರಭದ್ರ ಚೋಭಾರಿ, ಹಿರಿಯರಾದ ಮಲ್ಲಿಕಾರ್ಜುನ ಮದನಬಾವಿ, ಪತ್ರಕರ್ತ ಸಿ ವಾಯ್ ಮೆನಸಿಕಾಯಿ, ಪ್ರಕಾಶ ಕೆಳಗಿನಮನಿ , ಡಾ. ರಶ್ಮಿ, ಶ್ರೀಮತಿ ನಾಗರತ್ನ ಪ್ರಕಾಶ ಹಲ್ಯಾಳ, ಶಿವಶಕ್ತಿ ಮೆಡಿಕಲ್ ಮಾಲೀಕರಾದ ನಾಗರಾಜ ತುಬಾಕಿ ಸೇರಿದಂತೆ ನೇಸರಗಿ ಗ್ರಾಮದ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಮುಖಂಡರು, ಬಂಜೆತನ ಪಲಾನುಭವಿಗಳು, ವೇದಾಂತ ಕ್ಲಿನಿಕ್ ಸಿಬ್ಬಂದಿ ಪಾಲ್ಗೊಂಡಿದ್ದರು.

ಕಾರ್ಯಕ್ರಮದ ನಿರೂಪಣೆ ಹಾಗೂ ನೇಸರಗಿ ಗ್ರಾಮದ ಪರಂಪರೆ, ಆದರ್ಶ, ಡಾ ಹಲ್ಯಾಳ ಅವರ ಸೇವೆಯನ್ನು ಶಿಕ್ಷಕರಾದ ರಾಜಶೇಖರ ಗೆಜ್ಜಿ ಅವರು ಅರ್ಥಗರ್ಭಿತವಾಗಿ ನಡೆಸಿಕೊಟ್ಟರು.

# ಗ್ರಾ.ಪಂ. ಮಟ್ಟದ ಅಹವಾಲು ಸ್ವೀಕಾರ, ಪರಿಹಾರ ಸಭೆ

**ಗದಗ:** ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಕುರಿತು ಸಾರ್ವಜನಿಕರಲ್ಲಿ ಜಾಗ್ರುತಿ ಮೂಡಿಸಿ, ಎಲ್ಲ ಅರ್ಹ ಫಲಾನುಭವಿಗಳನ್ನು ಯೋಜನೆ ವ್ಯಾಪ್ತಿಗೆ ತರಲು ಗದಗ ತಾಲೂಕ ಮಟ್ಟದಲ್ಲಿ ಗ್ರಾಮ ಪಂಚಾಯತ ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಪಲಾನುಭವಿಗಳ ಮತ್ತು ಸಾರ್ವಜನಿಕ ಅಹವಾಲು ಸ್ವೀಕಾರ ಹಾಗೂ ಪರಿಹಾರ ಸಭೆ ಹಮ್ಮಿಕೊಳ್ಳಲಾಗಿದೆ.

ಗದಗ ತಾಲೂಕ ಪಂಚಾಯತ ಪಂಚ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ಅವರ ನಿರ್ದೇಶನದ ಮೇರೆಗೆ ಈ ಕಾರ್ಯಕ್ರಮಗಳನ್ನು ವಿವಿಧ ಗ್ರಾಮ ಪಂಚಾಯತಗಳಲ್ಲಿ ಆಯೋಜಿಸಲಾಗುತ್ತಿದೆ.

ಕಾರ್ಯಕ್ರಮಗಳ ಉದ್ದೇಶ ಸರ್ಕಾರದ ಜನಪರ ಯೋಜನೆಗಳು ಗ್ರಾಮ ಮಟ್ಟದಲ್ಲಿ ತಲುಪುವಂತೆ ಮಾಡುವುದು ಹಾಗೂ ಯಾವುದೇ ಅರ್ಹ ಫಲಾನುಭವಿಯು ಯೋಜನೆಯಿಂದ ಹೊರಗೊಳ್ಳದಂತೆ ಖಚಿತಪಡಿಸುವುದಾಗಿದೆ. ಕಾರ್ಯಕ್ರಮಗಳು ಕೆಳಗಿನ ಗ್ರಾಮ ಪಂಚಾಯತಗಳಲ್ಲಿ ನಿಗದಿಪಡಿಸಲಾದ ದಿನಾಂಕಗಳಂದು ನಡೆಯಲಿವೆ:

ಅಕ್ಟೋಬರ್ ರಂದು 09 ರಂದು ಯಲಿಶಿರೂರು ಗ್ರಾಮ ಪಂಚಾಯತ ಕಾರ್ಯಾಲಯ ? ಬೆಳಿಗ್ಗೆ 10.30 ಗಂಟೆಗೆ, ಹರ್ತಿ ಗ್ರಾಮ ಪಂಚಾಯತ ಕಾರ್ಯಾಲಯ ಮಧ್ಯಾಹ್ನ 3.00 ಗಂಟೆಗೆ. ಅಕ್ಟೋಬರ್ ರಂದು 10 ರಂದು ನಾಗಾವಿ ಗ್ರಾಮ ಪಂಚಾಯತ ಕಾರ್ಯಾಲಯ ಬೆಳಿಗ್ಗೆ 10.30 ಗಂಟೆಗೆ, ಕಳಸಾಪೂರ ಗ್ರಾಮ ಪಂಚಾಯತ ಕಾರ್ಯಾಲಯ ಮಧ್ಯಾಹ್ನ 3.00 ಗಂಟೆಗೆ. ಕಾರ್ಯಕ್ರಮಗಳಲ್ಲಿ ಪಂಚಾಯತದ ಜನಪ್ರತಿನಿಧಿಗಳು, ತಾಲೂಕ ಪಂಚಾಯತದ ಕಾರ್ಯನಿರ್ವಾಹಕ ಅಧಿಕಾರಿಗಳು, ಹಾಗೂ ಸಂಬಂಧಪಟ್ಟ ಐದು ಇಲಾಖೆಗಳ ಅಧಿಕಾರಿಗಳು ಭಾಗವಹಿಸಲಿದ್ದಾರೆ. ಅವರು ಸಾರ್ವಜನಿಕರ ಪ್ರಶ್ನೆಗಳಿಗೆ ನೇರವಾಗಿ ಸ್ಪಂದಿಸಿ, ಯೋಜನೆಗಳ ಪ್ರಯೋಜನಗಳ ಕುರಿತು ಮಾಹಿತಿ ನೀಡಲಿದ್ದಾರೆ.

ಗೃಹಲಕ್ಷ್ಮೀ, ಅನ್ನಭಾಗ್ಯ, ಶಕ್ತಿ, ಗೃಹಜ್ಯೋತಿ, ಯುವ ನಿಧಿ ಈ ಪಂಚ ಗ್ಯಾರಂಟಿ ಯೋಜನೆಗಳ ಯಶಸ್ವಿ ಅನುಷ್ಠಾನಕ್ಕೆ ಸಾರ್ವಜನಿಕರ ಸಹಭಾಗಿತ್ವ ಅಗತ್ಯವಿದೆ. ಈ ಸಭೆಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಫಲಾನುಭವಿಗಳು ಹಾಜರಾಗಿ, ಯೋಜನೆಗಳ ಉಪಯೋಗ ಪಡೆಯಲು ತಾ ಪಂ ಕಾರ್ಯನಿರ್ವಾಹಕ ಅಧಿಕಾರಿ ಮಲ್ಲಯ್ಯ ಕೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕಬ್ಬು ಪೂರೈಸಿದ ರೈತರಿಗೆ ನಿಗದಿತ ಅವಧಿಯಲ್ಲಿ ಹಣ ಜಮೆ ಮಾಡಲು ಜಿಲ್ಲಾಧಿಕಾರಿ ಸೂಚನೆ

# ನ.1ರಿಂದ ಕಬ್ಬು ನುರಿಸುವ ಕಾರ್ಯ ಆರಂಭಿಸಿ



**ವಿಜಯಪುರ:** ಜಿಲ್ಲೆಯಲ್ಲಿ ಪಕ್ವವಾಗಿರುವ ಕಬ್ಬನ್ನು ಆದ್ಯತೆಯ ಮೇಲೆ ಕಟಾವು ಮಾಡಿ ನವೆಂಬರ್ 01 ರಿಂದ ಕಬ್ಬು ನುರಿಸುವ ಕಾರ್ಯ ಆರಂಭಿಸಿ ಕಬ್ಬು ಪೂರೈಸಿದ ರೈತರಿಗೆ 14 ದಿನಗಳೊಳಗಾಗಿ ಕಬ್ಬಿನ ಹಣ ಪಾವತಿಸಲು ಸಕ್ಕರೆ ಕಾರ್ಖಾನೆ ಮಾಲೀಕರಿಗೆ ಜಿಲ್ಲಾಧಿಕಾರಿ ಡಾ.ಆನಂದ ಕೆ. ಅವರು ಸೂಚನೆ ನೀಡಿದ್ದಾರೆ.

ಶನಿವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಕ್ಕರೆ ಕಾರ್ಖಾನೆಗಳ ಮಾಲೀಕರೊಂದಿಗೆ ಸಭೆ ನಡೆಸಿದ ಅವರು, ಜಿಲ್ಲೆಯ ಚಡಚನ ತಾಲೂಕಿನ

ಆಯುಕ್ತರು ಕಬ್ಬು ಅಭಿವೃದ್ದಿ ಹಾಗೂ ಸಕ್ಕರೆ ನಿರ್ದೇಶಕರು ಬೆಂಗಳೂರು ಪ್ರಸಕ್ತ 2024-25ನೇ ಸಾಲಿನಲ್ಲಿ ಜಿಲ್ಲೆಯ ಸಕ್ಕರೆ ಕಾರ್ಖಾನೆಗಳು ನುರಿಸಿ ಉತ್ಪಾದಿಸಲಾಗುವ ಸಕ್ಕರೆ ಪ್ರಮಾಣಕ್ಕನುಗುಣವಾಗಿ ಕಬ್ಬು ನುರಿಸುವ ಹಂಗಾಮಿಗೆ ಪ್ರತಿ ಟನ್ ಕಬ್ಬಿಗೆ ಸಾಗಾಣಿಕೆ ಮತ್ತು ಕಟಾವು ಮಾಡುವ ದರ ಸೇರಿದಂತೆ ಪ್ರತಿ ಟನ್ ಕಬ್ಬಿಗೆ ಕಾರ್ಖಾನೆವಾರು ಎಫ್‌ಆರ್‌ಪಿ ದರವನ್ನು ನಿಗದಿಪಡಿಸಲಾಗಿದ್ದು,

ಆಯುಕ್ತರು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯ ಬೆಂಗಳೂರು ಅವರು ಪ್ರತಿ ಟನ್ ಕಬ್ಬಿಗೆ ದರ ನಿಗದಿ ಪಡಿಸಿದಂತೆ ಜಿಲ್ಲೆಯ ಚಡಚಣ ತಾಲೂಕಿನ ದತ್ತ ಇಂಡಿಯಾ ಸಕ್ಕರೆ ಹಾವಿನಾಳ ಸಕ್ಕರೆ ಕಾರ್ಖಾನೆ ರೂ.3594, ಭೀಮಾಶಂಕರ ಸಹಕಾರಿ ಸಕ್ಕರೆ ಕಾರ್ಖಾನೆ ನಿ ರೂ. 3291, ಇಂಡಿ ತಾಲ್ಲೂಕಿನ ಹಿರೇಬೇವನೂರುನ ಇಂಡಿಯನ್ ಕೇನ ಪೌವರ ಲಿ. ರೂ. 3415, ಜಮಖಂಡಿ ಶುಗರ್ಸ ಲಿ ನಾದ ಬಿಕೆ. ರೂ. 3346, ಆಲಮೇಲ ತಾಲ್ಲೂಕಿನ ಕೆಪಿಆರ್ ಶುಗರ್ಸನಲ್ಲಿ ರೂ.3291, ಮಲಘಾಣದ ಸಾಯಿಬಸವ ಶುಗರ್ಸ ರೂ. 3291, ಸಿಂದಗಿ ತಾಲ್ಲೂಕಿನ ಸಂಗಮನಾಥ ಶುಗರ್ಸ ಯರಗಲ್ಲ ಬಿಕೆಯ ರೂ. 3291, ಮುದ್ದೇಬಿಹಾಳ ತಾಲ್ಲೂಕಿನ ಬಾಲಾಜಿ ಶುಗರ್ಸಡಿ ಕೆಮಿಕಲ್ಸ ಯರಗಲ್ಲನಲ್ಲಿ ರೂ. 3771, ಬಬಲೇಶ್ವರ ತಾಲೂಕಿನ ಶ್ರೀ ಬಸವೇಶ್ವರ ಶುಗರ್ಸ ಕಾರಜೋಳನಲ್ಲಿ ರೂ.3775, ಚಿಕ್ಕಗಲಗಲಿಯ ನಂದಿ ಸಹಕಾರಿ ಸಕ್ಕರೆ ಕಾರ್ಖಾನೆ ನಿ ರೂ. 3810 ನಿಗದಿಪಡಿಸಲಾಗಿದ್ದು, ತರಿಗೆ 14 ದಿನಗಳೊಳಗಾಗಿ ಆಯಾ ರೈತರ ಖಾತೆಗೆ ಯಾವುದೇ ವಿಳಂಬವಿಲ್ಲದೆ ಕಬ್ಬಿನ ಮೊತ್ತವನ್ನು ಜಮೆ ಮಾಡುವಂತೆ ಜಿಲ್ಲಾಧಿಕಾರಿಗಗಳು ಕಟ್ಟುನಿಟ್ಟಾಗಿ ಸೂಚಿಸಿದರು.

ಈ ಸಭೆಯಲ್ಲಿ ಆಹಾರ ಇಲಾಖೆಯ ಉಪ ನಿರ್ದೇಶಕರಾದ ವಿನಯಕುಮಾರ್ ಪಾಟೀಲ, ಕೃಷಿ ಜಂಟಿ ನಿರ್ದೇಶಕರಾದ ಶಿವನಗೌಡ ಪಾಟೀಲ, ಸಹಕಾರಿ ಸಂಘಗಳ ಉಪ ನಿಬಂಧಕರು ಹಾಗೂ ಭೀಮಾಶಕರ ಸಕ್ಕರೆ ಕಾರ್ಖಾನೆ ಹಾಗೂ ನಂದಿ ಸಕ್ಕರೆ ಕಾರ್ಖಾನೆಯ ವ್ಯವಸ್ಥಾಪಕ ನಿರ್ದೇಶಕರಾದ ಭಾಗ್ಯಶ್ರೀ, ಪರಿಸರ ಅಧಿಕಾರಿ ವಿವೇಕ, ಜಿಲ್ಲೆಯ ವಿವಿಧ ಸಕ್ಕರೆ ಕಾರ್ಖಾನೆಯ ಮಾಲೀಕರು ಹಾಗೂ ವ್ಯವಸ್ಥಾಪಕ ನಿರ್ದೇಶಕರು ಉಪಸ್ಥಿತರಿದ್ದರು.

## ಎತ್ತಿನಬಂಡಿ ಕ್ರಿಡೆ ಆಯೋಜನೆ

**ಗದಗ :** ಯುವ ಸಬಲೀಕರಣ ಮತ್ತು ಕ್ರಿಡಾ ಇಲಾಖೆಗೆ ಸಂಬಂದಿಸಿದಂತೆ ಸನ್ಮಾನ್ಯ ಮುಖ್ಯ ಮಂತ್ರಿಗಳು ತಮ್ಮ 2025/26ನೇಸಾಲಿನ ಆಯವ್ಯಯ ಭಾಷಣದ ಕಂಡಿಕೆ ಸಂಖ್ಯೆ 397ರಲ್ಲಿ ಗ್ರಾಮೀಣ ಕ್ರೀಡೆಗಳನ್ನು ಪೋತ್ಸಾಹಿಸಲು ಹಾಗೂ ಉತ್ತೇಜಿಸಲು ಎತ್ತಿನಬಂಡಿ ಕ್ರಿಡೆಯನ್ನು ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಆಯೋಜಿಸುವ 15 ಸಂಘ ಸಂಸ್ಥೆಗಳಿಗೆ ತಲಾ 2 ಲಕ್ಷಗಳಂತೆ ಅನುದಾನ ನೀಡಿ ಪ್ರೋತ್ಸಾಯಿಸಲಾಗುವುದು. ಗದಗ ಜಿಲ್ಲೆಯಲ್ಲಿ ಎತ್ತನಬಂಡಿ ಕ್ರೀಡೆಯನ್ನು ಆಯೋಜಿಸಲು ಆಸಕ್ತಿಯುಳ್ಳವರು ತಮ್ಮ ಸಂಘ ಸಂಸ್ಥೆಯ ಪೂರ್ಣ ವಿವರವನ್ನು ಸಹಾಯಕ ನಿರ್ದೇಶಕರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಕೆ.ಎಚ್ ಪಾಟೀಲ ಜಿಲ್ಲಾ ಕ್ರಿಡಾಂಗಣ ಗದಗ ಇಲ್ಲಿಗೆ ದಿನಾಂಕ 16/10/2025 ರೊಳಗಾಗಿ ಪ್ರಸ್ತಾವನೆಯನ್ನು ಸಲ್ಲಿಸಲು ಕೊರಿದೆ.

## ಇಂದು ಪ್ರಗತಿ ಪರಿಶೀಲನಾ ಸಭೆ

**ಗದಗ:** ಕನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷರಾದ ಬಿ.ಆರ್ ಪಾಟೀಲ್ ರವರ ಅಧ್ಯಕ್ಷತೆಯಲ್ಲಿ ಆಕ್ಟೋಬರ್ 8 ರಂದು ಬೆಳಗ್ಗೆ 10ಗಂಟೆಗೆ ಮಹಾತ್ಮಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ಗದಗದಲ್ಲಿ ಬೆಳಗಾವಿ ವಿಭಾಗದ ಕಿತ್ತೂರು ಕರ್ನಾಟಕದ ಅಡಿಯಲ್ಲಿ ಬರುವ 07ಜಿಲ್ಲೆಗಳು 2026/27ನೇ ಸಾಲಿನ ವಾರ್ಷಿಕ ಜಿಲ್ಲಾ ಕರುಡು ಯೋಜನೆ, ಸಮಗ್ರ ಮತ್ತು ಸುಸ್ಥಿರ ಜಿಲ್ಲಾ ಅಭಿವೃದ್ಧಿ ಯೋಜನೆ–2025 ಹಾಗೂ ಜಿಲ್ಲಾ ಮಾನವ ಅಭಿವೃದ್ಧಿ ಯೋಜನೆ–2025 ವರದಿಗಳ ತಯಾರಿಕೆ ಕುರಿತು ಪ್ರಗತಿ ಪರಿಶೀನಾ ಸಭೆಯನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಿಳಿಸಿರುತ್ತಾರೆ.

## ಕೌಶಲ್ಯ ತರಬೇತಿಗೆ ಅರ್ಜಿ ಆಹ್ವಾನ

**ಗದಗ:** 2025–26 ನೇ ಸಾಲಿನಲ್ಲಿ ಗದಗ ಜಿಲ್ಲೆಯ ಅಲ್ಪಸಂಖ್ಯಾತರ ವಸತಿಶಾಲೆ ಹಾಗೂ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ 6, 7, 8, 9 ಮತ್ತು 11ನೇ ತರಗತಿಯ ವಿದ್ಯಾರ್ಥಿನಿಯರಿಗೆ ಕರಾಟೆ–ಸ್ವಯಂ ರಕ್ಷಣಾ ಕೌಶಲ್ಯ ತರಬೇತಿಯನ್ನು ನೀಡಲು ಜಿಲ್ಲೆಯಲ್ಲಿರುವ ಸ್ವಯಂ ರಕ್ಷಣಾ ಕೌಶಲ್ಯಗಳ ಸಂಸ್ಥೆಗಳು ಅಥವಾ ನುರಿತ ಮತ್ತು ಅರ್ಹ ಮಹಿಳಾ ತರಬೇತಿದಾರರಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಹಾಗೂ ಅರ್ಹ ಸ್ವಯಂ ರಕ್ಷಣಾ ಕೌಶಲ್ಯಗಳ ಸಂಸ್ಥೆಗಳು ಅಥವಾ ನುರಿತ ಮತ್ತು ಅರ್ಹ ಮಹಿಳಾ ತರಬೇತಿದಾರರು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಕಛೇರಿಗೆ ದಿನಾಂಕ: 09.10.2025ರ ಒಳಗಾಗಿ ಸೂಕ್ತ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಮೌಲಾನಾ ಆಜಾದ ಭವನ, ಜಿಲ್ಲಾ ನ್ಯಾಯಾಲಯದ ಎದುರುಗಡೆ ಗದಗ ದೂ.ಸಂ: 08372–297494 ಸಂಪರ್ಕಿಸಲು ಕೊರಿದ್ದಾರೆ.

## ಅ.16ರಂದು ಮಾಹಿತಿ ಕಾರ್ಯಾಗಾರ

**ಕಾರವಾರ:** ಸೂಕ್ಷ್ಮ, ಸಣ್ಣ ಹಾಗೂ ಮಧ್ಯಮ ಉದ್ಯಮಗಳ (ಎಂ.ಎಸ್.ಎಂ.ಇ) ಗಳ ಕಾರ್ಯಕ್ಷಮತೆಯನ್ನು ಹೆಚ್ಚಿಸಲು ಹಾಗೂ ಅವುಗಳ ಕಾರ್ಯಚಟುವಟಿಕೆಗಳನ್ನು ವೇಗಗೊಳಿಸಲು ಭಾರತ ಸರ್ಕಾರದ Raising and Accelerating MSME Performance (RAMP) ಯೋಜನೆಯಡಿಯಲ್ಲಿ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು, ಕರ್ನಾಟಕ ತಾಂತ್ರಿಕ ಉನ್ನತೀಕರಣ ಪರಿಷತ್, ಜಿಲ್ಲಾ ಕೈಗಾರಿಕಾ ಕೇಂದ್ರ, ಕಾರವಾರ, ಕರ್ನಾಟಕ ತಾಂತ್ರಿಕ ಸಲಹಾ ಸೇವಾ ಸಂಸ್ಥೆ ಬೆಂಗಳೂರು ಹಾಗೂ ಜಿಲ್ಲಾ ಸಣ್ಣ ಕೈಗಾರಿಕಾ ಸಂಘದ ಸಹಯೋಗದಲ್ಲಿ Trade Receivables Discounting System (TReDS) & Environment and Social Management Support for MSMEs (ESM) ಗೆ ಸಂಬಂಧಿಸಿದಂತೆ ಮಾಹಿತಿ ಕಾರ್ಯಗಾರವನ್ನು ಅ.16 ರಂದು ಬೆಳಗ್ಗೆ 10 ಗಂಟೆಗೆ ಜಿಲ್ಲಾ ಸಣ್ಣ ಕೈಗಾರಿಕಾ ಸಂಘದ ಸಭಾ ಭವನ, ಕೈಗಾರಿಕಾ ವಸಾಹತು, ಬನವಾಸಿ ರಸ್ತೆ, ಶಿರಸಿಯಲ್ಲಿ ಆಯೋಜಿಸಲಾಗಿದೆ.

ಅಂದು ಬೆಳಗ್ಗೆ 10 ಗಂಟೆಯಿಂದ ಮಧ್ಯಾಹ್ನ 1.30 ಗಂಟೆಯರೆಗೆ Trade Receivables Discounting System (TReDS) ಕಾರ್ಯಾಗಾರ ಹಾಗೂ ಮಧ್ಯಾಹ್ನ 2.30 ರಿಂದ 5 ಗಂಟೆಯವರೆಗೆ Environment and Social Management Support for MSMEs (ESM) ಕಾರ್ಯಾಗಾರ ನಡೆಯಲಿದೆ. ಈ ಕಾರ್ಯಕ್ರಮದಲ್ಲಿ ಪ್ರತಿಷ್ಠಿತ ಸಂಸ್ಥೆಯಿಂದ ಆಗಮಿಸುವ ಪರಿಣಿತ ಭೋಧಕರು, ಎಂ.ಎಸ್.ಎಂ.ಇ ಉದ್ಯಮಶೀಲರಿಗೆ ಅತ್ಯುಪಯುಕ್ತ ಮಾಹಿತಿಯನ್ನು ನೀಡುವರು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕೈಗಾರಿಕಾ ಕೇಂದ್ರ, ಕಾರವಾರ ಕಚೇರಿ ದೂರವಾಣಿ ಸಂಖ್ಯೆ: 08382–282302 ನ್ನು ಸಂಪರ್ಕಿಸುವಂತೆ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರ ನಾಗರಾಜ ವಿ ನಾಯಕ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಡಿಯೋಗ್ರಫಿ ತರಬೇತಿಗೆ ಅರ್ಜಿ ಆಹ್ವಾನ

**ಕಾರವಾರ:** ಕೆನರಾ ಬ್ಯಾಂಕ್ ಹಾಗೂ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್‌ನ ಸಹಯೋಗದಲ್ಲಿ ನಡೆಸುತ್ತಿರುವ ರುಡ್‌ಸೆಟ್ ಸಂಸ್ಥೆಯ ವತಿಯಿಂದ ಹಮ್ಮಿಕೊಂಡಿರುವ ಫೋಟೋಗ್ರಫಿ ಮತ್ತು ವಿಡಿಯೋಗ್ರಫಿ ಕುರಿತ 30 ದಿನಗಳ ಉಚಿತ ತರಬೇತಿಯು ಅಕ್ಟೋಬರ್ 29 ರಿಂದ ಆರಂಭವಾಗಲಿದ್ದು, ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವಕ–ಯುವತಿಯರಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಬಿಪಿಎಲ್ ಕಾರ್ಡ್ ಅಥವಾ ಜಾಬ್ ಕಾರ್ಡ್ ಹಾಗೂ ಆಧಾರ್ ಕಾರ್ಡ್ ಅನ್ನು ಕಡ್ಡಾಯವಾಗಿ ಹೊಂದಿರುವ ಹಾಗೂ ಡಿಎಸ್‌ಎಲ್‌ಆರ್ ಕ್ಯಾಮೆರಾವನ್ನು ಹೊಂದಿರುವ ಗ್ರಾಮೀಣ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.

ತರಬೇತಿಯು ಕಡ್ಡಾಯವಾಗಿ ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು. ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಮೊಬೈಲ್ ಸಂಖ್ಯೆ: 9740982585, 924142581 ಅನ್ನು ಸಂಪರ್ಕಿಸಬಹುದಾಗಿದೆ ಎಂದು ರುಡ್‌ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕ ರವಿಕುಮಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನ.03ರಂದು ಹುಬ್ಬಳ್ಳಿಯಲ್ಲಿ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಸುವರ್ಣಮಹೋತ್ಸವ

**ಧಾರವಾಡ:** ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಯಶಸ್ವಿಯಾಗಿ 50 ವರ್ಷಗಳನ್ನು ಪೂರೈಸಿದ್ದು, ಮಂಡಳಿಯ ಸುವರ್ಣಮಹೋತ್ಸವ ಕಾರ್ಯಕ್ರಮವನ್ನು ಸಾರ್ವಜನಿಕ ಜಾಗೃತಿ ಹಾಗೂ ವಿವಿಧ ಕಾರ್ಯಕ್ರಮಗಳ ಮೂಲಕ ಅರ್ಥಪೂರ್ಣವಾಗಿ ನವೆಂಬರ್ 03 ರಂದು ಆಚರಿಸಲು ನಿರ್ಧರಿಸಲಾಗಿದ್ದು, ಅಧಿಕಾರಿಗಳು ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕೆಂದು ಪ್ರಭಾರ ಜಿಲ್ಲಾಧಿಕಾರಿ ಆಗಿರುವ ಜಿಪಂ. ಸಿಇಓ ಭುವನೇಶ ಪಾಟೀಲ ಅವರು ಹೇಳಿದರು.

ಅವರು ಸೋಮವಾರ (ಅ.06) ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಸುವರ್ಣಮಹೋತ್ಸವ ಸಮಾರಂಭ ಆಚರಿಸುವ ಕುರಿತು ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ, ಮಾತನಾಡಿದರು.

ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಈಗ ಯಶಸ್ವಿಯಾಗಿ 50 ವರ್ಷ ಪೂರೈಸಿದ್ದು, ಸುವರ್ಣಮಹೋತ್ಸವ ಕಾರ್ಯಕ್ರಮವನ್ನು ವಿವಿಧ ಸಮುದಾಯಗಳನ್ನು ತೊಡಗಿಸಿಕೊಂಡು, ಜಾಗೃತಿ ಮೂಡಿಸಲು ಕಾರ್ಯಕ್ರಮ ರೂಪಿಸಲಾಗುತ್ತಿದೆ ಎಂದು ಅವರು ತಿಳಿಸಿದರು. ಸುವರ್ಣಮಹೋತ್ಸವ



ಕಾರ್ಯಕ್ರಮದ ಮೂಲಕ ಮಂಡಳಿಯ ಕಾರ್ಯ ಚಟುವಟಿಕೆಗಳ ಬಗ್ಗೆ ಸಾರ್ವಜನಿಕರಿಗೆ ಜಾಗೃತಿ ಮೂಡಿಸುವುದು, ಪರಿಸರ ಸಂರಕ್ಷಣಾ ಕಾನೂನುಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಬಗ್ಗೆ ತಿಳುವಳಿಕೆ ಮೂಡಿಸಬೇಕು. ಈ ನಿಟ್ಟಿನಲ್ಲಿ ಕಾರ್ಯಕ್ರಮ ರೂಪಿಸಲಾಗುತ್ತದೆ ಎಂದು ಅವರು ಹೇಳಿದರು.

ಜಿಲ್ಲಾಮಟ್ಟದ ಕಾರ್ಯಕ್ರಮವನ್ನು ಹುಬ್ಬಳ್ಳಿಯ ನೆಹರು ಕ್ರೀಡಾಂಗಣದಲ್ಲಿ ನವೆಂಬರ್ 03 ರಂದು ಮಧ್ಯಾಹ್ನ 2 ಗಂಟೆಗೆ ಆಯೋಜಿಸಲು ನಿರ್ಧರಿಸಲಾಗಿದೆ. ಇದರೊಂದಿಗೆ ಪ್ರತಿ ತಾಲೂಕು ಮಟ್ಟದಲ್ಲಿ ಸ್ಥಳೀಯ ಶಾಸಕರ ಅಧ್ಯಕ್ಷತೆಯಲ್ಲಿ ಸುವರ್ಣಮಹೋತ್ಸವ ಕಾರ್ಯಕ್ರಮ ಆಯೋಜಿಸಬೇಕು. ಮಾಲಿನ್ಯ ಮಂಡಳಿಯ ಅಧಿಕಾರಿಗಳು ತಾಲೂಕು ಆಡಳಿತದೊಂದಿಗೆ ಸಮನ್ವಯ ಸಾಧಿಸಿ, ಅಚ್ಚುಕಟ್ಟಾಗಿ ಕಾರ್ಯಕ್ರಮ ಸಿದ್ಧಪಡಿಸಿಕೊಳ್ಳಬೇಕೆಂದು ಅವರು ಸೂಚಿಸಿದರು.

ಜಿಲ್ಲೆಯ ನಗರ ಮತ್ತು ಗ್ರಾಮೀಣ ಪ್ರದೇಶಗಳ ಎಲ್ಲ ಜನಸಾಮಾನ್ಯರನ್ನು ತಲುಪುವಂತೆ ಸ್ಥಳೀಯ ಪರಿಸರ ಮಾಲಿನ್ಯ ಸಮಸ್ಯೆಗಳಾದ ಘನ ತ್ಯಾಜ್ಯ ನಿರ್ವಹಣೆ, ಜಲ ಮಾಲಿನ್ಯ, ಇ–ತ್ಯಾಜ್ಯ, ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣೆ ಕುರಿತು ವಿಶೇಷ ಉಪನ್ಯಾಸ, ವಿವಿಧ ಸ್ಪರ್ಧೆಗಳನ್ನು, ಬೀದಿ ನಾಟಕ, ಮಕ್ಕಳ ಭಾಷಣ ಆಯೋಜಿಸಲು ಕ್ರಮವಹಿಸಬೇಕೆಂದು ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಕೈಗಾರಿಕೋದ್ಯಮಿಗಳು, ಪರಿಸರವಾದಿಗಳು, ವಿದ್ಯಾರ್ಥಿಗಳು, ಜನ ಪ್ರತಿನಿಧಿಗಳು, ಸರ್ಕಾರಿ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿಗಳು, ಸಂಘಸಂಸ್ಥೆಗಳು ಹಾಗೂ ಇತರೆ ಭಾಗಿದಾರರ ಸಹಭಾಗಿತ್ವದಲ್ಲಿ ಜಿಲ್ಲೆಯಾದ್ಯಂತ ವಿವಿಧ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಸುವರ್ಣಮಹೋತ್ಸವವನ್ನು ಅರ್ಥಪೂರ್ಣವಾಗಿ ಆಚರಿಸಲಾಗುತ್ತದೆ.

ಅಧಿಕಾರಿಗಳು ಸಿದ್ಧತೆ ಪೂರ್ಣಗೊಳಿಸಿ, ವರದಿ ಸಲ್ಲಿಸಬೇಕೆಂದು ಭುವನೇಶ ಪಾಟೀಲ ಅವರು ಹೇಳಿದರು.ಹಿರಿಯ ಪರಿಸರ ಅಧಿಕಾರಿ ಜಗದೀಶ ಐ.ಎಚ್. ಅವರು ಸ್ವಾಗತಿಸಿ, ಸಭೆ ನಿರ್ವಹಿಸಿದರು.

ಸಭೆಯಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ಸಹಾಯಕ ನಿರ್ದೇಶಕ ಸಂತೋಷ ಕಾಣಕೋಣಕರ, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಎಸ್.ಹೋನಕೇರಿ, ಸಹಾಯಕ ಅರಣ್ಯಾಧಿಕಾರಿ ಪರಿಮಳ, ಪಿಯು ಉಪನಿರ್ದೇಶಕಿ ತೇಜಸ್ವಿನಿ ನಾರಾಯಣಕರ, ಶಾಲಾ ಶಿಕ್ಷಣ ಇಲಾಖೆ ಅಧಿಕಾರಿ ಡಾ.ರೇಣುಕಾ ಅಮಲಜೇರಿ, ಪರಿಸರ ನಾಗರಿಕ ಸಮಿತಿ ಅಧ್ಯಕ್ಷ ಶಂಕರ ಕುಂಬಿ, ಎಲ್.ಆರ್.ನಾಯಕ ಸೇರಿದಂತೆ ವಿವಿಧ ತಾಲೂಕು ಪಂಚಾಯತ ಇಓ ಅವರು, ಬೇರೆ ಬೇರೆ ಇಲಾಖೆಗಳ ಅಧಿಕಾರಿಗಳು, ಸರ್ಕಾರೇತರ ಸಂಘಸಂಸ್ಥೆಗಳ ಪ್ರತಿನಿಧಿಗಳು ಭಾಗವಹಿಸಿದ್ದರು.

## ಜೀರ್ಣೋದ್ಧಾರ ಕಾರ್ಯಕ್ಕೆ ಭೂಮಿ ಪೂಜೆ



**ರಾಯಬಾಗ:** ಸಮೀಪದ ನಸಲಾಪೂರ ಗ್ರಾಮದಲ್ಲಿ ಶಾಂತಿಸಾಗರ ಮುನಿ ಮಹಾರಾಜರು 104 ವರ್ಷದ ಹಿಂದೆ ಚಾತುರ್ಮಾಸ (ಗುಂಪಾ)ನಡೆಸಿದ್ದ ಸ್ಥಳ ಜೀರ್ಣೋದ್ಧಾರ ಕಾರ್ಯಕ್ಕೆ ಸೋಮವಾರ ಗಣ್ಯರಿಂದ ಭೂಮಿ ಪೂಜೆ ನೆರವೇರಿಸಲಾಯಿತು.

ನಂತರ ಗೊಮಟೇಶ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಡಾ. ಎನ್ ಎ ಮಗದುಮ್ ಮಾತನಾಡಿ, ಶಾಂತಿ ಸಾಗರ ಮಹಾರಾಜರು ನಸಲಾಪೂರ ಗ್ರಾಮದಲ್ಲಿ ಚಾತುರ್ಮಾಸ ಪ್ರಾರಂಭಿಸಿ ಇಂದಿಗೆ 104 ವರ್ಷಗಳಾಗಿದ್ದು, ಗ್ರಾಮಕ್ಕೆ ಹೆಮ್ಮೆಯ ವಿಷಯವಾಗಿದೆ. ಮುಂದಿನ ದಿನಗಳಲ್ಲಿ ಎಲ್ಲರ ಸಹಕಾರದಿಂದ ಹಾಗೂ ಪಕ್ಷ ಬೇಧ ಮರೆತು ರಾಜ್ಯದಲ್ಲಿ ಮಾಧರಿ ಪ್ರವಾಸಿ ಸ್ಥಾನ ಮಾಡಲು ಪಣ ತೊಡೋಣ ಎಂದು ಹೇಳಿದರು.

ಈ ವೇಳೆ ಡಾ.ಸಿದ್ಧಸೇನ ಮುನಿ ಮಹಾರಾಜರು, ವಿನಯಶ್ರೀ ಪಾಟೀಲ, ಪ್ರೇರಣಾ ಪಾಟೀಲ, ಚೌಗೊಂಡಾ ಪಾಟೀಲ, ಅಣ್ಣಾಸಾಹೇಬ ಸಮಾಜೆ, ಸುಧೀರ ಮಗದುಮ, ಶರದ ಪಾಟೀಲ, ಮಹಾವೀರ ಪರಮಾಜೆ, ಮಹಾವೀರ ಸಮಾಜೆ, ನೆಹರು ಮಗದುಮ, ಡಾ. ಸಂಜಯ ಪಾಟೀಲ, ಚಂದ್ರಕಾಂತ ಕಾಂತೆ, ರಾವಸಾಹೇಬ ಪಾಟೀಲ, ಬಿ. ಟಿ ಖೊಂಬಾರೆ, ಕುಮಾರ ಕಾಗವಾಡೆ, ಬಾಳಾಸಾಹೇಬ ಪಾಟೀಲ, ಪ್ರಕಾಶ ಖೊಂಬಾರೆ, ನೇಮಿನಾಥ ಸಾಂಗಲೆ, ಅಣ್ಣಾಸಾಹೇಬ ಮೆಲವಂಕಿ, ಕಿರಣ ಸಮಾಜೆ, ಚಾತುರ್ಮಾಸ ಕಮಿಟಿಯ ಸದಸ್ಯರು ಹೀಗೆ ಅನೇಕ ಜೈನ್ ಶ್ರಾವಕ ಶ್ರಾವಕಿಯರು ಉಪಸ್ಥಿತರಿದ್ದರು.

## ಕೌಶಲ್ಯ ತರಬೇತಿಗೆ ಮನವಿ

**ವಿಜಯಪುರ:** ಯುವನಿಧಿ ಯೋಜನೆಯಡಿ ನೊಂದಾಯಿಸಿ ನಿರುದ್ಯೋಗ ಭತ್ಯೆ ಪಡೆಯುತ್ತಿರುವ ಹಾಗೂ ಪಡೆದಿರುವ ಅಭ್ಯರ್ಥಿಗಳು ಕಡ್ಡಾಯವಾಗಿ ತರಬೇತಿಯನ್ನು ಪಡೆಯಲು kaushalkar.com ಪೋರ್ಟಲ್‌ನಲ್ಲಿ ನೊಂದಾಯಿಸಿಕೊಳ್ಳುವಂತೆ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳು ತಿಳಿಸಿದ್ದಾರೆ. ಯುವನಿಧಿ ಫಲಾನುಭವಿಗಳು ಕಡ್ಡಾಯವಾಗಿ ತರಬೇತಿ ಪಡೆಯಲು ನೊಂದಾಯಿಸಿಕೊಳ್ಳಬೇಕು. ಪೋರ್ಟಲ್‌ನಲ್ಲಿ ನೊಂದಾಯಿಸಿಕೊಳ್ಳುವುದರಿಂದ ಪ್ರಸ್ತುತ ತಾವು ಪಡೆಯುತ್ತಿರುವ ನಿರುದ್ಯೋಗ ಭತ್ಯೆ ಯಾವುದೇ ಕಾರಣಕ್ಕಾಗಿ ಸ್ಥಗಿತಗೊಳ್ಳವುದಿಲ್ಲ ಮತ್ತು ಈ ಕುರಿತು ಅಭ್ಯರ್ಥಿಗಳು ಆತಂಕಪಡುವ ಅವಶ್ಯಕತೆ ಇಲ್ಲ. ಈ ಕುರಿತಂತೆ ಹೆಚ್ಚಿನ ಮಾಹಿತಿಗಾಗಿ 08352–297019 ಸಂಖ್ಯೆಗೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಕೌಶಲ್ಯಾಭಿವೃದ್ದಿ ಅಧಿಕಾರಿಗಳು ತಿಳಿಸಿದ್ದಾರೆ.

## ಅಕ್ರಮವಾಗಿ ಗೃಹ ಬಳಕೆ ಸಿಲಿಂಡರ್ ಮಾರಾಟ: ವಶಕ್ಕೆ



**ವಿಜಯಪುರ:** ವಿಜಯಪುರ ನಗರದ ಹುಡ್ಕೋ ಕಾಲನಿ ಹತ್ತಿರ ಹಾಗೂ ರಾಘವೇಂದ್ರ ಕಾಲೋನಿ ಹತ್ತಿರದಲ್ಲಿ ಗೃಹ ಬಳಕೆ ಸಿಲಿಂಡರ್‌ಗಳನ್ನು ಬಳಸಿ ಅಕ್ರಮವಾಗಿ ಆಟೋಗಳಿಗೆ ತುಂಬಿಸುತ್ತಿದ್ದ ಸಂದರ್ಭದಲ್ಲಿ ಆಹಾರ ಇಲಾಖೆ ಅಧಿಕಾರಿಗಳು ದಾಳಿ ನಡೆಸಿ, ನಾಲ್ಕು ಗೃಹ ಬಳಕೆ ಸಿಲಿಂಡರ್ ಹಾಗೂ ತೂಕ ಮಾಡುವ ಯಂತ್ರವನ್ನು ವಶಕ್ಕೆ ಪಡೆದು, ಜಲನಗರ ಪೊಲೀಸ್ ಠಾಣೆಯಲ್ಲಿ ಕ್ರಿಮಿನಲ್ ಮೊಕದ್ದಮೆ ದಾಖಲಿಸಿದ್ದಾರೆ.

ದಾಳಿಯಲ್ಲಿ ಆಹಾರ ಇಲಾಖೆ ನಿರೀಕ್ಷಕರಾದ ವಿಜಯಕುಮಾರ ಗುಮಶೆಟ್ಟಿ, ಜಲನಗರ ಪೊಲೀಸ್ ಠಾಣೆ ಸಬ್ ಇನ್ಸಪೆಕ್ಟರ್ ಮಹೇಶ ಸಂಖ, ಪೋಲಿಸ ಸಿಬ್ಬಂದಿಗಳಾದ ವಿ.ಎಂ.ಪವಾರ, ಪಿ.ಆರ್.ರಾಠೋಡ, ಎಸ್.ವಾಯ್.ನಾಟಿಕಾರ, ಎಚ್.ಎನ್.ಪೂಜಾರಿ, ಎನ್.ಬಿ.ಚವ್ಹಾಣ, ಸಚೀನಕುಮಾರ ನಂದೇಶ ಹಾಗೂ ಎಂ.ಆರ್.ಸಿಂಧೆ ಅವರು ಭಾಗವಹಿಸಿದ್ದರು ಎಂದು ಆಹಾರ ಇಲಾಖೆ ಉಪನಿರ್ದೇಶಕ ವಿನಯಕುಮಾರ ಪಾಟೀಲ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಮೀಕ್ಷೆ ಪೂರ್ಣಗೊಂಡ ನಂತರ ಪರಿಹಾರ

### ಅತೀವೃಷ್ಟಿಗೆ ಅಂದಾಜು 34 ಹೆಕ್ಟೇರ್ ಪ್ರದೇಶದ ಬೆಳೆ ಹಾನಿ

**ಮುದ್ದೇಬಿಹಾಳ:** ಗ್ರಾಮ ಪಂಚಾಯಿತಿವಾರು ಜಂಟಿ ಸಮೀಕ್ಷೆ ನಡೆಸಿದ ಬಳಿಕ ರೈತ ಫಲಾನುಭವಿಗಳ ಯಾದಿ ಗ್ರಾಮ ಪಂಚಾಯತ್ ಹಾಗೂ ರೈತ ಸಂಪರ್ಕ ಕೇಂದ್ರಗಳಲ್ಲಿ ಪ್ರಚಾರ ಮಾಡಲಾಗುತ್ತದೆ.ನಂತರ ಏಳು ದಿನಗಳ ಕಾಲಾವಕಾಶ ನೀಡಿ,ಆಕ್ಷೇಪಣೆ ಬಂದ ರೈತರ ಅರ್ಜಿಗಳನ್ನು ಪರಿಶೀಲನೆ ನಡೆಸಿ ಬೆಳೆಹಾನಿ ರೈತ ಫಲಾನುಭವಿಗಳ ಯಾದಿ ಅಂತಿಮಗೊಳಿಸಿ ಕಂದಾಯ,ಕೃಷಿ ಇಲಾಖೆ ಜಂಟಿ ಸಹಿಯೊಂದಿಗೆ ಸರ್ಕಾರಕ್ಕೆ ಅಚಿತಿಮ ವರದಿ ಸಲ್ಲಿಸಲಾಗುವುದು ಎಂದು ಶಾಸಕ ಸಿ.ಎಸ್.ನಾಡಗೌಡ ಹೇಳಿದರು.

ಪಟ್ಟಣದ ತಹಶೀಲ್ದಾರ್ ಕಚೇರಿಯ ಕೊಠಡಿಯಲ್ಲಿ ಮಂಗಳವಾರ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಶಾಸಕರು ಅತಿವೃಷ್ಟಿ ಹಾನಿ ಕುರಿತು ಮಾಹಿತಿ ನೀಡಿದರು.ರೈತರು ಕಷ್ಟದಲ್ಲಿದ್ದಾರೆ.ಅವರಿಗೆ ತೊಂದರೆ ಮಾಡಬೇಕು.ಬೆಳೆ ಹಾನಿ ಆಗಿರುವ ಪ್ರಮಾಣ ಕಡಿಮೆ ತೋರಿಸಬೇಕು ಎಂಬ ಉದ್ದೇಶ ನಮಗಿಲ್ಲ ಎಂದರು.

ಪ್ರಧಾನ ಮಂತ್ರಿ ಫಸಲ ಭೀಮಾ ಯೋಜನೆಯ ಮಾರ್ಗಸೂಚಿಯನ್ವಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಮಧ್ಯ ಋತುವಿನ ಪ್ರತಿಕೂಲತೆ ಆವಾಹನೆ ಮಾಡಲಾಗಿದೆ.ತೊಗರಿ,ಹತ್ತಿ ಬೆಳೆಗೆ ವಿಮೆ ಮಾಡಿಸಿದ ಎಲ್ಲ ರೈತರಿಗೆ ವಿಮಾ ಮೊತ್ತದ ಶೇ.25ರಷ್ಟು ವಿಮಾ ಸಂಸ್ಥೆಯು ತಕ್ಷಣ ರೈತರ ಖಾತೆಗೆ ನೇರವಾಗಿ ನಗದನ್ನು ಜಮಾ ಮಾಡಲಾಗುತ್ತದೆ ಎಂದು ತಿಳಿಸಿದರು. ಹಂಗಾಮು ಮುಗಿದ ನಂತರ ಬೆಳೆವಾರು ಕಟಾವು ಪ್ರಯೋಗದ ಇಳುವರಿ ಆದಾರದ ಮೇಲೆ ಉಳಿದ ವಿಮಾ ಮೊತ್ತವನ್ನು ಇಳುವರಿ ಕೊರತೆ ಕಂಡು ಬಂದ ಗ್ರಾ.ಪಂ ಘಟಕವಾರು ಜಮಾ ಮಾಡಲಾಗುವುದು ಎಂದು ತಿಳಿಸಿದರು. ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಡಿ.ಭಾವಿಕಟ್ಟಿ ಮಾತನಾಡಿ, ಮುದ್ದೇಬಿಹಾಳ ಹಾಗೂ ತಾಳಿಕೋಟಿ ತಾಲ್ಲೂಕುಗಳಲ್ಲಿ ಮುಂಗಾರು ಹಂಗಾಮಿನಲ್ಲಿ ತೊಗರಿ,ಹತ್ತಿ ಸೇರಿ ಒಟ್ಟು 1.21 ಲಕ್ಷ ಹೆಕ್ಟೇರ್ ಬಿತ್ತನೆ ಮಾಡಲಾಗಿದೆ. 2025–26ನೇ ಸಾಲಿನಲ್ಲಿ ಫಸಲ ಭೀಮಾ ಯೋಜನೆಯಡಿ ಮುದ್ದೇಬಿಹಾಳ ತಾಲ್ಲೂಕಿನಲ್ಲಿ 8234,ತಾಳಿಕೋಟಿ ತಾಲ್ಲೂಕಿನಲ್ಲಿ 18273 ರೈತರು ಬೆಳೆವಿಮೆ ಮಾಡಿಸಿದ್ದಾರೆ.



ಮುದ್ದೇಬಿಹಾಳ ತಾಲ್ಲೂಕಿನಲ್ಲಿ ತೊಗರಿಗೆ ವಿಮೇ ಮಾಡಿಸಿದ ರೈತರ ಸಂಖ್ಯೆ 5408 ಇದ್ದು 8343 ಹೆಕ್ಟೆರ್ ಬಿತ್ತನೆ ಕ್ಷೇತ್ರವಿದೆ.316 ರೈತರು ಹತ್ತಿ ಬೆಳೆಗೆ ವಿಮೆ ಮಾಡಿಸಿದ್ದು 332.59 ಹೆಕ್ಟೇರ್ ಕ್ಷೇತ್ರ ಹತ್ತಿ ಬಿತ್ತನೆ ಮಾಡಿದ್ದಾರೆ.ತಾಳಿಕೋಟಿ ತಾಲ್ಲೂಕಿನಲ್ಲಿ ತೊಗರಿಗೆ 12615 ರೈತರು ವಿಮೆ ಮಾಡಿಸಿದ್ದು 22406.5 ಹೆಕ್ಟೇರ್ ಬಿತ್ತನೆ ಮಾಡಿದ್ದಾರೆ.ಹತ್ತಿ ಬೆಳೆಗೆ 1686 ರೈತರು ವಿಮೆ ಮಾಡಿಸಿದ್ದು 1974.66 ಹೆಕ್ಟೇರ್ ಪ್ರದೇಶದಲ್ಲಿ ಹತ್ತಿ ಬಿತ್ತನೆ ಮಾಡಲಾಗಿದೆ ಎಂದು ತಿಳಿಸಿದರು.ಸುದ್ದಿಗೋಷ್ಠಿಯಲ್ಲಿ ಪುರಸಭೆ ಅಧ್ಯಕ್ಷ ಮಹೆಬೂಬ ಗೊಳಸಂಗಿ, ತಾಪಂ ಪ್ರಭಾರ ಇಒ ವೆಂಕಟೇಶ ವಂದಾಲ,ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗುರು ತಾರನಾಳ ಇನ್ನಿತರರು ಇದ್ದರು.

ಸನ್ 2025–26ನೇ ಸಾಲಿನ ಮುದ್ದೇಬಿಹಾಳ ತಾಲ್ಲೂಕಿನಲ್ಲಿ ಜನೇವರಿಯಿಂದ ಅಕ್ಟೋಬರ್ 2 ರವರೆಗೆ ಸಾಮಾನ್ಯ 496.. ಮಿ.ಮಿ ಮಳೆ ಇದ್ದು ಒಟ್ಟಾರೆ ಪ್ರಸಕ್ತ ಸಾಲಿನಲ್ಲಿ ಇಲ್ಲಿಯವರೆಗೆ 796.6 ಮಿ.ಮಿ ಮಳೆ ಆಗಿರುತ್ತದೆ.ಶೇ.61 ರಷ್ಟು ಮಳೆ ಹೆಚ್ಚಾಗಿದೆ ಎಂದು ಕೃಷಿ ಅಧಿಕಾರಿಗಳು ಮಾಹಿತಿ ನೀಡಿದರು.

ತಹಶೀಲ್ದಾರ್ ಕೀರ್ತಿ ಚಾಲಕ ಮಾತನಾಡಿ, ಅತಿವೃಷ್ಟಿಯಿಂದ ತಾಲ್ಲೂಕಿನಲ್ಲಿ 145 ಮನೆಗಳು ಬಿದ್ದಿದ್ದು ಅದರಲ್ಲಿ 89 ಮನೆಗಳಿಗೆ ತಲಾ 5200 ರೂ.ನಂತೆ ಪರಿಹಾರ ನೀಡಲಾಗಿದ್ದು 5 ಮನೆಗಳಿಗೆ 30 ಸಾವಿರ ರೂ.ಪರಿಹಾರ ನೀಡಲಾಗಿದೆ.ನಾಗಬೇನಾಳ, ನೇಬಗೇರಿಯಲ್ಲಿ ತೋಳದ ದಾಳಿಗೆ ಒಳಗಾಗಿ ಮೃತಪಟ್ಟ ಕುರಿಗಳಿಗೆ ಸಂಬಂಧಿಸಿದ ಇಲಾಖೆಯಿಂದ ಪರಿಹಾರ ನೀಡಲಾಗುತ್ತದೆ ಎಂದು ಶಾಸಕ ನಾಡಗೌಡ ತಿಳಿಸಿದರು.

## ವಾಲ್ಮೀಕಿ ಆದರ್ಶ ಪಾಲಿಸೋಣ: ಬಂಡೆ

**ಇಂಡಿ:** ದೇಶದ ಆಧ್ಯಾತ್ಮಿಕ ಸರ್ವೋಚ್ಚ ಗ್ರಂಥಗಳಾದ ರಾಮಾಯಣ–ಮಹಾಭಾರತ ಗ್ರಂಥಗಳ ಅಧ್ಯಯನದಿಂದ ಜೀವನದಲ್ಲಿ ಉತ್ತಮ ಬದಲಾವಣೆಯಾಗುವುದರ ಜತೆಗೆ ಸಾಮಾಜಿಕವಾಗಿ ಉತ್ತಮ ವಾತಾವರಣ ನಿರ್ಮಾಣವಾಗುತ್ತದೆ ಎಂದು ಶಿಕ್ಷಕ ಸಂತೋಷ ಬಂಡೆ ಹೇಳಿದರು.

ಮಂಗಳವಾರದಂದು ತಾಲೂಕಿನ ಹಿರೇರೂಗಿ ಗ್ರಾಮದ ಕೆಬಿಎಸ್, ಕೆಜಿಎಸ್, ಯುಬಿಎಸ್ ಶಾಲೆಯಲ್ಲಿ ಹಮ್ಮಿಕೊಂಡ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆಯನ್ನು ಉದ್ದೇಶಿಸಿ ಅವರು ಮಾತನಾಡಿದರು.

'ಮಹರ್ಷಿ ವಾಲ್ಮೀಕಿ ರಾಮಾಯಣ ಮಾನವ ಜನಾಂಗಕ್ಕೆ ಬದುಕುವ ನೈತಿಕತೆಯ ಕೈಗನ್ನಡಿಯಾಗಿದೆ. ಮೇರು ಕೃತಿಯನ್ನು ನೀಡಿದ ವಾಲ್ಮೀಕಿ ಅವರ ಆದರ್ಶ ಮೌಲ್ಯಗಳನ್ನು ಪ್ರತಿಯೊಬ್ಬರು ಪಾಲನೆ ಮಾಡಬೇಕು' ಎಂದು ಹೇಳಿದರು. ಶಿಕ್ಷಕ ಎಸ್ ಆರ್ ಚಾಳೇಕರ ಮಾತನಾಡಿ, ಪೋಷಕರು ಮಹಾನ್ ಗ್ರಂಥಗಳನ್ನು ಓದಿ ತಮ್ಮ ಮಕ್ಕಳಿಗೂ ಅದರ ವಿಚಾರಗಳನ್ನು ತಿಳಿಸಬೇಕು. ಮಹಾನ್‌ಪುರುಷರ ಗ್ರಂಥಗಳು ಯುವಜನಾಂಗಕ್ಕೆ ಸ್ಪೂರ್ತಿಯಾಗಿವೆ ಎಂದು ಹೇಳಿದರು. ಅಧ್ಯಕ್ಷತೆ ವಹಿಸಿದ್ದ ಮುಖ್ಯ ಶಿಕ್ಷಕ ಅನಿಲ ಪತಂಗಿ ಮಾತನಾಡಿ, ಮಾನವ ಕುಲಕ್ಕೆ ಮಹರ್ಷಿ ವಾಲ್ಮೀಕಿ ಅವರ ರಾಮಾಯಣ ಕೃತಿ ಉತ್ತಮ ಕೊಡುಗೆ, ನುಡಿದಂತೆ ನಡೆದುಕೊಳ್ಳುವುದು ವಾಲ್ಮೀಕಿ ರಾಮಾಯಣದಿಂದ ತಿಳಿದು ಬರುತ್ತದೆ ಎಂದು ಹೇಳಿದರು.

ಮುಖ್ಯ ಶಿಕ್ಷಕಿ ವ್ಹಿ ವೈ ಪತ್ತಾರ, ಶಿಕ್ಷಕರಾದ ಎಸ್ ಎಂ ಪಂಚಮುಖಿ, ಶ್ರದ್ಧಾ ಬಂಕಲಗಾ, ಎಸ್ ಎನ್ ಡಂಗಿ, ಜೆ ಸಿ ಗುಣಕಿ, ಸುಮಂಗಲಾ ಬೇನೂರ ಸೇರಿದಂತೆ ಅನೇಕರು ಭಾಗವಹಿಸಿದ್ದರು.





ಬೆಳಗಾವಿ ಜಿಲ್ಲೆಯ ಬೈಲಹೊಂಗಲ ತಾಲೂಕಿನ ಗರಜೂರ ಗ್ರಾಮದ ಪ್ರಗತಿ ಪರ ರೈತ ಸಿದ್ದಪ್ಪ ಕಡಕಭಾಂವಿ ಹಾಗೂ ಕುಟುಂಬಸ್ಥರು ಶೀಗಿ ಹುಣ್ಣಿಮೆಯ ಅಂಗವಾಗಿ ತಮ್ಮ ಹೊಲದಲ್ಲಿ ಮಂಗಳವಾರ ಭೂತಾಯಿಗೆ ವಿಶೇಷ ಪೂಜೆ ಸಲ್ಲಿಸಿ ಚರಗ ಚೆಲ್ಲಿ, ಸಿಹಿಯಾದ ಊಟ ಸವಿದು ಸಂಭ್ರಮಿಸಿದರು.

# ಸಾಮೂಹಿಕ ಪೂಜೆಯಿಂದ ದೇವತಾನುಗ್ರಹ ಸುಲಭ

**ಬೆಳಗಾವಿ:** ಪಾಶ್ಚಿಮಾತ್ಯ ಸಂಸ್ಕೃತಿಯ ಅನುಕರಣೆಯಿಂದ ಮನುಷ್ಯ ದೇವರ ಅಸ್ತಿತ್ವ, ದೈವತ್ವದ ಬಗ್ಗೆ ಪ್ರಶ್ನೆ ಮಾಡುತ್ತಿದ್ದಾನೆ. ಆಧುನಿಕತೆಯ ಜಂಜಾಟದಿಂದ ದೇವರ ಮೇಲಿನ ಭಕ್ತಿ ಭಾವ ಕಡಿಮೆ ಆಗುತ್ತಿರುವ ಈ ಸಂದರ್ಭದಲ್ಲಿ, ಸಾಮೂಹಿಕ ಪೂಜೆಗಳಿಂದ ಮಾತ್ರ ಗ್ರಾಮಗಳು ಸಮೃದ್ಧಿ, ಸುಭೀಕ್ಷೆಯಿಂದಿರಲು ಮತ್ತು ದೇವತಾನುಗ್ರಹ ಸಿಗಲು ಸಾಧ್ಯವೆಂದು ಧಾರವಾಡ ಪ್ರಾದೇಶಿಕ ಕಚೇರಿಯ ಪ್ರಾದೇಶಿಕ ನಿರ್ದೇಶಕರಾದ ದಯಾಶೀಲ ರವರು ಅಭಿಪ್ರಾಯ ವ್ಯಕ್ತಪಡಿಸಿದರು.

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ.ಟ್ರಸ್ಟ (ರಿ) ಖಾಸಭಾಗ, ಸಾಮೂಹಿಕ ವರದ ಶಂಕರ ಪೂಜಾ ಸಮಿತಿ ಮಾವಿನಕಟ್ಟಿ ಸಾಂಬ್ರಾ ವಲಯ, ಪ್ರಗತಿ ಬಂಧು ಸ್ವಸಹಾಯ ಸಂಘಗಳ ಒಕ್ಕೂಟ ಸಾಂಬ್ರಾ ವಲಯ ಇವರ ಸಹಯೋಗದಲ್ಲಿ ಮಾವಿನಕಟ್ಟಿ ರೇಣುಕಾಚಾರ್ಯ ಹಿರೇಮಠದಲ್ಲಿ ನಡೆದ ಸಾಮೂಹಿಕ ವರದಶಂಕರ ಪೂಜೆಯ ಧಾರ್ಮಿಕ ಸಭಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು,

ಮಕ್ಕಳಿಗೆ ಶಿಕ್ಷಣದ ಕೊರತೆಯಾದರು



ಸಂಸ್ಕಾರದ ಕೊರತೆಯಾಗಬಾರದು. ಹಬ್ಬಹರಿದಿನದ ಮಹತ್ವ, ಗುರುಹಿರಿಯರ ಮೇಲೆ ಭಕ್ತಿ ,ಸಂಬಂಧಗಳ ಮಹತ್ವ ಮತ್ತು ಧಾರ್ಮಿಕ ಆಚರಣೆಯ ತಿಳುವಳಿಕೆಯನ್ನು ಪ್ರತಿಯೊಬ್ಬ ತಾಯಂದಿರು ತಿಳಿಸಬೇಕಾಗಿದೆ. ಟಿ.ವಿ,ಮೊಬೈಲ್ ಬಳಕೆಯಿಂದ ಮಕ್ಕಳನ್ನು ದೂರವಿಟ್ಟು ಸಂಸ್ಕೃತಿ ಸಂಸ್ಕಾರ ಹೇಳಿಕೊಟ್ಟಾಗ ಮಾತ್ರ ಮುಂದಿನ ದಿನದಲ್ಲಿ ಸ್ವಸ್ಥ ಸಮಾಜ ನಿರ್ಮಾಣ ಮಾಡಲು ಸಾಧ್ಯ. ಆ ಉದ್ದೇಶದಿಂದ ಪೂಜ್ಯರು ಪ್ರತಿ ಗ್ರಾಮಗಳಲ್ಲಿ ಇಂತಹ ಪೂಜಾ ಕಾರ್ಯಕ್ರಮ ನಡೆಸಿ ಜಾಗೃತಿ ಮೂಡಿಸುವ ಕೆಲಸ ಮಾಡುತ್ತಿದ್ದಾರೆ. ಧರ್ಮದಿಂದ ಕೂಡಿದ ಅಭಿವೃದ್ಧಿ ಮಾತ್ರ ಶಾಶ್ವತ ಅಭಿವೃದ್ಧಿಯಾಗಲಿದೆ.

ಬಡವ ಬಡವನಾಗಿಯೇ ಸಾಯಬಾರದು. ಬಡವರ ಕನಸನ್ನು ನನಸು ಮಾಡಲು ಪೂಜ್ಯರು ಈ ಯೋಜನೆಯನ್ನು ಪ್ರಾರಂಭಿಸಿದರು. ಬ್ಯಾಂಕ ಗಳಿಗೆ ತಾವೇ ಜವಾಬ್ದಾರಿ ನೀಡಿ ಸಂಘದ ಸದಸ್ಯರುಗಳಿಗೆ ಸಾಲ ಒದಗಿಸುವ ಕೆಲಸ ಮಾಡುತ್ತಿದ್ದು ಯಾರೂ ಯಾವುದೇ ಅಪಪ್ರಚಾರಗಳಿಗೆ ಕಿವಿಗೊಡದೇ ಸಂಘಗಳನ್ನು ಸರಿಯಾಗಿ ನಡೆಸಿಕೊಂಡು ಹೋಗುವ ಬಗ್ಗೆ ಕರೆನೀಡಿದರು.

ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿದ್ದ ಪರಮಪೂಜ್ಯ ಶ್ರೀ ಬಸವರಾಜ ದೇವರು ಬೃಹನ್ಮಠ ಹೊನ್ನಿಹಾಳ ಇವರು ಮಾತನಾಡಿ, ಸತ್ಯ ಧರ್ಮ ನ್ಯಾಯ ನಿಷ್ಠೆ ಪ್ರಾಮಾಣಿಕತೆಯಿಂದ ಅನ್ಯರಿಗೆ ಕೇಡು ಬಯಸದೆ ಬದುಕುವುದೇ ಪ್ರತಿಯೊಬ್ಬರ ಸಾಧನೆಯಾಗಬೇಕು. ಸತ್ ಚಿಂತನೆ, ಸತ್ ಚಾರಿತ್ಯ, ಸತ್ ವಿಚಾರಗಳನ್ನು ಅಳವಡಿಸಿಕೊಂಡು ಇಂತಹ ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದಲ್ಲಿ ಮಾತ್ರ ಅದು ಭಕ್ತಿಯ, ಧರ್ಮದ ಕಾರ್ಯಕ್ರಮವಾಗಲಿದೆ. ಪ್ರತಿಯೊಬ್ಬರು ಸತ್ಯದ ಮಾರ್ಗದಲ್ಲಿ ನಡೆಯಲು ಸಾಧ್ಯವಾಗಲಿದೆ ಎಂದು ಆಶೀರ್ವಚನ ನೀಡಿದರು.

ಕಾರ್ಯಕ್ರಮದಲ್ಲಿ ಮಾವಿನಟ್ಟಿ ಹಿರೇಮಠದ ಪರಮ ಪೂಜ್ಯ ಶ್ರೀ ರುದ್ರಮುನಿ ದೇವರು, ಪೂಜ್ಯ ಶ್ರೀ ಸಂತೋಷಕುಮಾರ, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಬೆಳಗಾವಿ ಜಿಲ್ಲಾ ನಿರ್ದೇಶಕರಾದ ಸತೀಶ ನಾಯ್ಕ, ಅಖಿಲಕರ್ನಾಟಕ ಜಿಲ್ಲಾ ಜನಜಾಗೃತಿ ವೇದಿಕೆ ಸದಸ್ಯರಾದ ವಿರೂಪಾಕ್ಷಪ್ಪ ಇಟಗಿ,ಗ್ರಾಮ ಪಂಚಾಯತ ಉಪಾಧ್ಯಕ್ಷರಾದ ಬಸನಗೌಡ ನಾಗನಗೌಡ ಪಾಟೀಲ,ಮಾಜಿ ಸೈನಿಕರಾದ ಉಳವಪ್ಪ ಶಿವರಾಯಿ ಮಲ್ಲನ್ನವರ,ಶ್ರೀ ವರದ ಶಂಕರ ಪೂಜಾ ಸಮಿತಿ ಅಧ್ಯಕ್ಷರಾದ ಶಂಕರೆಪ್ಪಾ ಮಲ್ಲನ್ನವರ, ಚನ್ನಪ್ಪ ಹಿರೇಹೊಳಿ,ಈರಯ್ಯಾ ಹಿರೇಮಠ, ಗ್ರಾ.ಪಂ ಅಧ್ಯಕ್ಷರಾದ ನಮೃತಾ ಪ್ರಶಾಂತ ಜಾಧವ ಅಧ್ಯಕ್ಷತೆ ವಹಿಸಿದ್ದರು.



## ಮುಕ್ತನಿಧಿ ಅನುದಾನದಡಿ ನೀರಿನ ಟ್ಯಾಂಕ್‌ಗೆ ಪೂಜೆ

**ಯರಗಟ್ಟಿ:** ನಗರಾಭಿವೃದ್ಧಿ ಇಲಾಖೆ, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು ಪಟ್ಟಣ ಪಂಚಾಯಿತಿ ಯರಗಟ್ಟಿ ಸವದತ್ತಿ ಯಲ್ಲಮ್ಮನ ವಿಧಾನ ಸಭಾ ಕ್ಷೇತ್ರದ ಶಾಸಕ ವಿಶ್ವಾಸ ವೈದ್ಯ ಅವರ ನೇತೃತ್ವದಲ್ಲಿ ಎಸ್.ಬಿ.ಎಂ ಅನುದಾನದಲ್ಲಿ ಖರೀದಿಸಿದ ಅಟೋ ಟಿಪ್ಪರ, ಜೆಸಿಬಿ ಮತ್ತು ಎಸ್.ಎಫ್.ಸಿ. ಮುಕ್ತನಿಧಿ ಅನುದಾನದಡಿ ನೀರಿನ ಟ್ಯಾಂಕ್‌ಗೆ ಪೂಜಾ ಕಾರ್ಯಕ್ರಮ ನೆರವೇರಿಸಿದರು.

ಈ ವೇಳೆ ತಹಶೀಲ್ದಾರ ಎಮ್ ವ್ಹಿ ಗುಂಡಪ್ಪಗೋಳ, ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಮಹೇಶ ಭಜಂತ್ರಿ, ಪ. ಪಂ. ಕಿರಿಯ ತಾಂತ್ರಿಕ ಅಭಿಯಂತರ ವೆಂಕಟೇಶ ಕಾಮಣ್ಣವರ, ಪ. ಪಂ. ಕಿರಿಯ ಆರೋಗ್ಯ ನೀರಿಕ್ಷ ನಾಗರಾಜ ಚಡಪ್ಪನವ, ಪ. ಪಂ. ಸದಸ್ಯರಾದ ನಿಖಿಲ ಪಾಟೀಲ, ಹನಮಂತ ಹಾರೂಗೊಪ್ಪ, ವಿಠ್ಠಲ ದೇವರಡ್ಡಿ, ಶಿವಾನಂದ ಕರಿಗೋಣವರ, ರಮೇಶ ಪಾಟೀಲ, ಕೆಎಂಎಫ್ ನಿರ್ದೇಶಕ ಶಂಕರ ಇಟ್ನಾಳ, ಎಪಿಎಂಸಿ ಅಧ್ಯಕ್ಷ ನೀಲಕಂಠ ಶೀದ್ದಬಸನ್ನವರ, ಪ್ರಕಾಶ ವಾಲಿ, ಫಾರುಕ್ ಅತ್ತಾರ, ಮಂಜುನಾಥ ತಡಸಲೂರ, ಗೌಡಪ್ಪ ಉದಪುಡಿ, ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಡಿಸಿಸಿ ಬ್ಯಾಂಕ್ ಚುನಾವಣೆ

## ರಾಹುಲ್ ಜಾರಕಿಹೊಳಿ ಸ್ಪರ್ಧೆ ಇನ್ನೂ ಚರ್ಚೆಯಲ್ಲಿದೆ: ಸಚಿವ ಜಾರಕಿಹೊಳಿ

ಬೆಳಗಾವಿ: ಬೆಳಗಾವಿ ಡಿಸಿಸಿ ಬ್ಯಾಂಕ್ ಚುನಾವಣೆಯಲ್ಲಿ ರಾಹುಲ್ ಜಾರಕಿಹೊಳಿ ಸ್ಪರ್ಧಿಸುವ ಬಗ್ಗೆ ಇನ್ನೂ ಚರ್ಚೆಯಲ್ಲಿದೆ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದರು.

ನಗರದಲ್ಲಿ ಮಾಧ್ಯಮದವರ ಜೊತೆ ಮಾತನಾಡಿದ ಅವರು, ಡಿಸಿಸಿ ಬ್ಯಾಂಕ್ ಚುನಾವಣೆಯಲ್ಲಿ ರಾಹುಲ್ ಜಾರಕಿಹೊಳಿ ಸ್ಪರ್ಧೆ ಮಾಡುವ ಕುರಿತು ಎಲ್ಲ ನಾಯಕರೊಂದಿಗೆ ಚರ್ಚಿಸಿ 10 ದಿನದಲ್ಲಿ ತಿರ್ಮಾಣ ಕೈಗೊಳ್ಳಲಾಗುವುದು ಎಂದರು.

**ಸಿಎಂಗೆ ಶೀಘ್ರವೇ ಮನವಿ:** ಸಚಿವ ಸಂಪುಟದಲ್ಲಿ ಖಾಲಿಯಿರುವ 2 ಹುದ್ದೆಗಳನ್ನು ವಾಲ್ಮೀಕಿ ಸಮಾಜಕ್ಕೆ ನೀಡಬೇಕೆಂದು ಸಿಎಂ ಸಿದ್ಧರಾಮಯ್ಯ ಅವರಿಗೆ ಮನವಿ ಮಾಡಲಾಗುವುದು ಎಂದ ಅವರು, ರಾಜಣ್ಣ ಅವರು ಮೊದಲು ಪಾದರಸದಂತೆ ಇದ್ದ ಸಿಎಂ ಸಿದ್ಧರಾಮಯ್ಯ ಇಲ್ಲ ಎಂಬ ಹೇಳಿಕೆಗೆ ಇದನ್ನ ಅವರ ಬಳಿಯೇ ಕೇಳಬೇಕು ಎಂದರು. ಇನ್ನು ಸಿಎಂ ಸ್ವತಃ 2ವರೆ ವರ್ಷ ಸಿಎಂ ಆಗಿ ಮುಂದುವರೆಯುತ್ತೇನೆಂದು ಹೇಳಿದ್ದು, ಗೊಂದಲಕ್ಕೆ ತೆರೆ ಎಳೆಯಲಾಗಿದೆ. ಅಂತಿಮವಾಗಿ ಹೈಕಮಾಂಡ್ ಹೇಳಬೇಕು ಎಂದ ಅವರು, ಬೆಂಗಳೂರಿನಲ್ಲಿ ನಾಳೆ ವಾಲ್ಮೀಕಿ ಜಯಂತಿಯಿದ್ದು ಆ ವೇಳೆ ಸಂಪುಟದಲ್ಲಿ ಖಾಲಿಯಿರುವ 2 ಸ್ಥಾನಗಳನ್ನು ವಾಲ್ಮೀಕಿ ಸಮಾಜಕ್ಕೆ ನೀಡಬೇಕೆಂದು ಒತ್ತಾಯಿಸಲಾಗುವುದು ಎಂದರು.

### ಬಿಜೆಪಿ ಕಾರ್ಯಾಲಯದಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ ಡಾ.ವೀರಣ್ಣ ಚರಂತಿಮಠ ಅಭಿಮತ

# ವಾಲ್ಮೀಕಿಯ ರಾಮರಾಜ್ಯ, ಪ್ರಧಾನಿ ಮೋದಿಯಿಂದ ಕಾರ್ಯಗತ




**ಬಾಗಲಕೋಟೆ:** ಅಧಿಕಾರಕ್ಕಿಂತ ಧರ್ಮದ ಮೌಲ್ಯಗಳು ಮುಖ್ಯ ಎಂದು ಸಾರಿದ ಮಹರ್ಷಿ ವಾಲ್ಮೀಕಿಯ ರಾಮರಾಜ್ಯವನ್ನು ಪ್ರಧಾನಿ ಮೋದಿ ನನಸು ಮಾಡುತ್ತಿದ್ದಾರೆ ಎಂದು ಮಾಜಿ ಶಾಸಕ ಡಾ.ವೀರಣ್ಣ ಚರಂತಿಮಠ ಹೇಳಿದರು.

ಅವರು ನಗರದ ಶಿವಾನಂದ ಜೀನನಲ್ಲಿರುವ ಬಿಜೆಪಿ ಕಾರ್ಯಾಲಯದಲ್ಲಿ ಮಂಗಳವಾರ ಭಾರತೀಯ ಜನತಾ ಪಾರ್ಟಿ ಬಾಗಲಕೋಟೆ ಮತಕ್ಷೇತ್ರದಿಂದ ಹಮ್ಮಿಕೊಂಡ ಮಹರ್ಷಿ ವಾಲ್ಮೀಕಿಯವರ ಜಯಂತಿ ದಿನಾಚರಣೆ ನಿಮಿತ್ಯ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸುವ ಮೂಲಕ ಗೌರವ ನಮನಗಳನ್ನು ಸಲ್ಲಿಸಿ ಮಾತನಾಡಿದ ಅವರು ಪ್ರತಿಯೊಬ್ಬರು ಅಧಿಕಾರವನ್ನು ಧರ್ಮದ ಹಾದಿಯಲ್ಲಿ ಪಡೆಯಬೇಕು, ನ್ಯಾಯ ನಿಷ್ಠೆ, ಪ್ರಾಮಾಣಿಕತೆಯಿಂದ ಅಧಿಕಾರ ನಡೆಸಬೇಕೆಂಬ ಮಹರ್ಷಿ ವಾಲ್ಮೀಕಿ ಬಯಸಿದ ರಾಮರಾಜ್ಯವನ್ನು ಪ್ರಧಾನಿ ಮೋದಿ ಕಟ್ಟುತ್ತಿದ್ದಾರೆ.

ಪ್ರತಿಯೊಬ್ಬ ಪ್ರಜೆಯ ಸಮಸ್ಯೆಗಳ ಪರಿಹಾರವನ್ನು ರಾಮಾಯಣದಲ್ಲಿ ನಿತ್ಯ ನೂತನವಾಗಿ ಕಾಣಬಹುದು, ಕಲೆ,ಸಾಹಿತ್ಯ, ಸಂಗೀತ, ಶಾಸ್ತ್ರಗಳ ಬಳಕೆ, ವೈಜ್ಞಾನಿಕ ಬಳಕೆಮ ವಿನೂತನ ವಿದ್ಯಾಭ್ಯಾಸ ಕ್ರಮ,ಪರಿಸರ, ಸಾಮಾಜಿಕ ನ್ಯಾಯ, ಅರ್ಥ ನೀತಿ, ನ್ಯಾಯ ನೀತಿ, ಮನುಷ್ಯ ಸಂಬಂಧಗಳು ಮುಂತಾದ ಎಲ್ಲ ವಿಚಾರಗಳನ್ನು ಸಾರ್ವಕಾಲಿಕ ಸತ್ಯವಾಗಿ ರಚಿಸಲಾಗಿದೆ, ಅಧಿಕಾರಕ್ಕಿಂತ ಧರ್ಮ ಮೌಲ್ಯಗಳು ಮುಖ್ಯ ಎಂದು ಮಹರ್ಷಿ ವಾಲ್ಮೀಕಿ ಸಾರಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಡಾ.ಎಂ.ಎಸ್.ದಡ್ಡೆನ್ನವರ, ಅಯ್ಯಪ್ಪ ವಾಲ್ಮೀಕಿ, ರಾಜು ಮುದೇನೂರ, ,ಬಸವರಾಜ ಯಂಕಂಚಿ, ನಗರಸಭೆ ಅಧ್ಯಕ್ಷೆ ಸವಿತಾ ಲಂಕೆನ್ನವರ, ಉಪಾಧ್ಯಕ್ಷೆ ಶೋಭಾ ರಾವ, ಸದಸ್ಯರಾದ ಸರಸ್ವತಿ ಕುರಬರ, ಶಶಿಕಲಾ ಮಜ್ಜಗಿ, ಶಾಂತಾ ಹನಮಕ್ಕನವರ, ಪ್ರೇಮಾ ಅಂಬಿಗೇರ, ಚೆನ್ನಯ್ಯ ಹಿರೇಮಠ, ಮಹಾಂತೇಶ ಹಿರೇಮಠ, ಕುಮಾರ ಯಳ್ಳಿಗುತ್ತಿ, ಗುಂಡುರಾವ ಶಿಂಧೆ, ಶಿವಾನಂದ ಟವಳಿ, ಯಲ್ಲಪ್ಪ ನಾರಾಯಣಿ, ಬಸವರಾಜ ಹುನಗುಂದ, ಉಮೇಶ ಹಂಚಿನಾಳ, ಶ್ರೀಧರ ನಾಗರಬೆಟ್ಟ, ರವಿ ನಾಯಕ, ಶಂಕರ ಗಲಗ, ಚಂದ್ರು ರಾಮೊಡಗಿ,ನಾಗರಾಜ ನಾರಾಯಣಕರ, ಅಶೋಕ ಪವಾರ, ದೂಳಪ್ಪ ಕೊಪ್ಪದ ಜ್ಯೋತಿ ಬಂಡಿವಡ್ಡರ ಸೇರಿದಂತೆ ಅನೇಕ ಕಾರ್ಯಕರ್ತರು ಭಾಗವಹಿಸಿದ್ದರು.

# ಎಲ್ಲೆಂದರಲ್ಲಿ ಧಮ್ ಅಡ್ಡ: ನಿಯಮಕ್ಕಿಲ್ಲ ಬೆಲೆ

**ವರದಿ: ಮಲ್ಲಿಕಾರ್ಜುನ ತುಂಗಳ**

**ರಬಕವಿ-ಬನಹಟ್ಟಿ:** ಈ ಮೊದಲು ಬೃಹತ್ ಕಟ್ಟಡಗಳು, ಶಾಪಿಂಗ್ ಮಾಲ್, ಪ್ರತಿಷ್ಠಿತ ಕಂಪನಿ, ಹೊಟೇಲ್ ಹಾಗು ಪ್ರಮುಖ ರಸ್ತೆಗಳು ಅನಧಿಕೃತ ಧೂಮಪಾನ ಕೇಂದ್ರಗಳಾಗುತ್ತಿವೆ. ಇದಕ್ಕೆ ಪೂರಕವಾಗಿ ರಬಕವಿ-ಬನಹಟ್ಟಿ ತಾಲೂಕಿನಾದ್ಯಂತ ಸಣ್ಣ-ಪುಟ್ಟ ಹೊಟೇಲ್, ಬೀಡಾ ಅಂಗಡಿ ಸೇರಿದಂತೆ ಸಾರ್ವಜನಿಕ ಸ್ಥಳ ಮರೆತು ಗುಂಪು ಗುಂಪಾಗಿ ರಸ್ತೆ ಮೇಲೆ ನಿಂತು ಧೂಮಪಾನ ಮಾಡುವವರ ಸಂಖ್ಯೆ ಹೆಚ್ಚಾಗಿದ್ದು, ಸೂಕ್ತ ಕಾನೂನು ಪಾಲನೆಯಾಗುತ್ತಿಲ್ಲ.

ಬನಹಟ್ಟಿಯ ಬಸ್ ನಿಲ್ದಾಣ, ಗಾಂಧಿ ವೃತ್ತ, ಮಂಗಳವಾರ ಪೇಟೆ, ಸೋಮವಾರ ಪೇಟೆ, ರಬಕವಿಯ ಮಾರುಕಟ್ಟೆ, ಭಗೀರಥ ವೃತ್ತ ಸೇರಿದಂತೆ ಎಲ್ಲೆಂದರಲ್ಲಿ ಕಾನೂನಿನ ಭಯವಿಲ್ಲದೆ ಗುಂಪು ಗುಂಪಾಗಿ ಸಿಗರೇಟ್ ಸೇವನೆ ಮಾಡುವವರ ಜೊತೆಗೆ ಕೆಲವೆಡೆ 'ಸ್ಮೋಕಿಂಗ್ ಸ್ಪಾಟ್' ಹೆಸರಿನಲ್ಲಿ ಯಾವದೇ ಸುರಕ್ಷಿತವಿಲ್ಲದೆ ಚಿಕ್ಕ ಚಿಕ್ಕ ಕೋಣೆಗಳನ್ನೇ ನಿರ್ಮಿಸಿಕೊಂಡಿದ್ದಾರೆ.

**ಹೇಳೋರಿಲ್ಲ, ಕೇಳೋರಿಲ್ಲ:** 200 ದಂಡ, ಪ್ರಕರಣ ಹೀಗೆ ಕಾನೂನಿದ್ದರೂ ಕೇವಲ




ಫಲಕಗಳಿಗೆ ಸೀಮಿತಗೊಂಡಿವೆ. ಪೊಲೀಸ್ ಹಾಗು ಅಬಕಾರಿ ಇಲಾಖೆ ಕ್ರಮಕ್ಕೆ ಮುಂದಾಗಬೇಕಿದೆ.

**ದಂಡವಿಲ್ಲ:** ಇಷ್ಟೊಂದು ರಾಜಾರೋಷವಾಗಿ ಸಿಗರೇಟ್, ಬೀಡಿ ಸೇದುತ್ತಿದ್ದರೂ ಒಮ್ಮೆಯೂ ದಂಡ ಅಥವಾ ಕಾನೂನಿನ ಭಯವಿಲ್ಲದೆ ಗುಂಪು ಗುಂಪಾಗಿ ಸಿಗರೇಟ್ ಸೇದುತ್ತಾರೆಯೆಮದು ಪಾದಚಾರಿಯೊಬ್ಬರು ಬೇಸರ ವ್ಯಕ್ತಪಡಿಸಿದರು.

**ಮಾದಕ ವಸ್ತು:** ತಾಲೂಕಿನ ಕಾಲೇಜು ವಿದ್ಯಾರ್ಥಿಗಳು ಹಾಗು ಪುಂಡ ಪೋಕರಿಗಳ ಕೈಗೆ ಮಾದಕ ವಸ್ತುಗಳು ದೊರಕುತ್ತಿವೆ. ಸದ್ದಿಲ್ಲದೆ ಜವಳಿ ನಗರದಲ್ಲಿ ಗಾಂಜಾ ಸೇದುವವರು ಕೀಳು, ದುಬಾರಿ ಡ್ರಗ್ ಸೇವಿಸುವದು ಮೇಲು ಎನ್ನುವಂತಾಗಿದ್ದು ಹಲವಾರು ಮಕ್ಕಳು ದಾರಿ ತಪ್ಪುವಲ್ಲಿ ಕಾರಣವಾಗಿದೆ.

> 'ಇತ್ತೀಚಿನ ದಿನಗಳಲ್ಲಿ ಹೃದಯಾಘಾತಕ್ಕೆ ಸಿಗರೇಟ್ ಹಾಗು ಗುಟಖಾದಿಮದ 30 ರಿಂದ 40 ವರ್ಷದ ಯುವಕರು ಹೆಚ್ಚಾಗಿ ಬಲಿಯಾಗುತ್ತಿದ್ದಾರೆ. 1 ಸಿಗರೇಟ್ ಮನುಷ್ಯನ 20 ನಿಮಿಷದ ಆಯುಷ್ಯ ಕಡಿಮೆ ಮಾಡುವದು. ಮಾವಾ ಸೇವಿಸುವವರ ಸಂಖ್ಯೆ ಹೇರಳವಾಗಿದ್ದು, ಇವುಗಳ ನಿಯಂತ್ರಣವಾಗಬೇಕು'.
>
> **ಡಾ. ಜಿ.ಎಚ್. ಚಿತ್ತರಗಿ, ಹೃದಯ ತಜ್ಞರು, ರಬಕವಿ.**

**ಆನ್‌ಲೈನ್ ಮೂಲಕ ವಹಿವಾಟು:** ಸೈಬರ್ ತಂತ್ರಜ್ಞಾನ ಮತ್ತು ಆನ್‌ಲೈನ್ ವಹಿವಾಟು ವೃದ್ಧಿಯಾಗಿರುವದರಿಂದ ಪೆಡ್ಲರ್‌ಗಳು ಗಿರಾಕಿ ಹುಡುಕಿ ಹೋಗಬೇಕಿಲ್ಲ. ಆನ್‌ಲೈನ್‌ನಲ್ಲಿ, ಸಾಮಾಜಿಕ ಜಾಲತಾಣ ಗಳಲ್ಲಿ ತಮ್ಮದೇ ಗ್ರೂಪ್‌ಗಳನ್ನು ರಚಿಸಿಕೊಂಡಿರುವ ಇವರು, ಬೇಕಾದ ಮಾದರಿ ಮಾದಕ ವಸ್ತುಗಳನ್ನ ಮನೆ ಬಾಗಿಲಿಗೇ ತರಿಸಿಕೊಳ್ಳುತ್ತಿದ್ದಾರೆ. ಇಷ್ಟೊಂದು ಪರಿಣಾಮಕಾರಿಯಾದ ಡ್ರಗ್ಸ್‌ಗಳು ರಬಕವಿ-ಬನಹಟ್ಟಿಯಲ್ಲಿ ಹರಿದಾಡುತ್ತಿವೆ.




# ಮಹರ್ಷಿ ವಾಲ್ಮೀಕಿ ಜಯಂತೋತ್ಸವ

**ಬಸವನಬಾಗೇವಾಡಿ:** ನಗರದ ಬಸವೇಶ್ವರ ಕಲ್ಯಾಣ ಮಂಟಪದಲ್ಲಿ ತಾಲೂಕಾಡಳಿತ, ಸಮಾಜ ಕಲ್ಯಾಣ ಇಲಾಖೆಯ ಸಹಯೋಗದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಮಹರ್ಷಿ ವಾಲ್ಮೀಕಿ ಜಯಂತೋತ್ಸವ ಕಾರ್ಯಕ್ರಮದಲ್ಲಿ ರಾಜ್ಯಮಟ್ಟದ ಉತ್ತಮ ಉಪನ್ಯಾಸಕ ಪ್ರಶಸ್ತಿಗೆ ಭಾಜನರಾದ ಬಸವರಾಜ ಜಾಲವಾದಿ, ಕಾರ್ಯಕ್ರಮದ ಉಪನ್ಯಾಸಕ ಬಸವರಾಜ ಹಂಚಲಿ ಅವರನ್ನು ತಾಲೂಕಾಡಳತದಿಂದ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಮುಖಂಡರಾದ ಸತ್ಯಜೀತ ಪಾಟೀಲ, ಈರಣ್ಣ ಪಟ್ಟಣಶೆಟ್ಟೆ, ಸುರೇಶ ಹಾರಿವಾಳ,ಪುರಸಭೆ ಅಧ್ಯಕ್ಷೆ ಜಗದೇವಿ ಗುಂಡಳ್ಳಿ, ತಹಸೀಲ್ದಾರ ವೈ.ಎಸ್.ಸೋಮನಕಟ್ಟಿ, ಮಂಜುಳಾ ಹಿರೇಮನಿ ಇತರರು ಇದ್ದರು.

# ವಾಲ್ಮೀಕಿ ಸಮುದಾಯ ಎಲ್ಲ ರಂಗಗಳಲ್ಲಿಯೂ ಮುಂದೆ ಬರಬೇಕು



**ರಾಯಬಾಗ:** ಮಹರ್ಷಿ ವಾಲ್ಮೀಕಿಯು ರಚಿಸಿದ ರಾಮಾಯಣ ಇಡೀ ಜಗತ್ತಿಗೆ ಮಹಾಕಾವ್ಯ ಆಗಿದೆ. ಆದಿಕವಿ ಮಹರ್ಷಿ ವಾಲ್ಮೀಕಿಯ ಪೂರ್ವಾಶ್ರಮದ ಬದುಕಿಗೆ ಸಾಕ್ಷಿಯಾಗಿದೆ. ವಾಲ್ಮೀಕಿ ಸಮುದಾಯದವರು ಎಲ್ಲ ರಂಗಗಳಲ್ಲಿಯೂ ಮುಂದೆ ಬರಬೇಕುಎಂದು ಶಾಸಕ ಡಿ ಎಂ ಐಹೊಳೆ ಹೇಳಿದರು.

ತಾಲ್ಲೂಕ ಆಡಳಿತ, ತಾಲ್ಲೂಕ ಪಂಚಾಯತಿ, ಪಟ್ಟಣ ಪಂಚಾಯಿತಿ ಹಾಗೂ ಸಮಾಜ ಕಲ್ಯಾಣ ಇಲಾಖೆ ರಾಯಬಾಗ ಇವರ ಸಂಯುಕ್ತಾಶ್ರಯದಲ್ಲಿ ಪಟ್ಟಣದ ತಹಶೀಲ್ದಾರ್ ಕಾರ್ಯಾಲಯದಲ್ಲಿ ನಡೆದ ಮಹರ್ಷಿ ವಾಲ್ಮೀಕಿಯವರ ಜಯಂತಿ ಉತ್ಸವ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.
ಉಪನ್ಯಾಸಕ ರಾಜೇಂದ್ರ ಪಂಗಣ್ಣವರ ಮಾತನಾಡಿ,ಮಹರ್ಷಿ ವಾಲ್ಮೀಕಿ ರಚಿಸಿದ ರಾಮಾಯಣ ಭಾರತೀಯ ಸಂಸ್ಕೃತಿಯ ಅಮೂಲ್ಯ ಕಾವ್ಯವಾಗಿದೆ. ಇದು ಕೇವಲ ದೇವರ ಕಥೆಯಲ್ಲ, ಮಾನವ ಜೀವನದ ಮಾರ್ಗದರ್ಶಕ ಗ್ರಂಥವೂ ಆಗಿದೆ. ರಾಮಾಯಣ ಓದುವುದರಿಂದ ವ್ಯಕ್ತಿಯ ಚಿಂತನೆ, ವರ್ತನೆ ಹಾಗೂ ನಡತೆಗಳಲ್ಲಿ ಶ್ರೇಷ್ಠ ಪರಿವರ್ತನೆ ಸಂಭವಿಸುತ್ತದೆ ಎಂದರು. ತಹಶೀಲ್ದಾರ್ ಮಹಾದೇವ ಸನಮೂರಿ, ತಾಲ್ಲೂಕ ಸಮಾಜ ಕಲ್ಯಾಣಾಧಿಕಾರಿ ವಿಠ್ಠಲ ಚಂದರಗಿ, ಪಟ್ಟಣ ಪಂಚಾಯಿತಿ ಅಧ್ಯಕ್ಷ ಅಶೋಕ ಅಂಗಡಿ, ವಾಲ್ಮೀಕಿ ಸಮಾಜದ ಮುಖಂಡ ರಾಮಣ್ಣ ಗಸ್ತಿ, ಅರೋಗ್ಯಧಿಕಾರಿ ಎಸ್ ಎಮ್ ಪಾಟೀಲ,ಲೋಕೋಪಯೋಗಿ ಎಇಇ ಆರ್ ಬಿ ಮನುವಡ್ಡರ, ಕೃಷಿ ಅಧಿಕಾರಿ ವಿನೋದ ಮಾವರಕರ,ಪಿಎಸ್ಐ ಪ್ರಕಾಶ ಮಾನೆ ಇದ್ದರು.

# ರಾಮಾಯಣ ರಚನೆಯಲ್ಲಿ ಮಹರ್ಷಿ ವಾಲ್ಮೀಕಿ ಅಗ್ರಗಣ್ಯರ

**ಮೂಡಲಗಿ:** ರಾಮಾಯಣ ಗ್ರಂಥ ರಚನೆಯಲ್ಲಿ ಮಹರ್ಷಿ ವಾಲ್ಮೀಕಿ ಅಗ್ರಗಣ್ಯರಾಗಿದ್ದು ಒಬ್ಬ ದರೋಡೆಕೊರನಾಗಿದ್ದ ರತ್ನಾಕರ ಮಹರ್ಷಿ ವಾಲ್ಮೀಕಿಯಾಗಿ ನಾರದಮುನಿಗಳ ಸಂದೇಶದಂತೆ ಪರಿವರ್ತನೆಯಾಗಿ ಮಾನವ ಕುಲದಲ್ಲಿ ಶ್ರೇಷ್ಠತೆಯ ಮೌಲ್ಯಗಳನ್ನು ಹೊಂದಿರುವ ರಾಮನ ಜೀವನದ ಯಶೋಗಾಥೆಯನ್ನು ಪರಿಚಯಸುವಲ್ಲಿ ಮಹತ್ವದ ಪಾತ್ರ ವಹಿಸಿದ್ದು ರಾಮನಾಮದಲ್ಲಿ ದೇವನಿದ್ದು ಸಾರ್ವಕಾಲಿಕ ಸಾಮಾಜಿಕ ಮೌಲ್ಯಗಳನ್ನು ರಾಮಾಯಣದ 24000 ಶ್ಲೋಕಗಳ ಮೂಲಕ ಪರಿಚಯಸುವಲ್ಲಿ ಮಹರ್ಷಿ ವಾಲ್ಮೀಕಿ ಮನುಕುಲದ ಮಹಾನ್ ವಿದ್ವಾಂಸರಾಗಿದ್ದಾರೆ ಎಂದು ಮೂಡಲಗಿಯ ಆರ್‌ಡಿಎಸ್ ಪದವಿ ಪೂರ್ವ ಕಾಲೇಜಿನ ಅರ್ಥಶಾಸ್ತ್ರ ಉಪನ್ಯಾಸಕ ಸಿದ್ದಾರೂಢ ಬೆಳವಿ ಹೇಳಿದರು.

ಪಟ್ಟಣದ ಆರ್.ಡಿ.ಎಸ್. ಕಲಾ, ವಾಣಿಜ್ಯ, ವಿಜ್ಞಾನ, ಸಮಾಜ ಕಾರ್ಯ ಪದವಿ ಮಹಾ ವಿದ್ಯಾಲಯ, ಸ್ವತಂತ್ರ ಪದವಿ ಪೂರ್ವ ಮಹಾವಿದ್ಯಾಲಯಗಳ ಎನ್.ಎಸ್.ಎಸ್. ಘಟಕಗಳ ಸಂಯುಕ್ತಾಶ್ರಯದಲಿ ಮಂಗಳವಾರ ಆಯೋಜಿಸಿದ ಮಹರ್ಷಿ ವಾಲ್ಮೀಕಿ ಜಯಂತಿಯಲ್ಲಿ ಅತಿಥಿಗಳಾಗಿ ಮಾತನಾಡಿದರು.

ಉಪನ್ಯಾಸಕಿ ಪ್ರಸ್ಕೀಲಾ ಗಸ್ತಿ ಮಾತನಾಡಿ ಪಿತೃವಾಕ್ಯ ಪರಿಪಾಲಕನಾಗಿ ಸತ್ಯ ಮತ್ತು ಧರ್ಮದ ಮೂಲಕ ರಾಜ್ಯವನ್ನು ಆಳ್ವಿಕೆ ಮಾಡಿ ಮಾನವಕುಲದಲ್ಲಿ ಸರ್ವಶ್ರೇಷ್ಠತೆಯ ವಿಚಾರಗಳನ್ನು ಪ್ರತಿಪಾಧಿಸಿದ ರಾಮನ ಜೀವನದ



ತಿರಳನ್ನು ಹೊಂದಿರುವ ರಾಮಾಯಣ ಎಂಬ ಗ್ರಂಥವನ್ನು ರಚಿಸಿ ಮಾನವಕುಲದ ಸೈದಾಂತಿಕ ವಿಚಾರಧಾರೆಗಳನ್ನು ಅರ್ಥೈಸಿಕೊಡುವಲ್ಲಿ ಮಹರ್ಷಿ ವಾಲ್ಮೀಕಿಯವರ ಜ್ಞಾನದ ಚಿಂತನೆಯನ್ನು ತಿಳಿಸಿಕೊಡುತ್ತದೆ ಎಂದರು.

ಪದವಿ ಕಾಲೇಜಿನ ಪ್ರಾಚಾರ್ಯ ಸತೀಶ ಗೋಟೂರೆ ಮಾತನಾಡುತ್ತಾ ಮಾನವನ ಜೀವನದಲ್ಲಿ ಯಾವುದು ಯೋಗ್ಯವಾದದ್ದು ಎಂದು ಮಹರ್ಷಿ ವಾಲ್ಮೀಕಿ ವಿಚಾರಧಾರೆಗಳಲ್ಲಿ ತಿಳಿದುಕೊಳ್ಳಬಹುದು ರಾಮಾಯಣ ಒಂದು ಗ್ರಂಥವಲ್ಲಾ ಅದು ಮನುಷ್ಯನಲ್ಲಿ ಇರುವ ಕಾಮ ಕ್ರೋಧ ಮದ ಮತ್ಸರಗಳನ್ನು ತ್ಯಜಿಸಿದಾಗ ಸನ್ಮಾರ್ಗಕ್ಕೆ ಓಯುವ ದಾರಿದೀಪವಾಗುವಂತೆ ಪರಿಚಯಸಿರುತ್ತಾರೆ ನಾವೆಲ್ಲರೂ ರಾಮನ ಜೀವನದ ಮಾರ್ಗಗಳನ್ನು ಅನುಸರಿಸಿ ರಾಮನಂತಹ ಜೀವನವನ್ನು ರೂಪಿಸಿಕೊಳ್ಳಲು ಪ್ರಯತ್ನಿಸೋಣ ಎಂದರು.

ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯ ಶಿವಾನಂದ ಸತ್ತಿಗೇರಿ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿಕೊಂಡು ಮಾತನಾಡುತ್ತಾ ದರೋಡೆ ಮಾಡುವ ಸ್ವಭಾವ ಹೊಂದಿರುವ ಮೂಲ ವಾಲ್ಮೀಕಿ ನಂತರ ರಾಮಾಯಣ ಬರೆಯುವ ಜ್ಞಾನಾತ್ಮಕ ವ್ಯಕ್ತಿಯಾಗಿ ಪರಿವರ್ತನೆಯಾದ ಘಟನೆಗಳು ಇಂದಿಗೊ ನಮ್ಮ ಅರಿವೆಗೆ ಬರುತ್ತದೆ ನಾವುಗಳು ಕೆಟ್ಟ ಸ್ವಭಾವಗಳನ್ನು ಬಿಟ್ಟು ವಾಲ್ಮೀಕಿ ಮತ್ತು ರಾಮನ ಸದ್ಭಾವಣೆಗಳನ್ನು ವಿದ್ಯಾರ್ಥಿಗಳು ರೂಢಿಸಿಕೊಳ್ಳುವುದು ಅಗತ್ಯವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಸಂಗಮೇಶ ಕುಂಬಾರ, ಸಂತೋಷ ಲಟ್ಟಿ, ಸುಭಾಸ ಮಾಲೋಜಿ, ಗಂಗಾಧರ ಮನ್ನಾಪೂರ, ಎಸ್.ಬಿ.ಸಿದ್ನಾಳ, ಸಂಜೀವ ಮಂಟೂರ, ಮುತ್ತಣ್ಣ ಒಡೆಯರ, ಸುನೀಲ ಸತ್ತಿ, ರಾಜು ಪತ್ತಾರ, ಮತ್ತಿತರರು ಹಾಜರಿದ್ದರು.ವೆಂಕಟೇಶ ಹೆಳವರ ನಿರೂಪಿಸಿದರು ಸವಿತಾ ಪಡದಲ್ಲಿ ಸ್ವಾಗತಿಸಿದರು. ರವಿ ಕಟಗೇರಿ ವಂದಿಸಿದರು.

# ಕಬಡ್ಡಿ ಪಂದ್ಯಾವಳಿ

## ವಿಜೇತರಿಗೆ ಬಹುಮಾನ ವಿತರಣೆ

**ಬೆಳಗಾವಿ:** ತಾಲೂಕಿನ ಮುಚ್ಚಂಡಿ ಗ್ರಾಮದ ಸಿದ್ದೇಶ್ವರ ಸ್ಪೋರ್ಟ್ಸ್ ಕ್ಲಬ್ ವತಿಯಿಂದ, ದಸರಾ ಹಬ್ಬದ ಹಿನ್ನೆಲೆ ಅಮೇಚರ್ ಕಬ್ಬಡಿ ಅಸೋಸಿಯೇಷನ್ ವತಿಯಿಂದ ಪಂದ್ಯಾವಳಿ ಆಯೋಜಿಸಲಾಗಿದೆ.

ಪಂದ್ಯಾವಳಿಯಲ್ಲಿ ಒಟ್ಟು 32 ತಂಡಗಳು ಭಾಗವಹಿಸಿರುವ ಪೈಕಿ ಶಿವನೇರಿ, ರಾಜಾ ಛತ್ರಪತಿ ತಂಡ ಕುದುರೆಮನಿ ದ್ವಿತೀಯ ಸ್ಥಾನ ಪಡೆದುಕೊಂಡಿದ್ದು, ಹರಿ ಓಂ ತಂಡ ತೃತೀಯ ಹಾಗೂ ಶ್ರೀ ನಾಗನಾಥ್ ಸ್ಪೋರ್ಟ್ಸ್ ಕ್ಲಬ್ ಬೆಕ್ಕಿನಕೆರಿ ನಾಲ್ಕನೆಯ ಸ್ಥಾನ ಪಡೆದುಕೊಂಡಿದೆ. ಎಲ್ಲ ವಿಜೇತರಿಗೆ ನಗದು ಬಹುಮಾನ ಹಾಗೂ ಪ್ರಥಮ ಸ್ಥಾನಕ್ಕೆ 20000 ರೂ, ದ್ವಿತಿಯ ಸ್ಥಾನಕ್ಕೆ 15000 ರೂ. ತೃತೀಯ ಸ್ಥಾನಕ್ಕೆ 1000 ರೂ ಜೊತೆಗೆ ಟ್ರೋಪಿ ಪಂದ್ಯಾವಳಿಯ ಅಧ್ಯಕ್ಷತೆಯನ್ನು ವಹಿಸಿಕೊಂಡ ಲೋಕೋಪಯೋಗಿ ಇಲಾಖೆಯ ಅಧ್ಯಕ್ಷರಾದ ಸಂಜುಕುಮಾರ ಹುಲಕಾಯಿ ಕಾರ್ಯಕ್ರಮ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಸ್ಪೋರ್ಟ್ಸ್ ಅಸೋಸಿಯೇಷನ್, ಅಧ್ಯಕ್ಷರು ಉಪಾಧ್ಯಕ್ಷರು, ಶಾಲಾ ಸಿಬ್ಬಂದಿ ವರ್ಗದವರು ಪಂದ್ಯಾವಳಿಯಲ್ಲಿ ಭಾಗಿಯಾದ ವಿದ್ಯಾರ್ಥಿಗಳು ಮತ್ತಿತರು ಪಾಲ್ಗೊಂಡಿದ್ದರು



### ಶ್ರೀ ಮಹರ್ಷಿ ವಾಲ್ಮೀಕಿ ಜಯಂತ್ಯೋತ್ಸವ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯ ಅಭಿಪ್ರಾಯ

# ಆದರ್ಶ ಸಮಾಜ ನಿರ್ಮಾಣದ ತತ್ವಗಳು ರಾಮಾಯಣದಲ್ಲಿವೆ

**ಕಾರವಾರ:** ಆದಿಕವಿ ಮಹರ್ಷಿ ವಾಲ್ಮೀಕಿ ಅವರು ರಚಿಸಿರುವ ರಾಮಾಯಣ ಮಹಾಕಾವ್ಯದಲ್ಲಿ ಇಡೀ ವಿಶ್ವಕ್ಕೆ ಅನ್ವಯವಾಗುವಂತಹ ಆದರ್ಶ ಸಮಾಜ ನಿರ್ಮಾಣಕ್ಕೆ ಅಗತ್ಯವಿರುವ ತತ್ವಗಳು ಇದ್ದು , ಉತ್ತಮ ಸಮಾಜ ನಿರ್ಮಾಣಕ್ಕಾಗಿ ಪ್ರತಿಯೊಬ್ಬರೂ ಈ ತತ್ವಗಳನ್ನು ಪಾಲಿಸಬೇಕಿದೆ ಎಂದು ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯ ಅಭಿಪ್ರಾಯ ವ್ಯಕ್ತಪಡಿಸಿದರು.

ಅವರು ಮಂಗಳವಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಕಾರವಾರ ಇವರ ಸಂಯುಕ್ತ ಆಶ್ರಯದಲ್ಲಿ ಕಾರವಾರದ ದೈವಜ್ಞ ಕಲ್ಯಾಣ ಮಂಟಪದಲ್ಲಿ ನಡೆದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಪ್ರತಿಯೊಬ್ಬ ವ್ಯಕ್ತಿಯೂ ತನ್ನಲ್ಲಿರುವ ದುರ್ಗುಣಗಳನ್ನು ತ್ಯಜಿಸಿ, ತನ್ನ ಭವಿಷ್ಯವನ್ನು ಉತ್ತಮ ರೀತಿಯಲ್ಲಿ ಬದಲಾಯಿಸಿಕೊಳ್ಳಬಹುದು ಎಂಬುದಕ್ಕೆ ವಾಲ್ಮೀಕಿ ಅವರೇ ಮಾದರಿ. ಬೇಡನಾಗಿದ್ದ ವ್ಯಕ್ತಿ ಮಹರ್ಷಿಯಾಗಿ,ಆದಿಕವಿಯಾಗಿ ಬದಲಾದ ಬಗ್ಗೆ ಮಹರ್ಷಿ ವಾಲ್ಮೀಕಿ ಅವರ ಜೀವನದಿಂದ ತಿಳಿಯಬಹುದಾಗಿದೆ. ರಾಮಾಯಣದಲ್ಲಿರುವ 24000 ಶ್ಲೋಕಗಳನ್ನು ಯಾವುದೇ ಭಾಷೆಗೆ ತರ್ಜುಮೆ ಮಾಡಿದರೂ ಅದರಲ್ಲಿನ ಮೂಲ ಹೋಲಿಕೆ ಕಾಣಲು ಸಾಧ್ಯವಾಗುವುದಿಲ್ಲ. ನಾಯಕತ್ವದ ಗುಣಗಳು, ಮಹಿಳಾ ಸಬಲೀಕರಣ, ಆದರ್ಶ ರಾಜ್ಯದ ಕಲ್ಪನೆಯನ್ನು



ರಾಮನ ಮೂಲಕ ರಾಮಾಯಣ ಮಹಾಕಾವ್ಯದಲ್ಲಿ ಕಾಣಬಹುದಾಗಿದೆ. ರಾಮಾಯಣವು ಪ್ರತಿಯೊಬ್ಬ ಭಾರತೀಯ ಜೀವನದಲ್ಲಿಯೂ ಹಾಸುಹೊಕ್ಕಾಗಿದ್ದು, ಅದರಲ್ಲಿರುವ ಆದರ್ಶ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಪರಸ್ಪರ ಸಹಕಾರದಿಂದ ಮಾದರಿ ಮತ್ತು ಆದರ್ಶ ಸಮಾಜ ನಿರ್ಮಾಣ ಮಾಡಬೇಕಿದೆ, ಅವಕಾಶ ವಂಚಿತರಿಗೆ ನೆರವು ನೀಡುವ ಮೂಲಕ ಅವರನ್ನೂ ಕೂಡಾ ಅಭಿವೃದ್ಧಿಯೆಡೆಗೆ ಕರೆದೊಯ್ಯಬೇಕು ಎಂದರು. ಕಾರ್ಯಕ್ರಮ ಉದ್ಘಾಟಿಸಿದ ನಗರಸಭೆ ಅಧ್ಯಕ್ಷ ರವಿರಾಜ ಚಂದ್ರಹಾಸ ಅಂಕೋಲೆಕರ ಮಾತನಾಡಿ, ಸತತ ಪ್ರಯತ್ನದಿಂದ ಅಸಾಮಾನ್ಯ ಸಾಧನೆಗಳನ್ನು ಮಾಡಬಹುದು ಎಂಬುದಕ್ಕೆ ಮಹರ್ಷಿ ವಾಲ್ಮೀಕಿ ಅವರೇ ಸಾಕ್ಷಿ. ಬೇಡನಾಗಿದ್ದು ನಿರಂತರ ತಪಸ್ಸಿನಿಂದ ಮಹರ್ಷಿಯಾಗಿ ಬದಲಾಗಿ, ರಾಮಾಯಣ ಮಹಾಕಾವ್ಯ ರಚಿಸಿದ ಅವರ ಸಾಧನೆ ಎಲ್ಲರಿಗೂ ಪ್ರೇರಣೆಯಾಗಬೇಕು ಎಂದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾ ಧಿಕಾರಿ ಡಾ.ದಿಲೀಷ್ ಶಶಿ ಮಾತನಾಡಿ, ಮಹರ್ಷಿ ವಾಲ್ಮೀಕಿ ಅವರು ರಾಮಾಯಣ ಮಹಾಕಾವ್ಯದ ಮೂಲಕ ಜೀವನದಲ್ಲಿ ಪಾಲಿಸಬೇಕಾದ ಎಲ್ಲಾ ಮೌಲ್ಯಗಳ ಬಗ್ಗೆ ತಿಳಿಸಿದ್ದು, ಇದು ಎಲ್ಲರಿಗೂ ಸ್ಫೂರ್ತಿಯಾಗಬೇಕು ಮತ್ತು ಈ ಕೃತಿಯಲ್ಲಿನ ತತ್ವಗಳನ್ನು ಪ್ರತಿಯೊಬ್ಬರೂ ಪಾಲನೆ ಮಾಡಬೇಕು ಎಂದರು.

ಮಹರ್ಷಿ ವಾಲ್ಮೀಕಿ ಕುರಿತು ಉಪನ್ಯಾಸ ನೀಡಿದ ಶಿಕ್ಷಕ ಚಂದ್ರಶೇಖರ ನಾಯಕ ದೊರೆ , ಹಿಂದುಳಿದ ಬೇಡ ಜನಾಂಗದ ರತ್ನಾಕರ, ನಾರದ ಮಹರ್ಷಿಗಳ ಸೂಚನೆಯಂತೆ ತನ್ನ ದೀರ್ಘ ತಪಸ್ಸಿನ ಮೂಲಕ ಮಹರ್ಷಿ ವಾಲ್ಮೀಕಿಯಾಗಿ ಪರಿವರ್ತನೆಗೊಂಡು ದೇಶದ ಆದಿಕಾವ್ಯ ಮಹಾಕಾವ್ಯವಾದ ರಾಮಾಯಣವನ್ನು ರಚಿಸಿದ್ದು ಮಹಾನ್ ಸಾಧನೆ. ರಾಮಾಯಣದಲ್ಲಿ ಸಕಲ ಸದ್ಗುಣಗಳು, ಇಡೀ ಮನುಜ ಕುಲ ಪಾಲಿಸಬೇಕಾದ ತತ್ವಗಳಿದ್ದು, ಸಾಮರಸ್ಯದ ಬದುಕು ಸಾಗಿಸುವ ನಿಟ್ಟಿನಲ್ಲಿ ಇದು ಅತ್ಯಂತ ಅಗತ್ಯವಾಗಿದೆ. ಮಹರ್ಷಿ ವಾಲ್ಮೀಕಿ ಯಾವುದೇ ಒಂದು ವರ್ಗಕ್ಕೆ ಸೀಮಿತವಾಗದೇ, ಎಲ್ಲಾ ಸಮುದಾಯಗಳಿಗೂ ಇಡೀ ಜಗತ್ತಿಗೆ ಆದರ್ಶವಾಗಿದ್ದಾರೆ. ಪರಿಶಿಷ್ಟ ವರ್ಗದ ಜನತೆ ಮೂಡನಂಬಿಕೆಗಳನ್ನು ಬಿಟ್ಟು, ಶಿಕ್ಷಣವನ್ನು ಪಡೆದು, ಸರ್ಕಾರ ನೀಡುವ ಸವಲತ್ತುಗಳನ್ನು ಬಳಸಿಕೊಂಡು ಅಭಿವೃದ್ಧಿ ಹೊಂದಬೇಕು ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ದೀಪನ್, ಅಪರ ಜಿಲ್ಲಾಧಿಕಾರಿ ಸಾಜಿದ್ ಮುಲ್ಲಾ, ತರಬೇತಿ ನಿರತ ಐ.ಎ.ಎಸ್ ಅಧಿಕಾರಿ ಝೂಪಿಶಾನ್ ಹಕ್, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಅಲ್ಲಾ ಭಕ್ಷ್, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಉಮೇಶ್, ನಗರಸಭೆ ಸ್ಥಾಯಿ ಸಮಿತಿ ಅಧ್ಯಕ್ಷೆ ಮಾಲಾ ಹುಲಸ್ವಾರ, ಸದಸ್ಯರಾದ ಹನುಮಂತ ತಳವಾರ್, ರೋಶನಿ ಮಾಲಸೇಕರ್, ಮಹರ್ಷಿ ವಾಲ್ಮೀಕಿ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ನಾಗರಾಜ್ ತಳವಾರ್, ಪ.ವರ್ಗದ ವಿವಿಧ ಸಂಘಟನೆಗಳ ಮುಖಂಡರಾದ ಗಣೇಶ್ ಬಿಸ್ಟಣ್ಣವರ್ , ದೀಪಕ್ ಕುಡಾಲ್ ಕರ್ ಮತ್ತಿತರರು ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಸಂವಿಧಾನ ಪೀಠಿಕೆಯ ಪ್ರಮಾಣ ವಚನ ಸ್ವೀಕರಿಸಲಾಯಿತು.ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಪ.ವರ್ಗದ ವಿದ್ಯಾರ್ಥಿಗಳು ಮತ್ತು ಸಾಧಕರನ್ನು ಅಭಿನಂದಿಸಲಾಯಿತು.
ಸಭಾ ಕಾರ್ಯಕ್ರಮದ ಪೂರ್ವದಲ್ಲಿ ಜಿಲ್ಲಾಧಿಕಾರಿ ಕಚೇರಿ ಆವರಣದಿಂದ ಮೆರವಣಿಗೆ ಕಾರ್ಯಕ್ರಮ ನಡೆಯಿತು.

# ಜಯಂತಿಯ ಜೊತೆಗೆ ಸಮಾಜದ ಅಭಿವೃದ್ಧಿಯ ಬಗ್ಗೆ ಚರ್ಚೆ ಮಾಡಬೇಕು

**ಬೆಳಗಾವಿ:** ಸಂಸ್ಕೃತ ಭಾಷೆಯನ್ನು ಒಂದು ಸಮುದಾಯಕ್ಕೆ ಸೀಮಿತ ಮಾಡಿದ್ದ ಸಮಯದಲ್ಲಿ, ಸಂಸ್ಕೃತವನ್ನು ಕೇಳಿಸಿಕೊಂಡರೆ ಕಿವಿಯಲ್ಲಿ ಸೀಸ ಹಾಕುವುದು, ಓದಿದರೆ ನಾಲಿಗೆ ಕೊಯುವ ಕಠಿಣ ಸಂದರ್ಭದಲ್ಲಿ ಸಂಸ್ಕೃತ ಕಲಿತು ಮಹಾನ ಕಾವ್ಯ ಬರೆದಂತಹ ಶ್ರೇಷ್ಠ ವ್ಯಕ್ತಿ ಮಹರ್ಷಿ ವಾಲ್ಮೀಕಿಯವರು ಎಂದು ಕಲಬುರ್ಗಿಯ ಡಾ. ಬಿ. ಅರ್. ಅಂಬೇಡ್ಕರ ಪದವಿ ಕಾಲೇಜಿನ ಕನ್ನಡ ಸಹಾಯಕ ಪ್ರಾಧ್ಯಾಪಕ ಡಾ. ಅರುಣ ಜೋಳದಕೂಡ್ಲಿಗಿ ಅವರು ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಮಹಾನಗರ ಪಾಲಿಕೆ ಹಾಗೂ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಮಂಗಳವಾರ (ಅ.07) ನಗರದ ಕುಮಾರ ಗಂಧರ್ವ ಕಲಾ ಮಂದಿರದಲ್ಲಿ ನಡೆದ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿಯವರ ಜಯಂತಿ ಉತ್ಸವದಲ್ಲಿ ಅವರು ಮಾತನಾಡಿದರು. ಜಯಂತಿ ಮಾಡುವುದರಿಂದ ಸಮಾಜದಲ್ಲಿ ಏನೆಲ್ಲಾ ಬದಲಾವಣೆಗಳಾಗುತ್ತಿವೆ ಎಂಬುದನ್ನು ಸಮಾಜದ ಜನ ಅವಲೋಕನ ಮಾಡಿಕೊಳ್ಳಬೇಕು. ಜಯಂತಿ ಮಾಡುವದರ ಜೊತೆಗೆ ಸಮಾಜದ ಅಭಿವೃದ್ಧಿಗಳ ಬಗ್ಗೆ ಚರ್ಚೆ ಮಾಡಬೇಕು, ಸಮುದಾಯದ ಸಮಸ್ಯೆಗಳ



ಬಗ್ಗೆ ತಿಳಿದುಕೊಳ್ಳಬೇಕು. ಸಮುದಾಯ ಅಭಿವೃದ್ಧಿಯಾಗಬೇಕಾದರೆ ನಮ್ಮ ಹೆಣ್ಣು ಮಕ್ಕಳು ಶಿಕ್ಷಿತರಾಗಬೇಕು, ಸಮಾಜದ ಎಲ್ಲ ಜನರು ಒಗ್ಗಟ್ಟಾಗಿ ಅಭಿವೃದ್ಧಿಯ ಸಲುವಾಗಿ ಹೋರಾಡಬೇಕು. ಮೇಲ್ಜಾತಿಗಳು ಕೆಳಜಾತಿಗಳ ಬಗ್ಗೆ ಕಟ್ಟು ಕತೆಗಳನ್ನು ಕಟ್ಟಿದ್ದಾರೆ ಅಂತಹ ಕಟ್ಟು ಕಥೆಗಳ ಬಗ್ಗೆ ಅಧ್ಯಯನ ಮಾಡಿ ನಿಜಾಂಶ ತಿಳಿಯಬೇಕು.ವಾಲ್ಮೀಕಿ ಯಾರು ನಿಜ ರಾಮಾಯಣ ಯಾವುದು ಎಂಬುದನ್ನು ಅಧ್ಯಯನ ಮಾಡಿ ತಿಳಿದುಕೊಳ್ಳಬೇಕು. ಇತಿಹಾಸವನ್ನು ತಿಳಿದುಕೊಂಡು ಸಮಾಜದ ಜನರನ್ನು ಜಾಗೃತಿ ಮಾಡಬೇಕು ಎಂದು ಪ್ರಾಧ್ಯಾಪಕ ಡಾ. ಅರುಣ ಜೋಳದಕೂಡ್ಲಿಗಿ ಅವರು ತಿಳಿಸಿದರು. ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಬಸವರಾಜ ಹೆಗ್ಗನಾಯಕ ಅವರು ಮಾತನಾಡಿ ಭಾರತದ ಭವ್ಯ ಪರಂಪರೆಯಲ್ಲಿ ರಾಮಾಯಣ ಹಾಗೂ ಮಹಾಭಾರತ ವಿಶೇಷವಾದ ಸ್ಥಾನ ಪಡೆದಿವೆ, ಜೀವನದಲ್ಲಿ ಬದುಕುವ ಮೌಲ್ಯವನ್ನು ತಿಳಿಸಿಕೊಡುತ್ತವೆ, ವಾಲ್ಮೀಕಿ ಬರೆದಂತಹ ರಾಮಾಯಣ ಕೇವಲ ಕಾವ್ಯ ಅಲ್ಲಾ ಧರ್ಮ, ನಿಷ್ಠೆ, ಸತ್ಯದ ಪಾತ್ರವನ್ನು ವಹಿಸಿದಂತಹದ್ದಾಗಿದೆ.

ನಾವು ಶಿಕ್ಷಣಕ್ಕೆ ಹೆಚ್ಚು ಪ್ರಾಶಸ್ತ್ಯ ಪಡೆಯಬೇಕು, ಜೀವನ ಸೃಷ್ಟಿಸುವಂತಹ ಕೌಶಲ್ಯಗಳಿಗೆ ಹೆಚ್ಚು ಮಹತ್ವ ಕೊಡಬೇಕು, ಸಂಘಟಿತರಾಗಬೇಕು ಶಿಕ್ಷಣ ಪಡೆಯಬೇಕು, ರಾಜಕೀಯ, ಸಾಮಾಜಿಕ ಹಾಗೂ ಶೈಕ್ಷಣಿಕವಾಗಿ ಬೆಳೆಯಬೇಕು ಎಂದರು ಮಹಾನಗರ ಪಾಲಿಕೆ ಉಪ ಆಯುಕ್ತ ಉದಯಕುಮಾರ ತಳವಾರ ಮಾತನಾಡಿದರು. ಅಪರ ಜಿಲ್ಲಾಧಿಕಾರಿ ವಿಜಯಕುಮಾರ ಹೊನಕೇರಿ, ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕ ರವಿ ಬಂಗಾರಪ್ಪನವರ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ರಾಮನಗೌಡ ಕನ್ನೊಳ್ಳಿ, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಉಪನಿರ್ದೇಶಕ ಬಸವರಾಜ ಕುರಿಹುಲಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪ ನಿರ್ದೇಶಕಿ ವಿದ್ಯಾವತಿ ಭಜಂತ್ರಿ, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಉಪ ನಿರ್ದೇಶಕ ಮಲ್ಲಿಕಾರ್ಜುನ ನಾಯಕ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಹರ್ಷ, ಡಿಒಡಿಸಿ ಯೋಜನಾ ನಿರ್ದೇಶಕ ಕಲಾದಗಿ, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಕಾಂಬಳೆ, ಕ್ರೀಡಾ ಇಲಾಖೆ ಉಪ ನಿರ್ದೇಶಕ ಶ್ರೀನಿವಾಸ, ವಾಲ್ಮೀಕಿ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ಸದಾಶಿವ ಭೀಮಗೋಳ, ಕರ್ನಾಟಕ ರಾಜ್ಯ ವಾಯುವ್ಯ ಸಾರಿಗೆ ನಿಗಮದ ಉಪಾಧ್ಯಕ್ಷ ಸುನೀಲ ಹಣಮಣ್ಣವರ, ಸಮಾಜದ ಮುಖಂಡರಾದ ರಾಜಶೇಖರ ತಳವಾರ, ಭಾವಕಣ್ಣ ಬಂಗ್ಯಾಗೋಳ, ವಾಯ್.ಹೆಚ್. ಕೋಳೆಕರ, ಸಂಜಯ ನಾಯಕ, ವಿಜಯ ತಳವಾರ, ಮಹೇಶ ಶೀಗಿಹಳ್ಳಿ, ಮಲ್ಲಿಕಾರ್ಜುನ ಹೆಗ್ಗನಾಯಕ, ಪಾಂಡುರಂಗ ನಾಯಕ, ನಾಗೇಂದ್ರ ನಾಯಕ, ಯುವರಾಜ ತಳವಾರ, ಆನಂದ ಶಿರುರ, ಸಾಗರ ದೇವನಗಿ ಹಾಗೂ ವಿವಿಧ ಗಣ್ಯಮಾನ್ಯರು ಉಪಸ್ಥಿತರಿದ್ದರು.



**ಭವ್ಯ ಮೆರವಣಿಗೆ:** ಕಾರ್ಯಕ್ರಮಕ್ಕೂ ಮುನ್ನ ಶಾಸಕರಾದ ರಾಜು(ಆಸೀಫ) ಸೇಠ ಅವರು ಮಹರ್ಷಿ ವಾಲ್ಮೀಕಿ ಅವರು ಪುತ್ಥಳುಗೆ ಪುಷ್ಪಾರ್ಚನೆ ಮಾಡುವ ಭವ್ಯ ಮೆರವಣಿಗೆಗೆ ಚಾಲನೇ ನೀಡದರು. ಮಹಾಪೌರ ಮಂಗೇಶ ಪವಾರ, ಉಪಮಹಾಪೌರರಾದ ವಾಣಿ ವಿಲಾಸ ಜೋಶಿ, ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್, ಜಿಲ್ಲಾಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ ಶಿಂಧೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಸಾರ್ವಜನಿಕರು ಉಪಸ್ಥಿತರಿದ್ದರು.

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue :207, Postal Reg No. PMG/KA/NK/BM/135/25-27 / POST AT Vantamury Colony Post Office